24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 84 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 19 2026 ಶನಿವಾರ

## ಒಳಪುಟಗಳಲ್ಲಿ

ಜಮ್ಮು-ಕಾಶ್ಮೀರದಲ್ಲಿ ಉಗ್ರರ ಜಾಲ ಪತ್ತೆ ಲಷ್ಕರ್ ಉಗ್ರರಿಗೆ ಆಶ್ರಯ ನೀಡಿದ ಮೂವರು ಶಂಕಿತರ ವಿಚಾರಣೆ - ಪು.4

ಜಯನಗರದ 5ನೇ ಬ್ಲಾಕ್‌ನಲ್ಲಿ ದಕ್ಷಿಣ ಭಾರತದ ಮೊದಲ ಪುರುಷರ ವಸ್ತ್ರವಿನ್ಯಾಸದ ಬಿ-ಪೋಕ್ ಸ್ಟುಡಿಯೋ ಆರಂಭ - ಪು.5

# ಕರ್ನಾಟಕದ 2ನೇ ಅಧಿಕೃತ ಭಾಷೆ ತುಳು: ಕರಾವಳಿಗೆ ಮಾನ್ಯತೆ

## ಸಂಪುಟ ಸಭೆಯಲ್ಲಿ ಐತಿಹಾಸಿಕ ತೀರ್ಮಾನ: ದ.ಕ.ಜಿಲ್ಲೆಗೆ ಮಂಗಳೂರು ಜಿಲ್ಲೆ ಮರುನಾಮಕರಣ

**ಮಂಗಳೂರು, ಸೆ.18:** ಮಂಗಳೂರಿನಲ್ಲಿ ಇದೇ ಮೊದಲ ಬಾರಿಗೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣ 'ಪ್ರಜಾಸೌಧ'ದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಯಿತು. ನಾಲ್ಕು ಗಂಟೆಗಳ ಕಾಲ ನಡೆದ ಸಭೆಯಲ್ಲಿ ಕರಾವಳಿ ಅಭಿವೃದ್ಧಿಗೆ ಸಂಬಂಧಿಸಿದಂತೆ 40 ವಿಷಯಗಳ ಬಗ್ಗೆ ಚರ್ಚೆ ನಡೆಯಿತು.

ಸಂಪುಟ ಸಭೆಯಲ್ಲಿ 32,611 ಕೋಟಿ ರೂ. ಮೌಲ್ಯದ ವಿವಿಧ ಯೋಜನೆಗಳಿಗೆ ಅನುಮೋದನೆ ದೊರೆತಿದ್ದು, ಗ್ರಾಮೀಣಾಭಿವೃದ್ಧಿ, ಕರಾವಳಿ ಅಭಿವೃದ್ಧಿ, ಪ್ರವಾಸೋದ್ಯಮ, ಕೈಗಾರಿಕೆ, ಮೀನುಗಾರಿಕೆ ಸೇರಿ ಹಲವು ಕ್ಷೇತ್ರಗಳಿಗೆ ನವಚೈತನ್ಯ ತುಂಬುವ ನಿರ್ಧಾರ ಕೈಗೊಳ್ಳಲಾಗಿದೆ. 16,000 ಕೋಟಿ ರೂ. ಗ್ರಾಮೀಣ ಅಭಿವೃದ್ಧಿಗೆ, 16,000 ಕೋಟಿ ರೂ. ಕರಾವಳಿ ಪ್ರದೇಶ ಅಭಿವೃದ್ಧಿಗೆ ಮೀಸಲಿಡಲಾಗಿದೆ. ವಿಶೇಷ ಸಮುದ್ರ ವಲಯ ರೂಪಿಸುವ ಮೂಲಕ ಕರಾವಳಿ ಮೀನುಗಾರಿಕೆಗೆ ಆರ್ಥಿಕ ಚಟುವಟಿಕೆ ವಿಸ್ತರಣೆ, 150 ಎಕರೆ ಪ್ರದೇಶದಲ್ಲಿ ಮೀನುಗಾರಿಕಾ ಪಾರ್ಕ್ ನಿರ್ಮಾಣಕ್ಕೆ ತೀರ್ಮಾನ ಕೈಗೊಳ್ಳಲಾಗಿದೆ. ಮಂಗಳೂರು ಬಂದರು ಮತ್ತು ಕೋಟೆಪುರ ಪ್ರದೇಶದಲ್ಲಿ ನೇವಿಗೇಷನ್ ಬಾಯ್ಸ್ ಅಳವಡಿಕೆ, ದೋಣಿಗಳ ಸುರಕ್ಷಿತ ಸಂಚಾರಕ್ಕೆ ಅನುಮೋದನೆ ದೊರೆತಿದೆ.

ಕರಾವಳಿ ವಲಯ ನಿಯಂತ್ರಣ ಯೋಜನೆ 2019 ಪರಿಷ್ಕರಣೆಗೂ ಅನುಮೋದನೆ ದೊರೆತಿದ್ದು, ಮೀನುಗಾರರು, ಸಂಘಟನೆಗಳು ಹಾಗೂ ಜಿಲ್ಲಾ ಆಡಳಿತದಿಂದ ಬಂದ ಬೇಡಿಕೆಗಳಿಗೆ ಸ್ಪಂದಿಸಲಾಗಿದೆ. ಬಂಟ್ವಾಳ, ಬಳ್ಳಾರಿ, ಮಲ್ಪೆವಾರು ಸೇರಿದಂತೆ ಹಲವು ಗ್ರಾಮಗಳಿಗೆ ಮುಂದಿನ 5 ವರ್ಷಗಳ ಕಾಲ ವಿಸ್ತರಿಸಲ್ಪಟ್ಟಿದ್ದು, ಲಕ್ಷಾಂತರ ಜನರಿಗೆ ಅನುಕೂಲವಾಗಲಿದೆ. ಡಿ.1ರಂದು ನಡೆಯಲಿದ್ದು, ಮತಪತ್ರದ ಮೂಲಕ ಚುನಾವಣೆ ನಡೆಸಲು

### ಗ್ರಾಮೀಣ ಸಂಪರ್ಕ ರಸ್ತೆ ನಿರ್ಮಾಣಕ್ಕೆ 10 ಸಾವಿರ ಕೋಟಿ ರೂ.

ಮುಖ್ಯಮಂತ್ರಿಗಳ ಗ್ರಾಮೀಣಾಭಿವೃದ್ಧಿ ಯೋಜನೆ ಅಡಿಯಲ್ಲಿ 10,000 ಕೋಟಿ ರೂ. ವೆಚ್ಚದಲ್ಲಿ 15,000 ಕಿ.ಮೀ. ಗ್ರಾಮೀಣ ಸಂಪರ್ಕ ರಸ್ತೆಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. 6000 ಕೋಟಿ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿಗಳ ನಿರ್ಮಾಣ, 1,99,458 ಕಿ.ಮೀ. ಉದ್ದದ ಗ್ರಾಮೀಣ ರಸ್ತೆಗಳನ್ನು ಗುಣಮಟ್ಟದ ರೀತಿಯಲ್ಲಿ ಅಭಿವೃದ್ಧಿಪಡಿಸಲು ನಿರ್ಧಾರ ಕೈಗೊಳ್ಳಲಾಗಿದೆ. ಬಂದರು ಅಭಿವೃದ್ಧಿಗೆ 6925 ಕೋಟಿ ರೂ. ವೆಚ್ಚದಲ್ಲಿ DBFOT ಮಾದರಿಯಲ್ಲಿ ಅನುಮೋದನೆ ದೊರೆತಿದ್ದು, 44,800 ಉದ್ಯೋಗಾವಕಾಶ ಸೃಷ್ಟಿಯಾಗಲಿದೆ. ಗಂಗೊಳ್ಳಿಯಲ್ಲಿ 322 ಕೋಟಿ ರೂ. ವೆಚ್ಚದಲ್ಲಿ ಹಡಗು ನಿರ್ಮಾಣ ಅಂಗಣ ಅಭಿವೃದ್ಧಿ ಯೋಜನೆ ಕೈಗೊಳ್ಳಲಾಗಿದೆ.

151.31 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ನೀಡಲಾಗಿದೆ.

**ಅರಣ್ಯ ಸೇವೆಗಳ ತಿದ್ದುಪಡಿ ನಿಯಮಗಳು:** ಮೂಲಕ 13 ಬುಡಕಟ್ಟು ಜನಾಂಗಗಳಿಗೆ ಶಾಶ್ವತ ವಿಶೇಷ ಪ್ರಾಧಾನ್ಯ ಕಲ್ಪಿಸಲಾಗಿದೆ. ಹಲಸು, ಸೀಬೆ, ಕುಡಿಯ, ಚಿಟ್ಟೆಕುರುಬು, ಪಟೇಯನ್ ಸಮುದಾಯಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ವಿಶೇಷ ಅವಕಾಶ ಒದಗಿಸಲಾಗಿದೆ. ಕಾರವಾರ ವಿಮಾನ ನಿಲ್ದಾಣ ವಿಸ್ತರಣೆಗೆ 250.05 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ದೊರೆತಿದ್ದು, 3250 ಮೀಟರ್ ರನ್‌ವೇ ನಿರ್ಮಾಣದ ಮೂಲಕ ಎ–320 ವಿಮಾನಗಳ ಕಾರ್ಯಾಚರಣೆಗೆ ಅನುಕೂಲವಾಗಲಿದೆ.

### ವಿವಿಯಾಗಿ ಮೀನುಗಾರಿಕೆ ಕಾಲೇಜು ಮೇಲ್ದರ್ಜೆಗೆ

ಮೀನುಗಾರಿಕೆ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಲಾಗಿದ್ದು, ಮಂಗಳೂರು ಮೀನುಗಾರಿಕಾ ಕಾಲೇಜನ್ನು ವಿಶ್ವವಿದ್ಯಾಲಯವಾಗಿ ಉನ್ನತೀಕರಿಸಲು ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮೀನುಗಾರಿಕೆ ಕೇಂದ್ರಗಳ ನಿರ್ಮಾಣಕ್ಕೆ 20 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ದೊರೆತಿದೆ. ಮೀನುಗಾರರ ಸುರಕ್ಷತೆಗಾಗಿ ಕೋಟೆಪುರ ಮತ್ತು ಬಂಗರೆ ಗ್ರಾಮಗಳಲ್ಲಿ ಜೆಟ್ಟಿ ಹಾಗೂ ನೆಲೆಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ.

### ಮಂಗಳೂರಿನಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಮೊದಲ ಸಚಿವ ಸಂಪುಟ ಸಭೆ ಅನುಮೋದನೆ



### ಕೇರಳ, ಗೋವಾ ಮಾದರಿಯಲ್ಲಿ ರಾಜ್ಯದ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಗೆ ಒಪ್ಪಿಗೆ

ರಾಜ್ಯದ ಕರಾವಳಿ ಪ್ರವಾಸೋದ್ಯಮವನ್ನು ಕೇರಳ ಮತ್ತು ಗೋವಾ ಮಾದರಿಯಲ್ಲಿ ರೂಪಿಸುವ ಯೋಜನೆಗೆ ಅನುಮೋದನೆ ದೊರೆತಿದ್ದು, ಮಂಗಳೂರು, ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಒಟ್ಟು 238 ಕೋಟಿ ರೂ. ವೆಚ್ಚದಲ್ಲಿ ಪ್ರವಾಸೋದ್ಯಮ ಯೋಜನೆಗಳನ್ನು ಪಿಪಿಪಿ ಮಾದರಿಯಲ್ಲಿ ಕೈಗೊಳ್ಳಲಾಗುತ್ತಿದೆ. ಮಂಗಳೂರು ಲೈಟ್‌ಹೌಸ್ ಸುತ್ತಲಿನ ಪ್ರದೇಶದಲ್ಲಿ 60.34 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಮೂಲಸೌಕರ್ಯ ಅಭಿವೃದ್ಧಿ, 3–ಸ್ಟಾರ್ ಅತಿಥಿಗೃಹ ನಿರ್ಮಾಣ, ಸ್ಥಳೀಯ ಕರಕುಶಲ ವಸ್ತುಗಳಿಗೆ ಉತ್ತೇಜನ ನೀಡುವ ಯೋಜನೆಗಳು ಜಾರಿಗೆ ಬರಲಿವೆ. ಪ್ರವಾಸೋದ್ಯಮ ಯೋಜನೆಗಳಡಿ ಮಂಗಳೂರು ಕೊಟಿಕಲ್‌ನಲ್ಲಿ 73 ಕೋಟಿ ರೂ. ವೆಚ್ಚದಲ್ಲಿ Riverfront Wellness Resort, ಉಡುಪಿ ತ್ರಾಸಿ–ಮರವಂತೆ ಬೀಚ್‌ನಲ್ಲಿ 48 ಕೋಟಿ ರೂ. ವೆಚ್ಚದಲ್ಲಿ ಸಾಹಸ–ಮನರಂಜನಾ ವಲಯ, ಚಿಕ್ಕಮಗಳೂರು ರಾಮಪುರದಲ್ಲಿ 64 ಕೋಟಿ ರೂ. ವೆಚ್ಚದಲ್ಲಿ ಪ್ರವಾಸೋದ್ಯಮ ಧಾಮ ನಿರ್ಮಾಣಕ್ಕೆ ಅನುಮೋದನೆ ದೊರೆತಿದೆ.

### ತುಳುಭಾಷೆ ಅನುವಾದ ತರಬೇತಿ ಚಟುವಟಿಕೆಗೆ ಪ್ರತಿವರ್ಷ 82 ಲಕ್ಷ

ಸಂಪುಟ ಸಭೆಯಲ್ಲಿ, ತುಳು 2ನೇ ಆಡಳಿತ ಭಾಷೆಯಾಗಿ ಘೋಷಿಸುವ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಇದರೊಂದಿಗೆ ತುಳು ಭಾಷಿಕರ ಹಲವು ದಶಕಗಳ ಹೋರಾಟ ಹಾಗೂ ಬಹುದಿನಗಳ ನಿರೀಕ್ಷೆಗೆ ಕೊನೆಗೂ ಐತಿಹಾಸಿಕ ಜಯ ಸಿಕ್ಕಂತಾಗಿಗೆ. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸಚಿವ ಸಂಪುಟ ಸಭೆಯ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟ ತೀರ್ಮಾನವನ್ನು ಘೋಷಣೆ ಮಾಡಿದರು. ಪಂಚ ದ್ರಾವಿಡ ಭಾಷೆಗಳಲ್ಲಿ ಒಂದಾಗಿರುವ ತುಳು, ಪ್ರಾಚೀನ ಹಾಗೂ ಆಧುನಿಕ ಸಾಹಿತ್ಯಿಕ ಸಮೃದ್ಧತೆಯನ್ನು ಹೊಂದಿರುವ ಅಪೂರ್ವ ಭಾಷೆ. ರಾಜ್ಯ ಸರ್ಕಾರದಿಂದ ಎರಡನೇ ಅಧಿಕೃತ ಭಾಷಾ ಸ್ಥಾನಮಾನ ಲಭಿಸಿರುವುದು, ಭಾರತೀಯ ಸಂವಿಧಾನದ 8ನೇ ಪರಿಚ್ಛೇದಕ್ಕೆ ತುಳುಭಾಷೆಯನ್ನು ಸೇರ್ಪಡೆಗೊಳಿಸುವ ಹೋರಾಟಕ್ಕೆ ಪ್ರಬಲ ವೇದಿಕೆಯಾಗಲಿದೆ. ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರಮುಖವಾಗಿ ಮಾತನಾಡುವ ತುಳುವಿಗೆ ಹೆಚ್ಚುವರಿ ಅಧಿಕೃತ ಭಾಷಾ ಮಾನ್ಯತೆ ನೀಡಬೇಕೆಂದು ದಶಕಗಳಿಂದ ತುಳು ಸಾಹಿತ್ಯ ಅಕಾಡೆಮಿ, ತುಳು ಪರ ಸಂಘಟನೆಗಳು, ಸಾಹಿತಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ನಿರಂತರವಾಗಿ ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದರು. ತುಳುಭಾಷೆಗೆ ಅಧಿಕೃತ ಸ್ಥಾನಮಾನ ನೀಡುವ ಸಾಧಕ–ಬಾಧಕಗಳನ್ನು ಪರಿಶೀಲಿಸಲು ಹಿರಿಯ ಶಿಕ್ಷಣತಜ್ಞ ಡಾ. ಎಂ. ಮೋಹನ್ ಆಳ್ವ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚಿಸಲಾಗಿತ್ತು. ಈ ಸಮಿತಿಯು ಹೊರ ರಾಜ್ಯಗಳಲ್ಲಿನ ಭಾಷಾ ನೀತಿ ಮಾದರಿಗಳನ್ನು ಅಧ್ಯಯನ ಮಾಡಿ ಸರ್ಕಾರಕ್ಕೆ ವಿಸ್ತೃತ ವರದಿ ಸಲ್ಲಿಸಿತ್ತು. ಹಲವು ದಶಕಗಳಿಂದ ತುಳು ಸಾಹಿತ್ಯ ಅಕಾಡೆಮಿ, ಸಂಘಟನೆಗಳು, ಸಾಹಿತಿಗಳು ಹಾಗೂ ಜನಪ್ರತಿನಿಧಿಗಳು ಒತ್ತಾಯಿಸುತ್ತಿದ್ದ ಬೇಡಿಕೆ ಇಂದು ಸರ್ಕಾರದ ಘೋಷಣೆಯ ಮೂಲಕ ಸಾಕಾರಗೊಂಡಿದೆ. ಅನುವಾದ, ತರಬೇತಿ ಮತ್ತು ಭಾಷಾ ಬಳಕೆಗೆ ಸಂಬಂಧಿಸಿದ ಚಟುವಟಿಕೆಗಳಿಗೆ ಪ್ರತಿ ವರ್ಷ 82 ಲಕ್ಷ ರೂ. ನೀಡಲು ನಿರ್ಧರಿಸಲಾಗಿದೆ.

## ಕಾಂಗ್ರೆಸ್‌ಗೆ ಬೆಂಬಲ ಘೋಷಿಸಿದ ಮಮತಾ

**ಕೋಲ್ಕತಾ, ಸೆ.18:** ಪಶ್ಚಿಮ ಬಂಗಾಳದಲ್ಲಿ ಮತ್ತೊಂದು ರಾಜಕೀಯ ಹೈಡ್ರಾಮಾ ನಡೆದಿದ್ದು, ನಂದಿಗ್ರಾಮ ಉಪ ಚುನಾವಣೆಯಲ್ಲಿ ಮಮತಾ ಬ್ಯಾನರ್ಜಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಬೆಂಬಲ ಘೋಷಣೆ ಮಾಡಿದ್ದಾರೆ.

ನಂದಿಗ್ರಾಮ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವುದಾಗಿ ಮಾಜಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶುಕ್ರವಾರ ಘೋಷಿಸಿದ್ದಾರೆ.

ಮಮತಾ ಬಣದಿಂದ ಕಣಕ್ಕಿಳಿದಿದ್ದ ಅಭ್ಯರ್ಥಿ ಸಂಚಿತಾ ಪ್ರಧಾನ ಡೇ ಅವರು ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರನ್ನು ಭೇಟಿಯಾದ ಬಳಿಕ ನಾಮಪತ್ರ ಹಿಂಪಡೆದ ಕೆಲವೇ ಗಂಟೆಗಳಲ್ಲಿ ಮಮತಾ ಬ್ಯಾನರ್ಜಿ ಈ ಘೋಷಣೆ ಮಾಡಿದ್ದಾರೆ.

ನಂದಿಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡುವ ನಿರ್ಧಾರವನ್ನು ಇಂಡಿಯಾ ಮೈತ್ರಿಕೂಟವನ್ನು ಬಲಪಡಿಸುವ ಉದ್ದೇಶದಿಂದ ಕೈಗೊಳ್ಳಲಾಗಿದೆ ಎಂದು ಮಮತಾ ಬ್ಯಾನರ್ಜಿ ತಿಳಿಸಿದ್ದಾರೆ.

ಅಂತೆಯೇ ರೇಜಿನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಯಾರನ್ನು ಬೆಂಬಲಿಸಬೇಕು ಎಂಬ ಬಗ್ಗೆ ಬಳಿಕ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

## ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ

APEX

(ಷೆಡ್ಯೂಲ್ಡ್ ಬ್ಯಾಂಕ್)

"ಉತ್ತುಂಗ", ನಂ. 1, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018. ದೂರವಾಣಿ: 080–26983700/22976600/22976622, ಫ್ಯಾಕ್ಸ್: 080–26628521,
ಇ–ಮೇಲ್: admin@karnatakaapex.bank.in, ವೆಬ್‌ಸೈಟ್: www.karnatakaapex.bank.in



### ಸಭಾಧ್ಯಕ್ಷರ ಭಾಷಣ

ಆತ್ಮೀಯ ಸಹಕಾರಿ ಬಂಧುಗಳೇ,

ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು, ಇದರ 101 ನೇ ವಾರ್ಷಿಕ ಮಹಾಸಭೆಗೆ ಬ್ಯಾಂಕಿನ ಆಡಳಿತ ಮಂಡಳಿಯ ಪರವಾಗಿ ಹಾಗೂ ವೈಯಕ್ತಿಕವಾಗಿ ತಮ್ಮೆಲ್ಲರಿಗೂ ಹೃತ್ಪೂರ್ವಕ ಸ್ವಾಗತವನ್ನು ಕೋರುತ್ತೇನೆ.

- ಬ್ಯಾಂಕು ಸಹಕಾರ ತತ್ವ ಹಾಗೂ ಧ್ಯೇಯೋದ್ದೇಶಗಳನ್ನನುಸರಿಸಿ ಯಶಸ್ವಿಯಾಗಿ 111 ವರ್ಷಗಳ ಸೇವೆಯನ್ನು ಪೂರೈಸಿದ್ದು, ದೇಶದ ರಾಜ್ಯ ಸಹಕಾರಿ ಬ್ಯಾಂಕುಗಳ ಪೈಕಿ ಅತ್ಯುತ್ತಮ ಬ್ಯಾಂಕೆಂಬ ಪ್ರಶಂಸೆಗೆ ಪಾತ್ರವಾಗಿದೆ ಎಂಬುದನ್ನು ತಿಳಿಸಲು ಹರ್ಷಿಸುತ್ತೇನೆ.
- 2025–26 ನೇ ಸಾಲಿನಲ್ಲಿ ಎಲ್ಲಾ ರೀತಿಯ ಆರ್ಥಿಕ ಚಟುವಟಿಕೆಗಳಲ್ಲಿ ಉತ್ತಮ ಸಾಧನೆಯನ್ನು ಮಾಡಿದ್ದು, ದಿನಾಂಕ 31.03.2026 ರ ಅಂತ್ಯಕ್ಕೆ ರೂ.15439 ಕೋಟಿಗಳ ಠೇವಣಿಯನ್ನು ಸಂಗ್ರಹಿಸಿದ್ದು, ದುಡಿಯುವ ಬಂಡವಾಳವು ರೂ.37994 ಕೋಟಿಗಳಿಗೆ ಏರಿಕೆಯಾಗಿದ್ದು, ವರದಿ ಸಾಲಿನಲ್ಲಿ ರೂ.447.48 ಕೋಟಿಗಳಷ್ಟು ಲಾಭವನ್ನು ಗಳಿಸಿರುತ್ತದೆ. ಅದರಲ್ಲಿ ಶಾಸನಬದ್ಧ ಅವಕಾಶಗಳನ್ನು ಕಲ್ಪಿಸಿ ಹಾಗೂ ಆದಾಯ ತೆರಿಗೆಯನ್ನು ಪಾವತಿಸಿದ ನಂತರ ರೂ.75 ಕೋಟಿಗಳ ನಿವ್ವಳ ಲಾಭವನ್ನು ಗಳಿಸಿರುತ್ತದೆ. ಬ್ಯಾಂಕಿನ ನಿವ್ವಳ ಅನುತ್ಪಾದಕ ಆಸ್ತಿ ಪ್ರಮಾಣವು ದಿನಾಂಕ 31.03.2026 ರ ಅಂತ್ಯಕ್ಕೆ ಶೇ.4.40 ರಷ್ಟಿರುತ್ತದೆಂದು ತಿಳಿಸಲಿಚ್ಛಿಸುತ್ತೇನೆ.
- ಬ್ಯಾಂಕು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ಪ್ರೋತ್ಸಾಹಧನ ನೀಡುತ್ತಿದೆ, ಅಲ್ಲದೇ ನಬಾರ್ಡ್‌ನಿಂದ ಕೃಷಿ ಸಾಲ ಪಡೆದು ಜಿಲ್ಲಾ ಬ್ಯಾಂಕುಗಳಿಗೆ ವಿತರಿಸಲಾಗುತ್ತಿದೆ.
- ಕೇಂದ್ರ ಸರ್ಕಾರವು ಗ್ರಾಮಾಂತರ ಮಟ್ಟದಲ್ಲಿ ಸಹಕಾರ ಸಂಘಗಳನ್ನು ಬಹುಸೇವಾ ಕೇಂದ್ರಗಳನ್ನಾಗಿ ಪರಿವರ್ತಿಸಲು ಪ್ರಾರಂಭಿಸಿರುವ PACS – as – MSC ಯೋಜನೆಯನ್ನು ಬ್ಯಾಂಕಿನಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ.
- ಬ್ಯಾಂಕ್ ಕೋರ್ ಬ್ಯಾಂಕಿಂಗ್ ವ್ಯವಸ್ಥೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ತನ್ನ ಎಲ್ಲಾ 52 ಶಾಖೆಗಳು BSNL SDWAN (Fortinet) ನ್ನು, MPLS ನ್ನು, ಪ್ರಾಥಮಿಕ ಸಿಮ್ ಹಾಗೂ ಬ್ರಾಡ್‌ಬ್ಯಾಂಡ್‌ನ್ನು ಸುರಕ್ಷಿತ ಫೈರ್‌ವಾಲ್, ಸ್ವಿಚ್ ಮತ್ತು ನೆಟ್‌ವರ್ಕಿಂಗ್ ಭದ್ರತೆಯೊಂದಿಗೆ ದ್ವಿತೀಯ ಲಿಂಕ್ ಆಗಿ ಸಂಪರ್ಕಿಸುವ ಮೂಲಕ CBS ಅಡಿಯಲ್ಲಿದೆ. RBI ಮತ್ತು NABARD ನಿರ್ದೇಶನದಂತೆ ಬ್ಯಾಂಕು IT / IS Policy, Cyber Security Policy, ಇತ್ಯಾದಿ ಪಾಲಿಸಿಗಳನ್ನು ಅಳವಡಿಸಿಕೊಂಡಿದೆ, ಸೈಬರ್ ಭದ್ರತಾ ನೀತಿಯ ಪ್ರಕಾರ ಬ್ಯಾಂಕ್ C-Soc & SIEM ನ್ನು ಜಾರಿಗೆ ತಂದಿರುವುದರ ಜೊತೆಗೆ ವಾಣಿಜ್ಯ ಬ್ಯಾಂಕುಗಳಲ್ಲಿ ನೀಡುತ್ತಿರುವ ಬಹುತೇಕ ಸೌಕರ್ಯಗಳನ್ನು ಗ್ರಾಹಕರಿಗೆ ಒದಗಿಸಲಾಗುತ್ತಿದೆ.
- UPI, IMPS, BBPS, AUA / KUA (AEPS), e-KYC, NFS (RuPay – ATM), E-com, PoS-Issuer, RTGS, NEFT, CCIL-NDS-Call-Om-TREPS, CTS, NACH, ABPS, DBT ಗಳು RBI ಗೆ ನೇರ ಸದಸ್ಯರಾಗಿರುತ್ತೇವೆ.
- ಬ್ಯಾಂಕು UPI (BHIM / Phonepay / Paytm / Googlepay / Amazonpay), IMPS, Mobile Banking ಲೈವ್ ಆಗಿದೆ. ಅಲ್ಲದೆ (ಮೂರನೇ ವ್ಯಕ್ತಿಯಿಂದ) mPOS ಸ್ವಾಧೀನವನ್ನು ಜಾರಿಗೆ ತರಲಾಗಿದೆ.
- ಬ್ಯಾಂಕು NPCI ಯ NFS ಇ–ಫ್ರಾಡ್ ರಿಸ್ಕ್ ಮ್ಯಾನೇಜ್‌ಮೆಂಟ್‌ನಲ್ಲಿ ಲೈವ್ ಆಗಿದೆ.
- ರಾಜ್ಯ ಸರ್ಕಾರಿ ನೌಕರರ ಅನುಕೂಲಕ್ಕಾಗಿ ಸದರಿಯವರ ಉಳಿತಾಯ ಖಾತೆಗಳನ್ನು ರಾಜ್ಯ ಸರ್ಕಾರದ ನಿರ್ದೇಶನದಂತೆ "ಸಮಗ್ರ ಸಂಬಳ ಪ್ಯಾಕೇಜ್ ಖಾತೆ" ಗಳನ್ನಾಗಿ ಪರಿವರ್ತಿಸಿ, ಸರ್ಕಾರಿ ನೌಕರರಿಗೆ ಸಂಬಳದ ಆಧಾರದ ಮೇಲೆ ಮೀರೆಳೆತ ಸಾಲ ಸೌಲಭ್ಯ, ವಿಮಾ ಸೌಲಭ್ಯ ಹಾಗೂ ಗೃಹ / ಅಡಮಾನ / ಕಂತು ಇನ್ನಿತರೆ ಸಾಲಗಳನ್ನು ಪಡೆದಲ್ಲಿ ರಿಯಾಯಿತಿ ಬಡ್ಡಿ ದರ ಸೇರಿದಂತೆ, ಪ್ರೊಸೆಸಿಂಗ್ ಚಾರ್ಜಸ್‌ನಲ್ಲಿಯೂ ರಿಯಾಯಿತಿ ನೀಡಲಾಗುತ್ತಿದೆ.
- 2026–27 ನೇ ಸಾಲಿನಲ್ಲಿ ಬ್ಯಾಂಕಿನ ಸ್ವಂತ ನಿಧಿಯನ್ನು ರೂ.3175 ಕೋಟಿಗಳಿಗೆ ತಲುಪಲು, ಠೇವಣಾತಿಗಳನ್ನು ರೂ.16100 ಕೋಟಿಗಳಿಗೆ ಹೆಚ್ಚಿಸಲು, ದುಡಿಯುವ ಬಂಡವಾಳವನ್ನು ರೂ.40750 ಕೋಟಿಗಳಿಗೆ ಹೆಚ್ಚಳಗೊಳಿಸಲು ಹಾಗೂ ರೂ.85 ಕೋಟಿಗಳಷ್ಟು ನಿವ್ವಳ ಲಾಭಾಂಶವನ್ನು ಹೊಂದಲು ಯೋಜನೆಯನ್ನು ಹಮ್ಮಿಕೊಂಡಿದ್ದು, ಈ ನಿಟ್ಟಿನಲ್ಲಿ ಕಾರ್ಯಯೋಜನೆಯನ್ನು ರೂಪಿಸಲಾಗಿದೆ.
- 2025–26 ನೇ ಸಾಲಿನಲ್ಲಿ ವಿತರಿಸಲಾದ ರೂ.11782 ಕೋಟಿ ಕೆ.ಸಿ.ಸಿ ಅಲ್ಪಾವಧಿ ಕೃಷಿ ಸಾಲಗಳ ಪೈಕಿ, ನಬಾರ್ಡ್ ಪುನರ್ಧನ ರೂ.9346 ಕೋಟಿಗಳ ಜೊತೆಗೆ ಅಪೆಕ್ಸ್ ಬ್ಯಾಂಕು ತನ್ನ ಸ್ವಂತ ಬಂಡವಾಳದಿಂದ ರೂ.2436 ಕೋಟಿಗಳನ್ನು 28,11,983 ರೈತರಿಗೆ ಬಿಡುಗಡೆ ಮಾಡಲಾಗಿದೆ ಹಾಗೂ 2026–27 ನೇ ಸಾಲಿಗೂ ಇನ್ನೂ ಹೆಚ್ಚಿನ ಸಾಲವನ್ನು ನೀಡುವ ಗುರಿ ಹೊಂದಲಾಗಿದೆ.
- ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಹಕಾರದೊಂದಿಗೆ ಅಪೆಕ್ಸ್ ಬ್ಯಾಂಕು ಮತ್ತು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಸಹಯೋಗದೊಂದಿಗೆ ರಾಜ್ಯದ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಗಣಕೀಕರಣಗೊಳಿಸುವ ಕಾರ್ಯವು ಪ್ರಗತಿಯಲ್ಲಿದೆ.
- ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಮತ್ತು ಗ್ರಾಮೀಣ ರೈತರು ಹಾಗೂ ದುರ್ಬಲ ವರ್ಗದವರ ಸಾಮಾಜಿಕ ಮತ್ತು ಆರ್ಥಿಕ ಏಳಿಗೆಗಾಗಿ ಹಲವಾರು ನೂತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿರುವ ರಾಜ್ಯದ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ.ಡಿ.ಕೆ.ಶಿವಕುಮಾರ್ ರವರಿಗೆ, ಕೇಂದ್ರ ಸರ್ಕಾರದ ಗೃಹ ಹಾಗೂ ಸಹಕಾರ ಇಲಾಖೆಯ ಸಚಿವರಾದ ಸನ್ಮಾನ್ಯ ಶ್ರೀ ಅಮಿತ್ ಶಾ ರವರಿಗೆ, ರಾಜ್ಯದ ಉಪ ಮುಖ್ಯಮಂತ್ರಿಗಳಾದ ಮಾನ್ಯ ಶ್ರೀ ಜಿ. ಪರಮೇಶ್ವರ್‌ರವರಿಗೆ, ಸಹಕಾರ ಸಚಿವರಾದ ಮಾನ್ಯ ಶ್ರೀ ಲಕ್ಷ್ಮಣ ಸಂಗಪ್ಪ ಸವದಿರವರಿಗೆ ಹಾಗೂ ರಾಜ್ಯ ಸಚಿವ ಸಂಪುಟದ ಎಲ್ಲಾ ಸಚಿವರುಗಳಿಗೆ ವಂದನೆಗಳನ್ನು ಸಲ್ಲಿಸುತ್ತೇನೆ. ಸಹಕಾರ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀ ಸಂಜಯ್ ಬಿ. ಶೆಟ್ಟಣ್ಣನವರ್, ಭಾ.ಆ.ಸೇ. ರವರಿಗೆ, ಸಹಕಾರ ಸಂಘಗಳ ನಿಬಂಧಕರಾದ ಶ್ರೀ ಡಾ.ಎಂ.ವಿ. ವೆಂಕಟೇಶ್, ಭಾ.ಆ.ಸೇ. ರವರಿಗೆ, ನಬಾರ್ಡ್‌ನ ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಡಾ. ಸುರೇಂದ್ರ ಬಾಬು ರವರಿಗೆ, ಭಾರತೀಯ ರಿಸರ್ವ್ ಬ್ಯಾಂಕಿಗೆ, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿಗೆ, ರಾಜ್ಯ ಸಹಕಾರಿ ಬ್ಯಾಂಕುಗಳ ರಾಷ್ಟ್ರೀಯ ಒಕ್ಕೂಟಕ್ಕೆ, ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಗೆ ಹಾಗೂ ವಿವಿಧ ಸಹಕಾರ ಸಂಸ್ಥೆಗಳ ಆಡಳಿತ ಮಂಡಳಿಗಳಿಗೆ, ರಾಜ್ಯದ ರೈತ ಸಮುದಾಯಕ್ಕೆ, ಬ್ಯಾಂಕಿನ ಸಮಸ್ತ ಗ್ರಾಹಕರುಗಳಿಗೆ ಅವರುಗಳು ನೀಡುತ್ತಿರುವ ಬೆಂಬಲ, ಮಾರ್ಗದರ್ಶನ ಹಾಗೂ ಬ್ಯಾಂಕಿನ ಬಗ್ಗೆ ತೋರುತ್ತಿರುವ ಸದ್ಭಾವನೆಗಳಿಗೆ ನಾನು ಅಭಾರಿಯಾಗಿದ್ದೇನೆ.



- ಬ್ಯಾಂಕಿಂಗ್ ವ್ಯವಹಾರಗಳಲ್ಲಿ ಸಂಪೂರ್ಣ ಸಹಕಾರ ಮತ್ತು ಬೆಂಬಲವನ್ನು ನೀಡಿದ ಬ್ಯಾಂಕಿನ ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿಯ ಎಲ್ಲಾ ನಿರ್ದೇಶಕರುಗಳಿಗೆ, ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರಿಗೆ, ಬ್ಯಾಂಕಿನ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ಹಾಗೂ ಬ್ಯಾಂಕಿನ 2025–26 ನೇ ಸಾಲಿನ ಲೆಕ್ಕಪರಿಶೋಧನಾ ಕಾರ್ಯ ನಿರ್ವಹಿಸಿದ ಮೆ|| ರಾವ್ & ಎಮ್ಮಾರ್‌ರವರಿಗೆ ಈ ಸಂದರ್ಭದಲ್ಲಿ ಹೃತ್ಪೂರ್ವಕವಾಗಿ ಅಭಿನಂದಿಸುತ್ತೇನೆ.

ಜೈ ಕರ್ನಾಟಕ – ಜೈ ಸಹಕಾರ

**ಶ್ರೀ ಎಸ್. ರವಿ,** ಎಂ.ಎಲ್.ಸಿ.,
ಅಧ್ಯಕ್ಷರು, ಕ.ರಾ.ಸ. ಅಪೆಕ್ಸ್ ಬ್ಯಾಂಕ್ ನಿ.,

ಬ್ಯಾಂಕು 111 ವರ್ಷಗಳ ಸುದೀರ್ಘ ಸೇವೆಯನ್ನು ಪೂರೈಸಿ, ರಾಜ್ಯದ ರೈತರ ಅಭಿವೃದ್ಧಿಗಾಗಿ ವಿವಿಧ ಕೃಷಿ ಸಾಲಗಳನ್ನು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಮೂಲಕ ವಿತರಿಸುತ್ತಿದೆ.

**ನಿತ್ಯ ಪಂಚಾಂಗ 19.09.2026 ಶನಿವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ

ಭಾದ್ರಪದ ಶುದ್ಧ, ಅಷ್ಟಮಿ, ಮೂಲ ನಕ್ಷತ್ರ, ರಾಧಾ ಜಯಂತಿ, ಕೊಲ್ಹಾಪುರ ಬಸದಿ ರಥ, ಸಿದ್ಧಲಕ್ಷ್ಮೀ ವ್ರತ, ದೂರ್ವಾಷ್ಟಮಿ, ಜ್ಯೇಷ್ಠಾಲಕ್ಷ್ಮೀ ವಿಸರ್ಜನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಸಂಪುಟ ಸಭೆಗೆ ಆಗಮಿಸಿದ ಸಿಎಂ, ಸಚಿವರಿಗೆ ಪೂರ್ಣಕುಂಭ ಸ್ವಾಗತ



**ಮಂಗಳೂರು, ಸೆ.18:** ಮಂಗಳೂರಿನ ಪ್ರಜಾ ಸೌಧದಲ್ಲಿ ಆಯೋಜಿಸಿದ್ದ ಸಚಿವ ಸಂಪುಟ ಸಭೆಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವ ಸಂಪುಟ ಸದಸ್ಯರಿಗೆ ಕರಾವಳಿಯ ಸಾಂಪ್ರದಾಯಿಕ ಪೂರ್ಣಕುಂಭ ಸ್ವಾಗತ ನೀಡಲಾಯಿತು. ಸಚಿವ ಸಂಪುಟ ಸಭೆಗೆ ಮುನ್ನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರು ಕದ್ರಿ ಮಂಜುನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಬಳಿಕ ಐರಾವತ ಬಸ್‌ನಲ್ಲಿ ಕದ್ರಿ ಯುದ್ಧಸ್ಮಾರಕಕ್ಕೆ ತೆರಳಿ ಗೌರವ ನಮನ ಸಲ್ಲಿಸಿದರು. ಅಲ್ಲಿಂದ ಪಂಪ್‌ವೆಲ್‌ಗೆ ಆಗಮಿಸಿದ ಮುಖ್ಯಮಂತ್ರಿ ಮತ್ತು ಸಚಿವರನ್ನು ತೆರೆದ ಡಬಲ್ ಡೆಕ್ಕರ್ ಬಸ್‌ನಲ್ಲಿ ಪಂಪ್‌ವೆಲ್‌ನಿಂದ ಪಡೀಲ್‌ನ ಪ್ರಜಾ ಸೌಧದವರೆಗೆ ಮೆರವಣಿಗೆಯ ಮೂಲಕ ಕರೆತರಲಾಯಿತು. ಮಾರ್ಗದುದ್ದಕ್ಕೂ ಸಾರ್ವಜನಿಕರು ಸ್ವಾಗತ ಕೋರಿದರು.ಪ್ರಜಾ ಸೌಧದ ಪ್ರವೇಶದ್ವಾರದ ಬಳಿ ಕಲ್ಲಡ್ಕದ ಸಾಂಪ್ರದಾಯಿಕ ಗೊಂಬೆ ಪ್ರದರ್ಶನ ಹಾಗೂ ಪೂರ್ಣಕುಂಭದೊಂದಿಗೆ ಆತಿಥ್ಯ ನೀಡಿ ಮುಖ್ಯಮಂತ್ರಿ ಮತ್ತು ಸಚಿವರನ್ನು ಬರಮಾಡಿಕೊಳ್ಳಲಾಯಿತು.ಪ್ರಜಾಸೌಧದ ಆವರಣ ಪ್ರವೇಶಿಸಿದ ಬಳಿಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಚಿವರೊಂದಿಗೆ ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ನೀಡಿದರು.ಬಳಿಕ ಪ್ರಜಾಸೌಧದ ಎದುರಿನ ಧ್ವಜಸ್ತಂಭದ ಬಳಿ ಮುಖ್ಯಮಂತ್ರಿ ಹಾಗೂ ಸಚಿವ ಸಂಪುಟ ಸದಸ್ಯರು ಗುಂಪು ಛಾಯಾಚಿತ್ರಕ್ಕೆ ಪೋಸ್ ನೀಡಿ ಐತಿಹಾಸಿಕ ಕ್ಷಣವನ್ನು ಸ್ಮರಣೀಯಗೊಳಿಸಿದರು.

## ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ವಾಗ್ದಾಳಿ

# ಬಡವರಿಗೆ ಮನೆ ಇಲ್ಲ, ಗಂಗಾ ಕಲ್ಯಾಣ ಇಲ್ಲ ವಿಕಲಚೇತನರಿಗೆ ಪಿಂಚಣಿಯೂ ಸರಿಯಾಗಿ ಸಿಗುತ್ತಿಲ್ಲ

**ಶಿಕಾರಿಪುರ, ಸೆ.18:** ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಪರಿಹಾರ ನೀಡುವ ಬದಲು ಕಾಂಗ್ರೆಸ್ ಸರ್ಕಾರ ನಿರ್ಲಕ್ಷ್ಯ ತೋರುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕಿಡಿಕಾರಿದ್ದಾರೆ.

ಸರ್ಕಾರದ ರೈತವಿರೋಧಿ ನೀತಿಗಳನ್ನು ಖಂಡಿಸಿ ನಡೆದ ಪ್ರತಿಭಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರೈತರು ಎದುರಿಸುತ್ತಿರುವ ಸಂಕಷ್ಟಗಳ ಕುರಿತು ಸರ್ಕಾರವನ್ನು ಎಚ್ಚರಿಸುವ ಉದ್ದೇಶದಿಂದ ಈ ಹೋರಾಟ ನಡೆಸಲಾಗುತ್ತಿದೆ ಎಂದರು.

ಯುಪಿಎ ಸರ್ಕಾರದ ಅವಧಿಯಲ್ಲೇ ರಚಿಸಲಾದ ಗಾಡ್ಗಿಲ್ ಮತ್ತು ಕಸ್ತೂರಿರಂಗನ್ ಸಮಿತಿಗಳ ವರದಿಗಳ ಹಿನ್ನೆಲೆಯಲ್ಲಿ ಕಾಡಂಚಿನ ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಪ್ರಸ್ತಾಪಿಸಿದ ವಿಜಯೇಂದ್ರ, ಈ ವರದಿಗಳು ಯಾವುದೇ ರಾಜ್ಯದ ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್ ಆದೇಶದ ಮೇರೆಗೆ ಮಾತ್ರ ರಚನೆಯಾದವು ಎಂಬುದನ್ನು ಒಪ್ಪಲು ಸಾಧ್ಯವಿಲ್ಲ. ಇಂದು ಈ ವರದಿಗಳ ಪರಿಣಾಮವಾಗಿ ಕಾಡಂಚಿನ ರೈತರು ಬೀದಿಗಿಳಿದು ಹೋರಾಟ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ಮಧು ಬಂಗಾರಪ್ಪನವರೇ, ನೀವು ಹೋರಾಟ ಮಾಡಬೇಕಾದರೆ ಮೊದಲು ನೀವು ರಾಜ್ಯ ಸರ್ಕಾರದ ಸಚಿವರು ಎಂಬ ಜವಾಬ್ದಾರಿಯನ್ನು ಅರ್ಥಮಾಡಿಕೊಳ್ಳಬೇಕು ಎಂದು ವಿಜಯೇಂದ್ರ ಹೇಳಿದರು. ರೈತರ ನೀರಾವರಿ ಸಮಸ್ಯೆ ಕಡೆಗಣನೆ–



ಶಿಕಾರಿಪುರ ಸೇರಿದಂತೆ ಈ ಭಾಗದ ರೈತರು ಎದುರಿಸುತ್ತಿರುವ ನೀರಾವರಿ ಸಮಸ್ಯೆಗಳ ಕುರಿತು ಸರ್ಕಾರ ಗಂಭೀರವಾಗಿ ಗಮನ ಹರಿಸಿಲ್ಲ ಎಂದು ವಿಜಯೇಂದ್ರ ಟೀಕಿಸಿದರು.

ಗ್ಯಾರಂಟಿ ಯೋಜನೆಗಳ ಬಗ್ಗೆ ದೊಡ್ಡ ಪ್ರಮಾಣದಲ್ಲಿ ಮಾತನಾಡಲಾಗುತ್ತಿದೆ. ಆದರೆ ರಾಜ್ಯದ ಬಡವರು ಮತ್ತು ದುರ್ಬಲ ವರ್ಗಗಳ ಮೂಲಭೂತ ಅಗತ್ಯಗಳ ವಿಚಾರದಲ್ಲಿ ಸರ್ಕಾರದ ಸಾಧನೆ ಏನು ಎಂದು ವಿಜಯೇಂದ್ರ ಪ್ರಶ್ನಿಸಿದರು. ಕಳೆದ ಮೂರುವರೆ ವರ್ಷದಲ್ಲಿ ಕಾಂಗ್ರೆಸ್ ಸರ್ಕಾರ ಒಬ್ಬ ಬಡವನಿಗೆ ಮನೆ ನೀಡಲು ಸಾಧ್ಯವಾಗಿಲ್ಲ. ಒಂದು ಗಂಗಾ ಕಲ್ಯಾಣ ಯೋಜನೆಯನ್ನು ನೀಡಲು ಸಾಧ್ಯವಾಗಿಲ್ಲ. ಅರ್ಹ ವಿಕಲಚೇತನರಿಗೆ ಪಿಂಚಣಿ ನೀಡುವುದಕ್ಕೂ ಸರ್ಕಾರ ಮುಂದೆ ಬರುತ್ತಿಲ್ಲ? ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದರು.

ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

# ಮಂಗಳೂರು ವಿವಿ ಕ್ಯಾಂಪಸ್ ಸದ್ಬಳಕೆ ಕುರಿತು ಸರ್ಕಾರದ ಮಟ್ಟದಲ್ಲಿ ಚಿಂತನೆ




**ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಕಟ್ಟಡ ಪರಿಶೀಲಿಸಿದ ಡಿಸಿಎಂ ಡಾ.ಜಿ. ಪರಮೇಶ್ವರ್**

**ಮಂಗಳೂರು, ಸೆ.18:** ಡಿಸಿಎಂ ಡಾ. ಜಿ. ಪರಮೇಶ್ವರ್ ಅವರು ಉಡುಪಿ ಜಿಲ್ಲೆಯ ಕಾಪು ತಾಲ್ಲೂಕಿನ ಬೆಳಪು ಗ್ರಾಮದಲ್ಲಿರುವ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರದ ಕಟ್ಟಡವನ್ನು ಶುಕ್ರವಾರ ಪರಿಶೀಲಿಸಿದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿ, ಸುಮಾರು ರೂ. 53.85 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಬೃಹತ್ ಕಟ್ಟಡವು ಕೆಲ ವರ್ಷಗಳಿಂದ ಬಳಕೆಯಾಗದೆ ಖಾಲಿ ಬಿದ್ದಿದ್ದು, ದುರವಸ್ಥೆಗೆ ತಲುಪುವ ಭೀತಿಯಲ್ಲಿದೆ. ಕಟ್ಟಡ ಹಾಗೂ ಕ್ಯಾಂಪಸ್ ಅನ್ನು ಸೂಕ್ತ ಮತ್ತು ಸದ್ಬಳಕೆಯ ಉದ್ದೇಶಕ್ಕಾಗಿ ಬಳಸಿಕೊಳ್ಳುವ ಕುರಿತು ಸರ್ಕಾರದ ಹಂತದಲ್ಲಿ ಚಿಂತನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

2014–15ನೇ ಸಾಲಿನ ಬಜೆಟ್‌ನಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸುವ ಕುರಿತು ಘೋಷಣೆ ಮಾಡಲಾಗಿತ್ತು. ಕೇಂದ್ರ ಸರ್ಕಾರದ ರೂಸಾ ಯೋಜನೆಯಡಿ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ರೂಸಾ ಅನುದಾನದ ಮೂಲಕ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿತ್ತು ಎಂದು ಅವರು ತಿಳಿಸಿದರು. ರಾಜ್ಯದಲ್ಲಿ ಎರಡು ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಇದ್ದು, ಅದರಲ್ಲಿ ಒಂದನ್ನು ಮಂಗಳೂರಿನಲ್ಲಿ ಸ್ಥಾಪಿಸಲು ಆಯ್ಕೆ ಮಾಡಲಾಗಿತ್ತು. ವಿಜ್ಞಾನ ಕೇಂದ್ರಕ್ಕೆ ಅಗತ್ಯವಿರುವ ಮೂಲಸೌಕರ್ಯಗಳ ಕುರಿತು ನಕ್ಷೆ ತಯಾರಿಸಿ, ಅಗತ್ಯತೆಗಳ ಬಗ್ಗೆ ಚರ್ಚಿಸಿ, ಅನುಮೋದನೆ ಪಡೆದುಕೊಂಡ ಬಳಿಕ ಕಾಮಗಾರಿ ಆರಂಭಿಸಲಾಗಿತ್ತು. ಸುಮಾರು ರೂ. 50ರಿಂದ ರೂ. 60 ಕೋಟಿ ವೆಚ್ಚದಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಲಾಗಿದೆ ಎಂದರು.

ಕಾರಣಾಂತರಗಳಿಂದ ರೂಸಾ ಕಾರ್ಯಕ್ರಮ ಸ್ಥಗಿತಗೊಂಡಿದ್ದು, ಮಂಗಳೂರು ವಿಶ್ವವಿದ್ಯಾನಿಲಯದಿಂದಲೂ ಅನುದಾನ ದೊರೆಯದ ಹಿನ್ನೆಲೆಯಲ್ಲಿ ವಿಜ್ಞಾನ ಕೇಂದ್ರದ ಕಾಮಗಾರಿ ಅರ್ಧಕ್ಕೆ ನಿಂತಿದೆ. ಇದೀಗ ವಿಜ್ಞಾನ ಕೇಂದ್ರಕ್ಕೆ ಚಾಲನೆ ನೀಡುವ ಕುರಿತು ಪ್ರಸ್ತಾಪ ಮಾಡಲಾಗಿದ್ದು, ಈ ವಿಚಾರ ಉನ್ನತ ಶಿಕ್ಷಣ ಸಚಿವರ ಗಮನಕ್ಕೂ ಬಂದಿದೆ ಎಂದು ತಿಳಿಸಿದರು.

**ಕ್ರೀಡಾ ವಿವಿ ಸಾಧ್ಯತೆ ಕುರಿತು ಪರಿಶೀಲನೆ**

ರಾಜ್ಯದಲ್ಲಿ ಸ್ಪೋರ್ಟ್ಸ್ ಯುನಿವರ್ಸಿಟಿ ಮಾಡಬೇಕು ಎಂಬ ಚಿಂತನೆ ಇದೆ. ಅದು ಇಲ್ಲಿ ಸಾಧ್ಯವಾಗಬಹುದೇ ಎಂಬುದನ್ನು ಪರಿಶೀಲಿಸಲು ಬಂದಿದ್ದೇನೆ. ಉಡುಪಿ ಜಿಲ್ಲೆಗೆ ಮೆಡಿಕಲ್ ಕಾಲೇಜು ಇಲ್ಲ. ಅದಕ್ಕೂ ಸಾಧ್ಯತೆ ಇರಬಹುದೇ ಎಂಬುದನ್ನು ಪರಿಶೀಲಿಸಲು ಬಂದಿದ್ದೇನೆ ಎಂದು ಡಾ.ಜಿ. ಪರಮೇಶ್ವರ್ ಹೇಳಿದರು. ಈ ಎಲ್ಲಾ ವಿಚಾರಗಳ ಕುರಿತು ಮಾಹಿತಿ ಪಡೆದು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು. ಒಟ್ಟಾರೆ, ಇಲ್ಲಿ ನಿರ್ಮಿಸಿರುವ ಕಟ್ಟಡಗಳು ಹಾಗೂ ಅಭಿವೃದ್ಧಿಪಡಿಸಿರುವ ಕ್ಯಾಂಪಸ್ ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಸರ್ಕಾರದ ಹಂತದಲ್ಲಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

# ಮಂಗಳೂರಿನ ಆರ್ಥಿಕ ಪ್ರಗತಿಗೆ ವಿಶೇಷ ಆದ್ಯತೆ: ಪ್ರಿಯಾಂಕ್ ಖರ್ಗೆ ಭರವಸೆ

**ಮಂಗಳೂರು, ಸೆ.18:** ಕರಾವಳಿ ಭಾಗದ ಆರ್ಥಿಕ ಪ್ರಗತಿಗೆ ಸರ್ಕಾರ ವಿಶೇಷ ಗಮನ ನೀಡಲಿದೆ. ಮುಖ್ಯಮಂತ್ರಿಗಳ ಚಿಂತನೆಯೂ ಇದೇ ಆಗಿದ್ದು, ಕರಾವಳಿ ಭಾಗದ ಅಭಿವೃದ್ಧಿಗೆ ಅಗತ್ಯವಾದ ಯೋಜನೆಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಹೇಳಿದ್ದಾರೆ.

ಆರ್ಥಿಕವಾಗಿ ರಾಜ್ಯಕ್ಕೆ ಮಂಗಳೂರಿನ ಕೊಡುಗೆ ದೊಡ್ಡದಿದೆ. ಹೀಗಾಗಿ ಕರಾವಳಿ ಭಾಗದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುವ ಅಗತ್ಯವಿದೆ. ಉತ್ತಮ ಅಭಿವೃದ್ಧಿಗೆ ಆದ್ಯತೆ ನೀಡುವ ಕುರಿತು ನಿರಂತರವಾಗಿ ಚರ್ಚೆ ನಡೆಯುತ್ತಿತ್ತು. ಜನರ ಆಶಯಗಳಿಗೆ ಸ್ಪಂದಿಸುವ ಉದ್ದೇಶದಿಂದಲೇ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ಆಯೋಜಿಸಲಾಗಿದೆ. ಕರಾವಳಿಯಲ್ಲಿ ಶಾಂತಿ ಮತ್ತು ಸೌಹಾರ್ದತೆ ಇದ್ದರೆ ಮಾತ್ರ ಸಮೃದ್ಧಿ ಸಾಧ್ಯ. ಶಾಂತಿ ಇದ್ದಾಗ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಿ ಅಭಿವೃದ್ಧಿಗೆ ವೇಗ ಸಿಗುತ್ತದೆ. ಇದು ಸಾಮಾನ್ಯ ಜ್ಞಾನ ಎಂದು ಹೇಳಿದ್ದಾರೆ

ಸರ್ಕಾರ ಕರಾವಳಿಗೆ ಬಂದು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತಿರುವುದಕ್ಕೆ ಬಿಜೆಪಿ ಮಾಡುತ್ತಿರುವ ಟೀಕೆಗೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ನಾವು ಬರದಿದ್ದರೆ ಯಾಕೆ ಬಂದಿಲ್ಲ ಎನ್ನುತ್ತಾರೆ, ಬಂದರೆ ಯಾಕೆ ಬಂದಿರಿ ಎಂದು ಪ್ರಶ್ನಿಸುತ್ತಾರೆ. ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡದೆ ಸರ್ಕಾರದ ಕೆಲಸಗಳಿಗೆ ಸಲಹೆ ನೀಡಬೇಕು ಎಂದರು.

**15–20 ವರ್ಷದಲ್ಲಿ ಕರಾವಳಿಗೆ ಬಿಜೆಪಿ ಕೊಡುಗೆ ಏನು?**

ಕಳೆದ 15–20 ವರ್ಷಗಳ ಅವಧಿಯಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಕರಾವಳಿಗೆ ಏನು ಕೊಡುಗೆ ನೀಡಿದೆ ಎಂಬುದನ್ನು ಪ್ರಶ್ನಿಸಿದ ಪ್ರಿಯಾಂಕ್ ಖರ್ಗೆ, ಡಬಲ್ ಎಂಜಿನ್ ಸರ್ಕಾರ ಎಂದು ಹೇಳಿಕೊಂಡರೂ ಕರಾವಳಿಯಲ್ಲಿ ಯಾವ ಎಂಜಿನ್ ಕೆಲಸ ಮಾಡಿದೆ ಎಂದು ಪ್ರಶ್ನಿಸಿದರು. ಕೇವಲ ಮೋದಿ ಹೆಸರು ಹೇಳುವುದರಿಂದ ಜನರ ಸಮಸ್ಯೆಗಳು ಬಗೆಹರಿಯುವುದಿಲ್ಲ ಎಂದರು.

# ಮಾಗಡಿಯ ಜನೌಷಧಿ ಕೇಂದ್ರಕ್ಕೆ ಸಂಸದ ಡಾ. ಸಿ.ಎನ್. ಮಂಜುನಾಥ್ ಭೇಟಿ



**ಮಾಗಡಿ, ಸೆ.18:** ಸಂಸದ ಡಾ. ಸಿ.ಎನ್. ಮಂಜುನಾಥ್ ಅವರು ಶುಕ್ರವಾರ ಮಾಗಡಿ ಪಟ್ಟಣದಲ್ಲಿರುವ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಕ್ಕೆ ಭೇಟಿ ನೀಡಿ, ಔಷಧಗಳ ಲಭ್ಯತೆ, ಗುಣಮಟ್ಟ ಹಾಗೂ ಸಾರ್ವಜನಿಕರಿಗೆ ದೊರೆಯುತ್ತಿರುವ ಪ್ರಯೋಜನಗಳ ಕುರಿತು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶಾದ್ಯಂತ ಸುಮಾರು 19,000 ಜನೌಷಧಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಕೈಗೆಟುಕುವ ದರದಲ್ಲಿ ಗುಣಮಟ್ಟದ ಔಷಧಗಳು ದೊರೆಯುತ್ತಿರುವುದರಿಂದ ಜನರಿಗೆ ಸಾವಿರಾರು ಕೋಟಿ ರೂಪಾಯಿ ಉಳಿತಾಯವಾಗುತ್ತಿದೆ ಎಂದು ತಿಳಿಸಿದರು. ಖಾಸಗಿ ಮೆಡಿಕಲ್ ಶಾಪ್ಗಳಿಗೆ ಹೋಲಿಸಿದರೆ ಬಿಪಿ, ಮಧುಮೇಹ ಹಾಗೂ ಹೃದಯ ಸಂಬಂಧಿ ಕಾಯಿಲೆಗಳ ಹಲವು ಔಷಧಗಳು ಶೇ.50ರಿಂದ 70ರಷ್ಟು ಕಡಿಮೆ ದರದಲ್ಲಿ ಲಭ್ಯವಾಗುತ್ತಿದ್ದು, ದೀರ್ಘಕಾಲ ಔಷಧ ಸೇವಿಸಬೇಕಾದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಇದು ದೊಡ್ಡ ಆರ್ಥಿಕ ನೆರವಾಗಿದೆ ಎಂದರು.

ಜನೌಷಧಿ ಔಷಧಗಳ ಗುಣಮಟ್ಟದ ಬಗ್ಗೆ ಯಾವುದೇ ಅನುಮಾನ ಪಡುವ ಅಗತ್ಯವಿಲ್ಲ. ಅವುಗಳನ್ನು ಬಳಸುತ್ತಿರುವ ರೋಗಿಗಳಲ್ಲಿ ರಕ್ತದೊತ್ತಡ ಹಾಗೂ ರಕ್ತದಲ್ಲಿನ ಸಕ್ಕರೆ ಪ್ರಮಾಣ ಉತ್ತಮವಾಗಿ ನಿಯಂತ್ರಣದಲ್ಲಿರುವುದೇ ಅವುಗಳ ಗುಣಮಟ್ಟ ಮತ್ತು ಪರಿಣಾಮಕಾರಿತ್ವಕ್ಕೆ ಸಾಕ್ಷಿಯಾಗಿದೆ ಎಂದು ಡಾ. ಮಂಜುನಾಥ್ ಹೇಳಿದರು.

ಮನುಷ್ಯರಿಗೆ ಕೈಗೆಟುಕುವ ದರದಲ್ಲಿ ಔಷಧ ಒದಗಿಸುವ ಜನೌಷಧಿ ಕೇಂದ್ರಗಳ ಮಾದರಿಯಲ್ಲಿ ಜಾನುವಾರುಗಳ ಔಷಧಗಳು ಹಾಗೂ ಕೃಷಿಗೆ ಅಗತ್ಯವಿರುವ ಔಷಧ ಮತ್ತು ಉತ್ಪನ್ನಗಳನ್ನು ಕಡಿಮೆ ದರದಲ್ಲಿ ಒದಗಿಸುವ ಪ್ರತ್ಯೇಕ ಜನೌಷಧಾಲಯ ಗಳನ್ನು ಆರಂಭಿಸುವ ಅಗತ್ಯವಿದೆ ಎಂಬ ವಿಚಾರವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಿರುವುದಾಗಿ ತಿಳಿಸಿದ ಅವರು, ಈ ಬಗ್ಗೆ ಮತ್ತೊಮ್ಮೆ ಸರ್ಕಾರದ ಗಮನ ಸೆಳೆಯುವುದಾಗಿ ಹೇಳಿದರು. ಮಾಗಡಿ ಜನೌಷಧಿ ಕೇಂದ್ರದಲ್ಲಿ ಅಗತ್ಯ ಔಷಧಗಳ ಕೊರತೆ ಉಂಟಾಗದಂತೆ 15 ದಿನಗಳ ಮುಂಚಿತವಾಗಿಯೇ ಬೇಡಿಕೆ ಸಲ್ಲಿಸಿ, ಸಮರ್ಪಕ ದಾಸ್ತಾನು ನಿರ್ವಹಿಸುವಂತೆ ಸಿಬ್ಬಂದಿಗೆ ಸೂಚಿಸಿದರು. ಔಷಧಗಳ ಸರಬರಾಜಿನಲ್ಲಿ ಕಂಡುಬರುವ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದು ಪರಿಹರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ದಾಖಲೆ ಇಲ್ಲದ ಗ್ರಾಮಠಾಣಾ ಸ್ವತ್ತಿಗೆ ನ.1ರಿಂದ ಇ-ಸ್ವತ್ತು: ಈಶ್ವರ ಖಂಡ್ರೆ ಸೂಚನೆ

**ಬೆಂಗಳೂರು, ಸೆ.18:** ಗ್ರಾಮ ಪಂಚಾಯತಿ ವ್ಯಾಪ್ತಿಯ ಆಸ್ತಿಗಳಿಗೆ ಇ–ಸ್ವತ್ತು ನೀಡಿಕೆಯಲ್ಲಿನ ವಿಳಂಬ ತಪ್ಪಿಸಲು ಕ್ರಮ ವಹಿಸಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಪ್ರಥಮ ಹಂತದಲ್ಲಿ ಅಕ್ಟೋಬರ್ 2ರಿಂದ ಗ್ರಾಮಠಾಣಾ ಆಸ್ತಿಗಳಿಗೆ ಇ–ಸ್ವತ್ತು ಪ್ರಕ್ರಿಯೆ ಆರಂಭಿಸಲು ಸೂಚಿಸಿದ್ದಾರೆ.

ತತ್ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಇ–ಸ್ವತ್ತು ನೀಡಿಕೆಯಲ್ಲಿನ ತೊಡಕು ನಿವಾರಣೆಗೆ ಸರಳೀಕೃತವಾದ ಪ್ರಕ್ರಿಯೆಯೊಂದಿಗೆ ಇ–ಸ್ವತ್ತು 03 ತಂತ್ರಾಂಶ ಸಿದ್ಧಪಡಿಸಲು ಸೂಚಿಸಿದ್ದಾರೆ.

ನ್ಯಾಯಾಲಯಗಳಲ್ಲಿ ವ್ಯಾಜ್ಯ ಇರುವ, ಸರ್ಕಾರಿ ಜಾಗದಲ್ಲಿ, ಕೆರೆ ಅಂಗಳದಲ್ಲಿ, ಬಿ ಖರಾಬು ಪ್ರದೇಶದಲ್ಲಿ ಮನೆ ನಿರ್ಮಾಣ ಮಾಡಿರುವಂತಹ ಹಾಗೂ ಅರಣ್ಯ ಪ್ರದೇಶ ಒತ್ತುವರಿ ಮಾಡಿ ಕಟ್ಟಿದ ಸ್ವತ್ತುಗಳನ್ನು ಹೊರತುಪಡಿಸಿ ನ್ಯಾಯಬದ್ಧವಾದ ವಾರೀಸುದಾರರಿಗೆ ನಿಯಮಾನುಸಾರ ಇ–ಸ್ವತ್ತು ನೀಡಲು ಅ.2ರಿಂದ ಅರ್ಜಿ ಸ್ವೀಕರಿಸಿ, ರಾಜ್ಯೋತ್ಸವ ಮಾಸವಾದ ನವೆಂಬರ್‌ನಲ್ಲಿ ಕನಿಷ್ಠ 10 ಲಕ್ಷ ಆಸ್ತಿಗಳಿಗೆ ಇ–ಸ್ವತ್ತುಗಳನ್ನು ಮನೆ ಬಾಗಿಲಿಗೇ ತಲುಪಿಸಲು ಸೂಚಿಸಿದ್ದಾರೆ.

ಗ್ರಾಮಠಾಣಾ ವ್ಯಾಪ್ತಿಯಲ್ಲಿ ದಾಖಲೆ ಇಲ್ಲದ ಆಸ್ತಿಗಳಿಗೆ ಹಿತ್ತಲು, ಮನೆ ಅಂಗಳ ಸೇರಿದಂತೆ 4000 ಚದರಡಿ ಒಳಗಿರುವ ಆಸ್ತಿಗಳಿಗೆ ಮಾತ್ರ ಇ–ಸ್ವತ್ತು ನೀಡುವ ಸಲುವಾಗಿ ಒಂದು ಗ್ರಾಮಪಂಚಾಯತಿ ವ್ಯಾಪ್ತಿಗೆ ಒಳಪಡುವ ವಿವಿಧ ಹಳ್ಳಿಗಳಲ್ಲಿ ಪ್ರತ್ಯೇಕ ಗ್ರಾಮಸಭೆ ನಡೆಸಿ, ಇ–ಸ್ವತ್ತಿಗೆ ಅರ್ಜಿ ಸಲ್ಲಿಸಿರುವವರು ಅದೇ ಗ್ರಾಮದಲ್ಲಿ ಅದೇ ಆಸ್ತಿಯಲ್ಲಿ ವಾಸಿಸುತ್ತಿದ್ದಾರೆಯೇ, ಅವರೇ ಸ್ವತ್ತಿನ ನೈಜ ಮಾಲೀಕರೇ ಎಂಬುದನ್ನು ಗ್ರಾಮಸ್ಥರ ಸಮ್ಮುಖದಲ್ಲೇ ಖಚಿತಪಡಿಸಿಕೊಂಡು ಮತ್ತು ಸಾರ್ವಜನಿಕರಿಂದ ಆಕ್ಷೇಪಣೆ ಕರೆದು 21 ದಿನಗಳ ಕಾಲಾವಕಾಶ ನೀಡಿ, ಪಂಚಾಯತಿ ಕಚೇರಿಗಳಲ್ಲಿ ಕಾಣುವಂತೆ ಈ ಆಕ್ಷೇಪಣಾ ನೋಟಿಸ್ ಅಂಟಿಸಿ, ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ಇ–ಸ್ವತ್ತು ನೀಡಲು ನಿಯಮಾನುಸಾರ ಕ್ರಮ ವಹಿಸಲು ಈಶ್ವರ ಖಂಡ್ರೆ ನಿರ್ದೇಶನ ನೀಡಿದ್ದಾರೆ.

ರಾಜ್ಯದ ಪಂಚಾಯತಿ ವ್ಯಾಪ್ತಿಯಲ್ಲಿರುವ ಅನೇಕ ಆಸ್ತಿಗಳ ಮಾಲೀಕರು ಇ–ಸ್ವತ್ತು ಕೋರಿ ಅರ್ಜಿ ಸಲ್ಲಿಸಿ ತಿಂಗಳುಗಳೇ ಕಳೆದಿದ್ದರೂ ತಾಂತ್ರಿಕ ಕಾರಣಗಳಿಂದ ಅವರಿಗೆ ಇ–ಸ್ವತ್ತು ನೀಡಲು ವಿಳಂಬವಾಗುತ್ತಿರುವ ಹಾಗೂ ಗ್ರಾಮಠಾಣಾಗಳಲ್ಲಿ ಹಲವಾರು ವರ್ಷಗಳಿಂದ ಮನೆ ಕಟ್ಟಿಕೊಂಡು ವಾಸಿಸುತ್ತಿರುವ ಬಹುತೇಕರ ಬಳಿ ತಮ್ಮ ಆಸ್ತಿಗೆ ಸಂಬಂಧಿಸಿದಂತೆ ದಾಖಲಾತಿಗಳು ಇಲ್ಲದ ಕಾರಣ ಅವರಿಗೆ ಇ–ಸ್ವತ್ತು ನೀಡಲು ಸಾಧ್ಯವಾಗಿರುವುದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದ್ದ ಹಿನ್ನೆಲೆಯಲ್ಲಿ ಈಶ್ವರ ಖಂಡ್ರೆ ಕಾರ್ಯದರ್ಶಿ ನೇತೃತ್ವದಲ್ಲಿ ಪಂಚ ಸದಸ್ಯರ ಸಮಿತಿ ರಚಿಸಿ ವರದಿ ಪಡೆದಿದ್ದರು.

ಗ್ರಾಮಠಾಣಾ ವ್ಯಾಪ್ತಿಯಲ್ಲಿ ಹಲವು ವರ್ಷದಿಂದ ವಾಸಿಸುತ್ತಿದ್ದರೂ, ತಮ್ಮ ಸ್ವತ್ತಿಗೆ ಸಂಬಂಧಿಸಿದಂತೆ ನೋಂದಾಯಿತ ಕ್ರಯಪತ್ರ, ಹಕ್ಕುಪತ್ರ ಇತ್ಯಾದಿ ದಾಖಲೆ ಇಲ್ಲದ ಆಸ್ತಿಯ ಮಾಲೀಕರಿಗೆ ಇ–ಸ್ವತ್ತು ನೀಡಲು ಅವರು ವಾಸಿಸುತ್ತಿರುವ ಕಟ್ಟಡದ ವಿದ್ಯುತ್ ಬಿಲ್, ಈ ಹಿಂದೆ ಮನೆಗಂದಾಯ ಅಥವಾ ತೆರಿಗೆ ಪಾವತಿಸಿದ ರಸೀತಿ, ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ನಿವಾಸಿ ಪ್ರಮಾಣಪತ್ರ ಇತ್ಯಾದಿ ದಾಖಲಾತಿಗಳೊಂದಿಗೆ ಹಾಗೂ ಹಾಗೂ ಆಸ್ತಿಗೆ ತಾವೇ ಮಾಲೀಕರಾಗಿದ್ದು, ತಾವು ಒದಗಿಸಿರುವ ದಾಖಲೆ /ಮಾಹಿತಿ ತಪ್ಪಾಗಿದ್ದಲ್ಲಿ ತಮ್ಮ ಇ–ಸ್ವತ್ತು ರದ್ದು ಮಾಡಬಹುದು ಎಂಬ ಮುಚ್ಚಳಿಕೆ ಸಹಿತ ಅಫಿಡವಿಟ್‌ನೊಂದಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿ, ಗಾಂಧೀ ಜಯಂತಿ ದಿನವಾದ ಅಕ್ಟೋಬರ್ 2ರಿಂದ ಪಂಚನಾಮೆ, ಸ್ಥಳ ಪರಿಶೀಲನಾ ಪ್ರಕ್ರಿಯೆ ಆರಂಭಿಸಿ, ನವೆಂಬರ್ 1ರಿಂದ ಮನೆ ಬಾಗಿಲಿಗೇ ಇ–ಸ್ವತ್ತು ಅಭಿಯಾನ ಆರಂಭಿಸಲು ಕ್ರಮವಹಿಸುವಂತೆ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

# ಗ್ಯಾರಂಟಿ ಯೋಜನೆ: ಚಿಕ್ಕಬಳ್ಳಾಪುರ ಜಿಲ್ಲೆಗೆ 3232.17 ಕೋಟಿ ರೂ. ಸಂದಾಯ– ದಿನೇಶ್ ಗೂಳಿಗೌಡ

**ಚಿಕ್ಕಬಳ್ಳಾಪುರ ಜಿಲ್ಲೆಗೆ 100 ಹೆಚ್ಚುವರಿ ಬಸ್ ನೀಡುವಂತೆ ಸರ್ಕಾರಕ್ಕೆ ಮನವಿ**

**ಜಿಲ್ಲೆಯಲ್ಲಿ ಪಂಚಗ್ಯಾರಂಟಿ ಯೋಜನೆಗಳು 97% ಪೂರ್ಣ**

**ಹತ್ತು ದಿನದೊಳಗೆ ಗ್ಯಾರಂಟಿ ಸದಸ್ಯರ ಪಟ್ಟಿ ಸಲ್ಲಿಸಿ**

**ಗೃಹಲಕ್ಷ್ಮಿ ಯೋಜನೆಯ 32 ಕಂತಿನ ಹಣ ಬಿಡುಗಡೆ ಆಗಿದ್ದು 33ನೇ ಕಂತಿನ ಹಣ ವಾರದಲ್ಲಿ ಬಿಡುಗಡೆ ಆಗಲಿದ್ದು ಪ್ರತಿ ಮಹಿಳೆಗೆ 66,000 ರೂ. ಜಮೆ**



**ಚಿಕ್ಕಬಳ್ಳಾಪುರ, ಸೆ.18:** ಗ್ಯಾರಂಟಿ ಯೋಜನೆಗಳಿಗಾಗಿ ಚಿಕ್ಕಬಳ್ಳಾಪುರ ಜಿಲ್ಲೆಗೆ 3232.17 ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ವೆಚ್ಚ ಮಾಡಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ಹೇಳಿದರು.

ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲೆಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿ, ಕಳೆದ ಮೂರು ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ 1,48,454 ಕೋಟಿ ರೂ. ಹಣವನ್ನು ನೀಡಿದೆ ಎಂದರು.

ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯದ 1.24 ಕೋಟಿ ಮಹಿಳೆಯರಿಗೆ 76,951.13 ಕೋಟಿ ರೂ. ನೀಡಿದೆ. ಪ್ರತಿ ಮಹಿಳೆಯರಿಗೆ 64 ಸಾವಿರ ಹಣ ತಲುಪಿದೆ. ಇನ್ನೊಂದು ವಾರದಲ್ಲಿ 33ನೇ ಕಂತಿನ 2000 ರೂ. ಹಣ ತಲುಪುವ ಮೂಲಕ 66 ಸಾವಿರ ಹಣ ತಲುಪಿದಂತಾಗಲಿದೆ. ಗೃಹಜ್ಯೋತಿ ಯೋಜನೆಯಲ್ಲಿ 1.67 ಕೋಟಿ ಮನೆಗಳು ಉಚಿತ ವಿದ್ಯುತ್ ಪಡೆಯುತ್ತಿದ್ದು ಇದಕ್ಕಾಗಿ 28,759 ಕೋಟಿ ಹಣವನ್ನು ಸರ್ಕಾರ ವ್ಯಯಿಸಿದೆ ಎಂದರು.

ರಾಜ್ಯದಲ್ಲಿ 1.48 ಕೋಟಿ ಲಕ್ಷ ಕಾರ್ಡ್‌ಗಳಿದ್ದು 4.5 ಕೋಟಿ ಸದಸ್ಯರಿಗೆ ಉಚಿತವಾಗಿ ಅಕ್ಕಿ ನೀಡಲಾಗುತ್ತಿದ್ದು ಇದಕ್ಕಾಗಿ 19,845 ಕೋಟಿ ರೂ. ವೆಚ್ಚ ಮಾಡಲಾಗಿದೆ. ರಾಜ್ಯದ 24 ಸಾವಿರ ನ್ಯಾಯಬೆಲೆ ಅಂಗಡಿಗಳ ಮುಂದೆ ಸಿಎಂ, ಡಿಸಿಎಂ, ಜಿಲ್ಲಾ ಉಸ್ತುವಾರಿ ಸಚಿವರ ಫೋಟೋ ಜೊತೆಗೆ ಸಮಯ ಮತ್ತು ಸ್ಟಾಕ್ ಬೋರ್ಡ್ ಫಲಕ ಹಾಕಬೇಕು. ಈ ಸಂಬಂಧ ಶೀಘ್ರದಲ್ಲೇ ಸುತ್ತೋಲೆ ಬರಲಿದೆ. ಮುಂದಿನ ತಿಂಗಳ ವೇಳೆಗೆ ಇಂದಿರಾ ಕಿಟ್ ವಿತರಣೆ ಆಗಲಿದೆ ಎಂದರು.

ಶಕ್ತಿ ಯೋಜನೆಯಡಿ 831 ಕೋಟಿ ಟಿಕೆಟ್ ಪಡೆದು ಮಹಿಳೆಯರು ಪ್ರಯಾಣಿಸಿದ್ದಾರೆ. ಇದರ ಟಿಕೆಟ್ ಮೌಲ್ಯ 21,618 ಕೋಟಿ ರೂ.ಗಳನ್ನು ಸಾರಿಗೆ ನಿಗಮಗಳಿಗೆ ಸರ್ಕಾರ ಪಾವತಿಸಿದೆ. ಮಹಿಳೆಯರಿಗೆ 150 ಕೋಟಿ ವೆಚ್ಚದಲ್ಲಿ ಸ್ಮಾರ್ಟ್ ಕಾರ್ಡ್ ನೀಡುವ ಕಾರ್ಯ ಅಂತಿಮ ಹಂತದಲ್ಲಿದೆ. ಯುವನಿಧಿ ಯೋಜನೆಯಡಿ 3.99 ಲಕ್ಷ ಯುವಕರಿಗೆ 1281 ಕೋಟಿ ರೂ. ಹಣ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಗ್ಯಾರಂಟಿ ಯೋಜನೆಗಳ ದುರುಪಯೋಗ ಆಗುತ್ತಿದ್ದು, ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸುವ ಉದ್ದೇಶದಿಂದ ಯೋಜನೆ ಪರಿಷ್ಕರಣೆ ಮಾಡಲಾಗುತ್ತಿದೆ. ಗೃಹಜ್ಯೋತಿ ಯೋಜನೆಯಲ್ಲಿ 80% ಪರಿಷ್ಕರಣೆ ಮುಗಿದಿದೆ. 3.5 ಲಕ್ಷ ಕುಟುಂಬಗಳು ಯೋಜನೆಯಿಂದ ಹೊರ ಉಳಿದಿದ್ದಾರೆ. ಗೃಹಲಕ್ಷ್ಮಿ ಯೋಜನೆಯಡಿ 1.96 ಲಕ್ಷ ಮಹಿಳೆಯರು ಮರಣ ಹೊಂದಿದ್ದು ಅವರ ಖಾತೆಗಳಿಗೆ 118 ಕೋಟಿ ರೂ. ಹಣ ಜಮೆ ಆಗಿದೆ. ಮೃತರ ಖಾತೆಗೆ ಜಮೆಯಾದ ಹಣ ವಾಪಸ್ ಪಡೆಯುವ ಕಾರ್ಯ ನಡೆಯುತ್ತಿದೆ ಎಂದು ಹೇಳಿದರು.

ಚಿಕ್ಕಬಳ್ಳಾಪುರ ಜಿಲ್ಲೆಗೆ 100 ಹೆಚ್ಚುವರಿ ಬಸ್ ನೀಡುವಂತೆ ಡಿಪೋ ಮ್ಯಾನೇಜರ್ ಮನವಿ ಮಾಡಿದ್ದಾರೆ. 4500 ಹೊಸ ಬಸ್ ಖರೀದಿಗೆ ರಾಜ್ಯ ಸರ್ಕಾರ ಅನುಮೋದನೆ ನೀಡಿದ್ದು ಇದಕ್ಕಾಗಿ 7000 ಕೋಟಿ ರೂ. ಹಣವನ್ನು ಬಿಡುಗಡೆ ಮಾಡಿದೆ. ಬಸ್ ನಿಲ್ದಾಣ ದುರಸ್ತಿಗೆ 2000 ಕೋಟಿ ಬಿಡುಗಡೆ ಆಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಗೆ 100 ಹೆಚ್ಚುವರಿ ಬಸ್ ಗಳನ್ನು ನೀಡುವಂತೆ ಸಾರಿಗೆ ಸಚಿವರಿಗೆ ಮನವಿ ಮಾಡಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಪ್ರಭು, ಜಿಪಂ ಸಿಇಒ ಡಾ. ನವೀನ್ ಭಟ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಯಲವಳ್ಳಿ ರಮೇಶ್ ಸೇರಿದಂತೆ ಜಿಲ್ಲಾ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಸದಸ್ಯರು, ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ಜಿಲ್ಲೆಯ ಗ್ಯಾರಂಟಿ ಯೋಜನೆಗಳ ವಿವರ**

ಗೃಹಲಕ್ಷ್ಮಿ ಯೋಜನೆಯಡಿ 2,85,415 ಫಲಾನುಭವಿಗಳು ನೋಂದಣಿಯಾಗಿದ್ದು ಅವರಿಗೆ 1,758.35 ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ನೀಡಿದೆ. ಪ್ರತಿ ಫಲಾನುಭವಿಗಳ ಖಾತೆಗೆ 2000 ರೂ. ಗಳಂತೆ 32 ಕಂತುಗಳಲ್ಲಿ ಹಣ ಬಿಡುಗಡೆ ಆಗಿದ್ದು ಇದುವರೆಗೂ 64,000 ರೂ. ಹಣ ಸಂದಾಯವಾಗಿದೆ.

ಗೃಹಜ್ಯೋತಿ ಯೋಜನೆಯಡಿ 3,27,756 ಕುಟುಂಬಗಳು ಉಚಿತ ವಿದ್ಯುತ್ ಪಡೆಯುತ್ತಿದ್ದು ಇದರ ಒಟ್ಟು ಮೌಲ್ಯ 454.97 ಕೋಟಿ ರೂ.ಗಳಾಗಿದ್ದು ಇದನ್ನು ಸರ್ಕಾರ ಪಾವತಿಸಿದೆ.

ಅನ್ನಭಾಗ್ಯ ಯೋಜನೆಯಡಿ 10,11,952 ಫಲಾನುಭವಿಗಳಿಗೆ ಡಿಬಿಟಿ ಮುಖಾಂತರ 265.29 ಕೋಟಿ ರೂ. ಹಣ ವರ್ಗಾವಣೆ ಮಾಡಿರುವುದರ ಜೊತೆಗೆ ಉಚಿತವಾಗಿ ಆಹಾರ ಧಾನ್ಯ ವಿತರಣೆ ಮಾಡಲಾಗುತ್ತಿದ್ದು ಇದರ ಮೊತ್ತ 254.83 ಕೋಟಿ ರೂ.

ಶಕ್ತಿ ಯೋಜನೆಯಡಿ 12,16,42,774 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು ಅದರ ಟಿಕೆಟ್ ಮೌಲ್ಯ 481.57 ಕೋಟಿ ರೂ. ಹಣವನ್ನು ಸಾರಿಗೆ ನಿಗಮಗಳಿಗೆ ಸರ್ಕಾರ ಪಾವತಿಸಿದೆ. ಪ್ರತಿದಿನ ಸರಾಸರಿ 1.02 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದಾರೆ. ಜಿಲ್ಲೆಯಲ್ಲಿ 17430 ವಿದ್ಯಾರ್ಥಿಗಳಿಗೆ ಉಚಿತ ಬಸ್ ವಿತರಣೆ ಮಾಡಲಾಗಿದೆ.

ಯುವನಿಧಿ ಯೋಜನೆಯಡಿ 6,026 ಫಲಾನುಭವಿಗಳು ನೋಂದಣಿಯಾಗಿದ್ದು 17.16 ಕೋಟಿ ರೂ. ಹಣವನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ.

**ಜಿಲ್ಲೆಯಲ್ಲಿ ಗೃಹಲಕ್ಷ್ಮಿ, ಗೃಹಜ್ಯೋತಿ ಪರಿಷ್ಕರಣೆ**

ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆ ಪರಿಷ್ಕರಣೆ ಕಾರ್ಯ ನಡೆಯುತ್ತಿದೆ. ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿತರಾದವರಲ್ಲಿ 7523 ಫಲಾನುಭವಿಗಳು ಮರಣ ಹೊಂದಿದ್ದಾರೆ. ಇದರಲ್ಲಿ 2845 ಮೃತರ ಖಾತೆಗೆ 3.02 ಕೋಟಿ ರೂ. ಜಮೆ ಆಗಿದೆ. ಇದರಲ್ಲಿ 2.24 ಕೋಟಿ ಮೊತ್ತವನ್ನು ಸರ್ಕಾರಕ್ಕೆ ಮರುಪಾವತಿಸಲಾಗಿದ್ದರೆ, 78.34 ಲಕ್ಷ ರೂ. ಬಾಕಿ ಉಳಿದಿದೆ.

ಗೃಹಜ್ಯೋತಿ ಪರಿಷ್ಕರಣೆ ಕಾರ್ಯ 97.45% ಮುಕ್ತಾಯವಾಗಿದೆ. 3,24,028 ಗ್ರಾಹಕರ ಸಂಖ್ಯೆ ಪೈಕಿ 3,15,775 ಗ್ರಾಹಕರ ಸಂಖ್ಯೆ ಸರ್ವೇ ಕಾರ್ಯ ಪೂರ್ಣಗೊಂಡಿದೆ. 8253 ಗ್ರಾಹಕರ ಸಂಖ್ಯೆ ಮರುಪರಿಶೀಲನೆ ಮಾತ್ರ ಬಾಕಿಯಿದೆ. 220 ಸ್ಥಾವರಗಳು ಖಾತೆ ಬದಲಾವಣೆ ಆಗಿದ್ದರೆ, 192 ವಾಟರ್ ಪಂಪ್ ಸ್ಥಾವರಗಳಾಗಿವೆ.

ಉಳಿದಂತೆ ಸರ್ಕಾರಿ ಸ್ಥಾವರಗಳು, ದೇವಸ್ಥಾನ, ಮಸೀದಿ, ಚರ್ಚ್ ಗಳಿವೆ. 51 ಸ್ಥಾವರಗಳು ಸ್ವಯಂಪ್ರೇರಿತವಾಗಿ ಗೃಹಜ್ಯೋತಿ ಯೋಜನೆಯಿಂದ ದೂರ ಉಳಿದಿದ್ದಾರೆ.

**ಜಿಲ್ಲೆಯಲ್ಲಿ 1164 ಗ್ಯಾರಂಟಿ ಸದಸ್ಯರ ನೇಮಕ**

ಪ್ರತಿ ಗ್ರಾಮ ಪಂಚಾಯತಿ ಹಾಗೂ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಪ್ರತಿ ವಾರ್ಡ್ ಗಳಲ್ಲಿ 6 ಜನ ಸದಸ್ಯರನ್ನು ಒಳಗೊಂಡ ಗ್ಯಾರಂಟಿ ಸಮಿತಿ ಸದಸ್ಯರನ್ನು ನೇಮಕ ಮಾಡಬೇಕು ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ. ಅದರಂತೆ ಜಿಲ್ಲೆಯ 154 ಗ್ರಾಮ ಪಂಚಾಯತಿ, 4 ನಗರಸಭೆ, 1 ಪುರಸಭೆ ಮತ್ತು 3 ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ 194 ವಾರ್ಡ್ ಮಟ್ಟದ ಸಮಿತಿಗಳನ್ನು ರಚಿಸಲಾಗುವುದು. ಪ್ರತಿ ಸಮಿತಿಯಲ್ಲಿ 6 ಸದಸ್ಯರನ್ನು ಒಳಗೊಂಡಂತೆ 1164 ಸದಸ್ಯರನ್ನು ಶೀಘ್ರದಲ್ಲೇ ನೇಮಕ ಮಾಡಲಾಗುವುದು ಎಂದು ಹೇಳಿದರು.

ಪ್ರತಿ ಸಮಿತಿಯಲ್ಲಿ ಎಸ್‌ಸಿ/ಎಸ್‌ಟಿ–1, ಅಲ್ಪಸಂಖ್ಯಾತರು–1, ಮಹಿಳೆಯರು–2, ಹಿಂದುಳಿದ ವರ್ಗ–1 ಹಾಗೂ ಸಾಮಾನ್ಯ ವರ್ಗ–1 ಸದಸ್ಯರಿಗೆ ಪ್ರಾತಿನಿಧ್ಯ ಕಲ್ಪಿಸಲಾಗುತ್ತಿದೆ. ಅಲ್ಪಸಂಖ್ಯಾತರ ಪ್ರಾತಿನಿಧ್ಯ ಲಭ್ಯವಿಲ್ಲದ ಸಂದರ್ಭದಲ್ಲಿ ಸಾಮಾನ್ಯ ವರ್ಗದಿಂದ ಸದಸ್ಯರನ್ನು ನೇಮಿಸಲು ಅವಕಾಶವಿದೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರೊಂದಿಗೆ ಚರ್ಚಿಸಿ ಹತ್ತು ದಿನದೊಳಗೆ ಸದಸ್ಯರ ಪಟ್ಟಿ ಸಲ್ಲಿಸುವಂತೆ ಹೇಳಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಧಾರ್ಮಿಕ ಕ್ಷೇತ್ರಗಳು, ಸಂಸ್ಥೆಗಳಿಗೆ ಅನುದಾನ ಘೋಷಣೆ



**ಮಂಗಳೂರು, ಸೆ.18:** ಪುತ್ತೂರು ತಾಲೂಕಿನಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ–2025–26 ರ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಪುತ್ತೂರು ತಾಲ್ಲೂಕಿನ ಬನ್ನೂರು ಗ್ರಾಮದ ಸೇಡಿಯಾಪು ಬಳಿ ಗುರುತಿಸಿರುವ ನಿವೇಶನದಲ್ಲಿ ಜಿಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜು, ಬೋಧನಾ ಆಸ್ಪತ್ರೆ, ಹಾಸ್ಟೆಲ್ ಮತ್ತಿತರ ಮೂಲಸೌಲಭ್ಯಗಳನ್ನು 549.79 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಅನುಮೋದನೆ ನೀಡಲಾಗಿದೆ. ಇದರಿಂದ ಜಿಲ್ಲೆಯ ಬಡ ರೋಗಿಗಳಿಗೆ ಅನುಕೂಲವಾಗಲಿದೆ.

**ದೇಗುಲ, ಮಸೀದಿಗಳಿಗೆ ಭರ್ಜರಿ ಅನುದಾನ ಘೋಷಣೆ:** ಧಾರ್ಮಿಕ ಕ್ಷೇತ್ರಗಳು ಮತ್ತು ಸಂಸ್ಥೆಗಳಿಗೆ ಅನುದಾನ–ಐತಿಹಾಸಿಕ ದೇವಾಲಯಗಳ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಐತಿಹಾಸಿಕ ಪರಂಪರೆಯ ಪ್ರತೀಕವಾಗಿರುವ ಪ್ರಮುಖ ದೇವಾಲಯಗಳು ಮತ್ತು ಮಠಗಳ ಸಮಗ್ರ ಅಭಿವೃದ್ಧಿಗಾಗಿ ಒಟ್ಟು 12 ಕೋಟಿ ರೂ. ಅನುದಾನವನ್ನು ಮಂಜೂರು ಮಾಡಲಾಗಿದೆ.

**ಕಡಲ ಕೊರೆತ ತಡೆಗೆ ಕೇಂದ್ರಕ್ಕೆ ಒತ್ತಾಯ:** ಕರಾವಳಿ ತೀರದಲ್ಲಿ ತೀವ್ರ ಸಮಸ್ಯೆಯಾಗಿರುವ ಕಡಲ ಕೊರೆತ ತಡೆ ಕಾಮಗಾರಿಗಳಿಗಾಗಿ ಎನ್‌ಡಿಆರ್‌ಎಫ್ ಮಾರ್ಗಸೂಚಿ ಅಡಿಯಲ್ಲಿ 208.94 ಕೋಟಿ ರೂ. ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಶೀಘ್ರವೇ ಹಣ ಬಿಡುಗಡೆ ಮಾಡುವಂತೆ ಕೇಂದ್ರವನ್ನು ಮತ್ತೊಮ್ಮೆ ಒತ್ತಾಯಿಸಲಾಗಿದೆ.

**ಮುಲ್ಕಿಯಲ್ಲಿ 150 ಎಕರೆಯಲ್ಲಿ ಬೃಹತ್ ಫಿಶರೀಸ್ ಪಾರ್ಕ್:** ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ 343.30 ಕಿ.ಮೀ. ಕರಾವಳಿ ತೀರವು ವಾರ್ಷಿಕ ಸುಮಾರು 7,000 ಕೋಟಿ ರೂ. ಅಧಿಕ ಸಾಗರೋತ್ಪನ್ನ ವಹಿವಾಟು ನಡೆಸುತ್ತಿದ್ದು, ರಾಜ್ಯದ ಬೊಕ್ಕಸಕ್ಕೆ ಅಪಾರ ತೆರಿಗೆ ಆದಾಯ ತರುತ್ತಿದೆ. ಮೀನುಗಾರಿಕೆಗೆ ಇನ್ನಷ್ಟು ಕೈಗಾರಿಕಾ ಸ್ಪರ್ಶ ನೀಡಲು ರಾಜ್ಯ ಸರ್ಕಾರವು ಫಿಶರೀಸ್ ಪಾರ್ಕ್ ಸ್ಥಾಪಿಸಲು ನಿರ್ಧರಿಸಿದೆ. ಇದಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆಯ ಮುಲ್ಕಿ ತಾಲ್ಲೂಕಿನ ಕೊಲ್ಲೂರು, ಬಳ್ಕುಂಜೆ ಮತ್ತು ಉಳಿಪಾಡಿ ಗ್ರಾಮಗಳಲ್ಲಿ ಕೆಐಎಡಿಬಿ ಸ್ವಾಧೀನಪಡಿಸಿಕೊಂಡ 316.79 ಎಕರೆ ಜಮೀನಿನ ಪೈಕಿ 150 ಎಕರೆ ಜಾಗವನ್ನು ಫಿಶರೀಸ್ ಪಾರ್ಕ್‌ಗಾಗಿ ಅಧಿಕೃತವಾಗಿ ಕಾಯ್ದಿರಿಸಲಾಗಿದೆ.

### ಶಿಕ್ಷಣ, ಧಾರ್ಮಿಕ ಸಂಸ್ಥೆಗಳಿಗೆ ನೆರವು

- ಸಾಮಾಜಿಕ ಸಾಮರಸ್ಯ ಮತ್ತು ಶೈಕ್ಷಣಿಕ ವಿಕಾಸದ ದೃಷ್ಟಿಯಿಂದ ಜಿಲ್ಲೆಯ ವಿವಿಧ ಶಿಕ್ಷಣ ಸಂಸ್ಥೆಗಳು, ಮಸೀದಿಗಳು ಮತ್ತು ಚರ್ಚ್/ಶ್ರೈನ್‌ಗಳಿಗೆ ಅನುದಾನ ಒದಗಿಸಲಾಗಿದೆ.
- ಸೈಯದ್ ಮದನಿ ಜುಮ್ಮಾ ಮಸೀದಿ (ಉಳ್ಳಾಲ ದರ್ಗಾ): 5.00 ಕೋಟಿ ರೂ.
- ದಾರುನ್ನೂರು ಎಜುಕೇಶನಲ್ ಸೆಂಟರ್, ಕಾಶಿಪಟ್ನ (ಬೆಳ್ತಂಗಡಿ): 1.50 ಕೋಟಿ ರೂ.
- ಅಲ್–ಮರ್ಕಜುಲ್ ಇಸ್ಲಾಮಿ (ರಿ), ಅಡ್ಯಾರ್ (ಮಂಗಳೂರು): 1.50 ಕೋಟಿ ರೂ.
- ಶಾಂತಿ ಎಜುಕೇಶನಲ್ ಟ್ರಸ್ಟ್, ಕುತ್ತಾರು/ಬಬ್ಬುಕಟ್ಟೆ (ಉಳ್ಳಾಲ): 1 ಕೋಟಿ ರೂ.
- ಮರಿಕ್ಕಳ ಜುಮ್ಮಾ ಮಸೀದಿ, ನರಿಂಗಾನ ಗ್ರಾಮ (ಸ್ಟಡಿ ಸೆಂಟರ್ ಮತ್ತು ವಾಚನಾಲಯ): 1 ಕೋಟಿ ರೂ.
- ಕರ್ನಾಟಕ ಇಸ್ಲಾಮಿಕ್ ಅಕಾಡೆಮಿ (KIA), ಕುಂಬ್ರ (ಪುತ್ತೂರು): 1 ಕೋಟಿ ರೂ.
- ಮರ್ಕಜುಲ್ ಹುದಾ ಮಹಿಳಾ ಕಾಲೇಜು, ಕುಂಬ್ರ (ಪುತ್ತೂರು): 1 ಕೋಟಿ ರೂ.
- ಸೌತ್ ಕರ್ನಾಟಕ ಸಲಾಫಿ ಮೂವ್‌ಮೆಂಟ್, ಮಂಗಳೂರು: 1 ಕೋಟಿ ರೂ.
- ಸಂತ ಜೋಸೆಫ್ ವಾಜ್ ಶ್ರೈನ್, ಮುಡಿಪು (ಉಳ್ಳಾಲ):1 ಕೋಟಿ ರೂ.
- ಇನ್‌ಫೆಂಟ್ ಜೀಸಸ್ ಶ್ರೈನ್, ಬಿಕರ್ನಕಟ್ಟೆ (ಮಂಗಳೂರು): 50 ಲಕ್ಷ ರೂ.
- ಸೇಂಟ್ ಲಾರೆನ್ಸ್ ಶ್ರೈನ್, ಬೊಂದೇಲ್ (ಮಂಗಳೂರು): 50 ಲಕ್ಷ ರೂ.

### ಯಾವ ದೇಗುಲಕ್ಕೆ ಎಷ್ಟು?

- ಶ್ರೀ ಮಹಾಲಿಂಗೇಶ್ವರ ದೇವಸ್ಥಾನ, ಪುತ್ತೂರು: 5 ಕೋಟಿ ರೂ.
- ಒಡಿಯೂರು ಮಠ, ವಿಟ್ಲ (ಬಂಟ್ವಾಳ/ಪುತ್ತೂರು ಕ್ಷೇತ್ರ): 1 ಕೋಟಿ ರೂ.
- ಶ್ರೀ ಧಾಮ ಮಾಣಿಲ ಮಠ (ಬಂಟ್ವಾಳ/ಪುತ್ತೂರು ಕ್ಷೇತ್ರ): 1 ಕೋಟಿ ರೂ.
- ಮಾಣಿಲಾ ಗ್ರಾಮ ಕುಕ್ಕಾಜೆ ಕಾಳಿಕಾಂಬ ಆಂಜನೇಯ ಸ್ವಾಮಿ ಕ್ಷೇತ್ರ: 1 ಕೋಟಿ ರೂ.
- ಕಾಣಿಯೂರು ಚಾಮುಂಡೇಶ್ವರಿ ಕ್ಷೇತ್ರ, ಕನ್ಯಾ ಗ್ರಾಮ: 1 ಕೋಟಿ ರೂ.
- ಪಿಲ್ಚಿ ಚಾಮುಂಡಿ ದೈವಸ್ಥಾನ ಕೊಂಡನ, ಕೋಟೆಕಾರ್ (ಉಳ್ಳಾಲ): 1 ಕೋಟಿ ರೂ.
- ಶ್ರೀ ರಾಮ ಕ್ಷೇತ್ರ, ಕನ್ಯಾಡಿ (ದಕ್ಷಿಣ ಕನ್ನಡ): 1 ಕೋಟಿ ರೂ.
- ಕೇಮಾರು ಮಠ, ಶ್ರೀ ಸಾಂದೀಪನಿ ಸಾಧನಾಶ್ರಮ: 1 ಕೋಟಿ ರೂ.

**ಉಡುಪಿ ಹೆಬ್ರಿಯಲ್ಲಿ ಕೈಗಾರಿಕಾ ವಲಯ – ಡೇಟಾ ಸೆಂಟರ್‌ಗಳಿಗೆ ಹಂಚಿಕೆ:** ಉಡುಪಿ ಜಿಲ್ಲೆಯ ಹೆಬ್ರಿ ತಾಲ್ಲೂಕಿನ ಕೆರೆಬೆಟ್ಟು ಮತ್ತು ಶಿವಪುರ ಗ್ರಾಮಗಳಲ್ಲಿ 113.89 ಎಕರೆ ಜಮೀನನ್ನು ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಭೂಮಾಲೀಕರಿಗೆ ಈಗಾಗಲೇ ಪರಿಹಾರ ವಿತರಿಸಲಾಗುತ್ತಿದ್ದು, ಹೆಚ್ಚುವರಿ ಜಮೀನು ಸ್ವಾಧೀನ ಪ್ರಕ್ರಿಯೆಯೂ ಪ್ರಗತಿಯಲ್ಲಿದೆ. ಈ ಪ್ರದೇಶವನ್ನು ಕೈಗಾರಿಕೋದ್ಯಮಿಗಳ ಬೇಡಿಕೆಗೆ ತಕ್ಕಂತೆ ಅಭಿವೃದ್ಧಿಪಡಿಸಿ ಡೇಟಾ ಸೆಂಟರ್‌ಗಳು, ನೂತನ ಕಾರ್ಖಾನೆಗಳು ಹಾಗೂ ಉತ್ಪಾದನಾ ಘಟಕಗಳ ಸ್ಥಾಪನೆಗೆ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

**ಕಂಬಳಕ್ಕೆ ಅನುದಾನ 1 ಕೋಟಿಗೆ ಏರಿಕೆ:** ಕರಾವಳಿಯ ರೈತಾಪಿ ಜನರ ಸಾಂಸ್ಕೃತಿಕ ಹೆಮ್ಮೆಯಾಗಿರುವ, ಕೋಣಗಳ ಓಟದ ವೀರ ಕ್ರೀಡೆ 'ಕಂಬಳ'ವನ್ನು ಜಾಗತಿಕ ಮಟ್ಟದಲ್ಲಿ ಪ್ರೋತ್ಸಾಹಿಸಲು ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಈ ಹಿಂದೆ ಕಂಬಳ ಕ್ರೀಡೆಗಾಗಿ ನೀಡಲಾಗುತ್ತಿದ್ದ 40 ಲಕ್ಷ ರೂ.,ಗಳ ಅನುದಾನವನ್ನು ಬರೋಬ್ಬರಿ 1 ಕೋಟಿ ರೂ. ಹೆಚ್ಚಿಸಲಾಗಿದೆ.

## ಓಪನ್ ಬಸ್‌ನಲ್ಲಿ ಮಂಗಳೂರು ಸಿಟಿ ರೌಂಡ್ಸ್ ನಡೆಸಿದ ಸಿಎಂ



**ಮಂಗಳೂರು, ಸೆ.18:** ಕರಾವಳಿ ನಗರಿ ಮಂಗಳೂರಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಿಟಿ ರೌಂಡ್ಸ್ ಇದೀಗ ಗಮನ ಸೆಳೆದಿದೆ. ವಿಧಾನಸಭೆ ಸ್ಪೀಕರ್ ಯು.ಟಿ. ಖಾದರ್ ಸೇರಿ ಸಚಿವ ಸಂಪುಟದ ಸಹೋದ್ಯೋಗಿಗಳು ಹಾಗೂ ಕಾಂಗ್ರೆಸ್ ನಾಯಕರ ಜೊತೆ ಡಿಕೆಶಿ ತೆರೆದ ಬಸ್‌ನಲ್ಲಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದರು.

ಮಂಗಳೂರಿನಲ್ಲಿ ನಡೆಯುತ್ತಿರುವ ವಿಶೇಷ ಸಚಿವ ಸಂಪುಟ ಸಭೆಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಹಾಗೂ ಸಚಿವರು ನಗರಕ್ಕೆ ಭೇಟಿ ನೀಡಿರುವ ಡಿ.ಕೆ. ಶಿವಕುಮಾರ್ ಅವರು ಇತಿಹಾಸ ಪ್ರಸಿದ್ಧ ಕದ್ರಿ ಶ್ರೀ ಮಂಜುನಾಥ ದೇವಸ್ಥಾನಕ್ಕೆ ತೆರಳಿ ದೇವರ ದರ್ಶನ ಪಡೆದರು. ದೇವಸ್ಥಾನಕ್ಕೆ ಆಗಮಿಸಿದ ಮುಖ್ಯಮಂತ್ರಿಗೆ ಪೂರ್ಣಕುಂಭ ಸ್ವಾಗತ ನೀಡಲಾಯಿತು. ವಿವಿಧ ಕಲಾತಂಡಗಳು ಸಾಂಪ್ರದಾಯಿಕ ಕಲಾ ಪ್ರದರ್ಶನದ ಮೂಲಕ ಸಿಎಂ ಅವರನ್ನು ಬರಮಾಡಿಕೊಂಡವು. ಕದ್ರಿ ದೇವಸ್ಥಾನದಲ್ಲಿ ಡಿ.ಕೆ. ಶಿವಕುಮಾರ್ ಅವರ ಪರವಾಗಿ ಮಂಜುನಾಥ ಸ್ವಾಮಿಗೆ ರುದ್ರಾಭಿಷೇಕ ನೆರವೇರಿಸಲಾಯಿತು. ಬಳಿಕ ಮಧ್ಯಾಹ್ನದ ಅನ್ನದಾನ ಸೇವೆಯಲ್ಲೂ ಸಿಎಂ ಭಾಗಿಯಾದರು. ಈ ವೇಳೆ ಸಂಪುಟದ ಹಲವು ಸಚಿವರು ಹಾಗೂ ಸ್ಥಳೀಯ ನಾಯಕರು ಉಪಸ್ಥಿತರಿದ್ದರು. ದೇವಸ್ಥಾನ ಭೇಟಿ ಬಳಿಕ ಸಾಮಾಜಿಕ ಜಾಲತಾಣದ ಇನ್‌ಫ್ಲುಯೆನ್ಸರ್‌ಗಳ ಜೊತೆ ಸಿಎಂ ತಿಂಡಿ ಸವಿದರು. ಮಂಗಳೂರು ಬನ್ಸ್ ಜತೆಗೆ ಸ್ಥಳೀಯ ತಿಂಡಿಯನ್ನು ಸವಿದು ಮುಖ್ಯಮಂತ್ರಿಗಳು ಖುಷಿಪಟ್ಟರು. ಬಳಿಕ ಯು.ಟಿ. ಖಾದರ್ ಹಾಗೂ ತಮ್ಮ ತಂಡದೊಂದಿಗೆ ತೆರೆದ ಬಸ್‌ನಲ್ಲಿ ಸಿಎಂ ನಗರ ಸುತ್ತಾಟ ನಡೆಸಿದರು. ಸಚಿವ ಸಂಪುಟ ಸಭೆಗೆ ಇದೇ ಬಸ್‌ನಲ್ಲಿ ಆಗಮಿಸಿದ ಡಿಕೆಶಿ ಹಾಗೂ ಸಚಿವರು ಸಭಾಸ್ಥಳಕ್ಕೆ ಬಂದಿಳಿದರು.

## ರಾಜಕೀಯಕ್ಕಿಂತ ಜನರ ಬದುಕು ಮುಖ್ಯ: ಡಿ.ಕೆ. ಶಿವಕುಮಾರ್

**ಮಂಗಳೂರು, ಸೆ. 18:** "ನಮಗೆ ರಾಜಕೀಯಕ್ಕಿಂತ ಜನರ ಬದುಕು ಮುಖ್ಯ. ಯಾವುದೇ ಪಕ್ಷದ ನಾಯಕರು ಗಾಬರಿಯಾಗುವ ಅಗತ್ಯವಿಲ್ಲ" ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಮಂಗಳೂರಿನಲ್ಲಿ ಸರ್ಕಿಟ್ ಹೌಸ್ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ನಾವು ಜನರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆ ಹೊರತು, ಜನರ ಭಾವನೆ ಮೇಲೆ ರಾಜಕೀಯ ಮಾಡಲ್ಲ. ಎಲ್ಲರ ಚಿಂತನೆಯಂತೆ ನಮ್ಮ ಸರ್ಕಾರ ಕೆಲಸ ಮಾಡಲಿದೆ. ಗಾಂಧಿ ಅವರು ಉಳಿದುಕೊಂಡಿದ್ದ ಮನೆಗೆ ಹೋಗಿ ಅಲ್ಲಿ ಉಪಹಾರ ಸೇವಿಸಿದೆ. ಮಂಗಳೂರು ಬನ್ಸ್, ದೋಸೆ ಸವಿದೆ. ಜಿಲ್ಲಾ ಮಂತ್ರಿಗಳು ಎಲ್ಲಿ ಕರೆದುಕೊಂಡು ಹೋಗುತ್ತಾರೋ ಅಲ್ಲಿಗೆ ಹೋಗುವೆ" ಎಂದು ಹೇಳಿದರು.

## ಅಭಿವೃದ್ಧಿ ಜತೆಗೆ ಪಕ್ಷ ಬಲವರ್ಧನೆಯೇ ಸಂಪುಟ ಸಭೆ ಉದ್ದೇಶ: ಡಾ.ಜಿ. ಪರಮೇಶ್ವರ್



ಉಡುಪಿ, ಸೆ.18: ಕರಾವಳಿ ಭಾಗದಲ್ಲಿ ಸಂಪುಟ ಸಭೆ ನಡೆಸುವ ಮೂಲಕ ಪಕ್ಷದ ಬಲವರ್ಧನೆಗೆ ಸರ್ಕಾರ ಮುಂದಾಗಿದೆ ಎಂಬ ವಿಪಕ್ಷಗಳ ಆರೋಪಕ್ಕೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿರುಗೇಟು ನೀಡಿದ್ದಾರೆ.

ಸರ್ಕಾರ ಉತ್ತಮ ಕೆಲಸ ಮಾಡಿದಾಗ ಸ್ವಾಭಾವಿಕವಾಗಿಯೇ ಪಕ್ಷಕ್ಕೂ ಬಲ ಸಿಗುತ್ತದೆ. ಕರಾವಳಿ ಜನರ ಬದುಕು ಹಾಗೂ ಅಭಿವೃದ್ಧಿಯಷ್ಟೇ ನಮ್ಮ ಆದ್ಯತೆ ಎಂದು ಸ್ಪಷ್ಟಪಡಿಸಿದ್ದಾರೆ. ಉಡುಪಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕರಾವಳಿ ಪ್ರದೇಶದ ಪ್ರಮುಖ ಸಮಸ್ಯೆಗಳು, ಕಸ್ತೂರಿರಂಗನ್ ವರದಿ ಹಾಗೂ ಪ್ರವಾಸೋದ್ಯಮದ ಕುರಿತು ಸರ್ಕಾರದ ನಿಲುವನ್ನು ವ್ಯಕ್ತಪಡಿಸಿದರು.ಕರಾವಳಿಯ ಜ್ವಲಂತ ಸಮಸ್ಯೆಯಾಗಿರುವ ಕಸ್ತೂರಿರಂಗನ್ ವರದಿಯನ್ನು ಸರ್ಕಾರ ಈಗಾಗಲೇ ಸ್ವಾಭಾವಿಕವಾಗಿ ತಿರಸ್ಕರಿಸಿದೆ. ಆದರೂ ಈ ಕುರಿತು ವಿಸ್ತೃತವಾಗಿ ಚರ್ಚಿಸಲು ಸೆಪ್ಟೆಂಬರ್ 21, 22 ಮತ್ತು 23ರಂದು ವಿಶೇಷ ಸಭೆ ಕರೆದು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು.

ರಾಜ್ಯದ ಬರಗಾಲ ಪರಿಸ್ಥಿತಿ ಹಾಗೂ ರೈತರು ಎದುರಿಸುತ್ತಿರುವ ಸಂಕಷ್ಟಗಳ ಕುರಿತು ಸಂಪುಟ ಸಭೆಯಲ್ಲಿ ಪರಾಮರ್ಶೆ ನಡೆಸಲಾಗುವುದು. ರೈತರಿಗಾಗಿಯೇ ಪ್ರತ್ಯೇಕ ಸಭೆ ನಡೆಸಿ ಸೂಕ್ತ ಪರಿಹಾರ ನೀಡಲು ಸರ್ಕಾರ ನಿರ್ಧರಿಸಿದೆ. ಕರಾವಳಿಯಲ್ಲೇ ಉದ್ಯೋಗ ಸೃಷ್ಟಿ–ಕರಾವಳಿ ಪ್ರವಾಸೋದ್ಯಮ ಗೋವಾ ಮಾದರಿಯಾಗಲಿದೆ ಎಂಬ ಯತ್ನಾಳ್ ಹೇಳಿಕೆಗೆ ಪ್ರತಿಕ್ರಿಯಿಸಿ, ಏನು ಮಾಡಬೇಕು, ಮಾಡಬಾರದು ಎಂಬ ಪರಿಜ್ಞಾನ ಸರ್ಕಾರಕ್ಕಿದೆ. ಇಲ್ಲಿನ ಯುವಕರಿಗೆ ಸ್ಥಳೀಯವಾಗಿ ಉದ್ಯೋಗ ಸಿಕ್ಕರೆ ಅವರು ಕೆಲಸಕ್ಕಾಗಿ ದುಬೈ ಅಥವಾ ಮುಂಬೈಗೆ ಹೋಗುವುದು ತಪ್ಪುತ್ತದೆ. ನಮ್ಮ ಮಕ್ಕಳು ನಮ್ಮ ನೆಲದಲ್ಲೇ ಉಳಿಯಬೇಕು ಎನ್ನುವುದು ನಮ್ಮ ಆಶಯ ಎಂದರು.

## ರಾಜ್ಯದಲ್ಲಿ ಸಿನಿಮಾ ಟಿಕೆಟ್ ಮೇಲೆ ಶೇ.2 ಸೆಸ್, ಸೆ.30ರಿಂದ ಜಾರಿ

■ ರಾಜ್ಯದ ಸಿನಿಪ್ರಿಯರಿಗೆ ಬಿಗ್‌ಶಾಕ್: ಸಂಗ್ರಹವಾಗುವ ಹಣ ಚಿತ್ರರಂಗದ ಕಾರ್ಮಿಕರ ಕಲ್ಯಾಣಕ್ಕೆ ಬಳಕೆ: ಸರ್ಕಾರ ಸ್ಪಷ್ಟನೆ

**ಬೆಂಗಳೂರು, ಸೆ.18:** ರಾಜ್ಯದ ಸಿನಿಮಾ ಪ್ರೇಕ್ಷಕರಿಗೆ ಕರ್ನಾಟಕ ಸರ್ಕಾರ ಭಾರಿ ಆಘಾತ ನೀಡಿದ್ದು, ಸಿನಿಮಾ ಟಿಕೆಟ್‌ಗಳ ಮೇಲೆ ಶೇ.2ರಷ್ಟು ಹೆಚ್ಚುವರಿ ಸೆಸ್ (ಉಪಕರ) ವಿಧಿಸಲು ಮಹತ್ವದ ನಿರ್ಧಾರ ಕೈಗೊಂಡಿದೆ. 2024ರಲ್ಲಿ ಸರ್ಕಾರ ಮಂಡಿಸಿದ್ದ 'ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ'ಕ್ಕೆ ಕೊನೆಗೂ ಚಾಲನೆ ಸಿಕ್ಕಿದ್ದು, ಈ ಹೊಸ ನಿಯಮವು ಸೆಪ್ಟೆಂಬರ್ 30ರಿಂದ ಅಧಿಕೃತವಾಗಿ ರಾಜ್ಯಾದ್ಯಂತ ಜಾರಿಗೆ ಬರಲಿದೆ. ಈ ಪ್ರಮುಖ ಮಸೂದೆಗೆ 2024ರ ಸೆಪ್ಟೆಂಬರ್ 23 ರಂದು ಕರ್ನಾಟಕದ ರಾಜ್ಯಪಾಲರು ಅಂಕಿತ ಹಾಕಿದ್ದರು. ಅದಾದ ಮರುದಿನವೇ (ಸೆಪ್ಟೆಂಬರ್ 24) ಸರ್ಕಾರದ ವಿಶೇಷ ರಾಜ್ಯಪತ್ರದಲ್ಲಿ ಇದನ್ನು ಪ್ರಕಟಿಸಲಾಗಿತ್ತು. ಸುಮಾರು ಎರಡು ವರ್ಷಗಳ ಸುದೀರ್ಘ ಪ್ರಕ್ರಿಯೆ ಮತ್ತು ತಯಾರಿಯ ಬಳಿಕ ಇದೀಗ ಅಧಿನಿಯಮವನ್ನು ಸಂಪೂರ್ಣವಾಗಿ ಜಾರಿಗೆ ತರಲಾಗುತ್ತಿದೆ. ಹೊಸ ನಿಯಮ ಜಾರಿಯಾದ ಬಳಿಕ ಮಲ್ಟಿಪ್ಲೆಕ್ಸ್ ಸೇರಿದಂತೆ ಸಿನಿಮಾ ಮಂದಿರಗಳಲ್ಲಿ ಸಿನಿಮಾ ನೋಡುವ ಗ್ರಾಹಕರು ಟಿಕೆಟ್ ದರದ ಜೊತೆಗೆ ಹೆಚ್ಚುವರಿಯಾಗಿ 2% ಸೆಸ್ ಪಾವತಿಸ ಬೇಕಾಗುತ್ತದೆ. ಉದಾಹರಣೆಗೆ, 200 ರೂ. ಮುಖಬೆಲೆಯ ಟಿಕೆಟ್ ಖರೀದಿಸಿದರೆ ಹೆಚ್ಚುವರಿಯಾಗಿ 4 ರೂ. ಸೆಸ್ ನೀಡಬೇಕಾಗುತ್ತದೆ. ಟಿಕೆಟ್‌ಗಳ ಮೂಲಕ ಸಂಗ್ರಹವಾಗುವ ಈ ಹಣವನ್ನು ಸಂಪೂರ್ಣವಾಗಿ ಸಿನಿಮಾ ರಂಗದ ಕಾರ್ಮಿಕರ ಕಲ್ಯಾಣ ಹಾಗೂ ಕ್ಷೇಮಾಭಿವೃದ್ಧಿ ಯೋಜನೆಗಳಿಗಾಗಿ ಮಾತ್ರ ಬಳಸಲಾಗುವುದು ಎಂದು ಸರ್ಕಾರ ಸ್ಪಷ್ಟಪಡಿಸಿದೆ.

## ಸುಸ್ಥಿರ ಡೇಟಾ ಸೆಂಟರ್ ನೀತಿ 2026–2031ಕ್ಕೆ ಸಂಪುಟ ಒಪ್ಪಿಗೆ



■ ವಿದ್ಯುತ್, ನೀರು ಮತ್ತು ಇತರ ಸಂಪನ್ಮೂಲಗಳ ಸಮರ್ಥ ಬಳಕೆ, ಹಸಿರು ತಂತ್ರಜ್ಞಾನ, ಇಂಗಾಲ ತಗ್ಗಿಸುವ ಕ್ರಮಗಳಿಗೆ ಒತ್ತು

**ಮಂಗಳೂರು, ಸೆ.18:** ಕರ್ನಾಟಕ ಸುಸ್ಥಿರ ಡೇಟಾ ಸೆಂಟರ್ ನೀತಿ 2026–2031ಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದು ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಹೊಸನೀತಿಯ ಮೂಲಕ ಕರ್ನಾಟಕವನ್ನು ಸುಸ್ಥಿರ ಹಾಗೂ ಜಾಗತಿಕ ಮಟ್ಟದ ಡೇಟಾ ಸೆಂಟರ್ ಹಬ್ ಆಗಿ ರೂಪಿಸುವ ಉದ್ದೇಶ ಹೊಂದಲಾಗಿದೆ. ಡೇಟಾ ಸೆಂಟರ್‌ಗಳ ವಿಸ್ತರಣೆಯೊಂದಿಗೆ ವಿದ್ಯುತ್, ನೀರು ಮತ್ತು ಇತರೆ ಸಂಪನ್ಮೂಲಗಳ ಸಮರ್ಥ ಬಳಕೆ, ನವೀಕರಿಸಬಹುದಾದ ಇಂಧನ, ಹಸಿರು ತಂತ್ರಜ್ಞಾನ ಹಾಗೂ ಕಾರ್ಬನ್ ಹೊರಸೂಸುವಿಕೆ ತಗ್ಗಿಸುವ ಕ್ರಮಗಳಿಗೆ ನೀತಿಯಲ್ಲಿ ಒತ್ತು ನೀಡಲಾಗಿದೆ.

2026ರಿಂದ 2031ರವರೆಗೆ ಜಾರಿಯಾಗಲಿರುವ ನೀತಿಯಡಿ ಒಟ್ಟು ರೂ.1,300.45 ಕೋಟಿ ಮೊತ್ತದ ಬಜೆಟ್ ಚೌಕಟ್ಟಿಗೆ ಒಪ್ಪಿಗೆ ಸಿಕ್ಕಿದ್ದು, ಬಂಡವಾಳ ಹೂಡಿಕೆ, ಎಡ್ಜ್ ಡೇಟಾ ಸೆಂಟರ್‌ಗಳು, ವಿದ್ಯುತ್ ಮತ್ತು ಡಿಜಿಟಲ್ ಮೂಲಸೌಕರ್ಯ, ಮೌಲ್ಯ ಸರಪಳಿ, ಸಂಶೋಧನೆ ಮತ್ತು ಅಭಿವೃದ್ಧಿ, ಕೌಶಲ್ಯಾಭಿವೃದ್ಧಿ ಹಾಗೂ ಸುಸ್ಥಿರತೆ ಆಧಾರಿತ ಪ್ರೋತ್ಸಾಹಕಗಳಿಗೆ ಆದ್ಯತೆ ನೀಡಲಾಗಿದೆ.

ಡೇಟಾ ಸೆಂಟರ್ ಕ್ಷೇತ್ರದಲ್ಲಿ ಸಂಶೋಧನೆ ಮತ್ತು ನವೋದ್ಯಮಕ್ಕೆ ಉತ್ತೇಜನ ನೀಡಲು ಡೇಟಾ ಸೆಂಟರ್‌ಗಳ ಅತ್ಯುತ್ತಮತಾ ಕೇಂದ್ರ ಸ್ಥಾಪನೆ, ಸುಸ್ಥಿರ ಡೇಟಾ ಸೆಂಟರ್ ವಲಯಗಳು ಹಾಗೂ ಡೇಟಾ ಸೆಂಟರ್ ಪಾರ್ಕ್‌ಗಳ ಅಭಿವೃದ್ಧಿ ಮತ್ತು ರಾಜ್ಯದ ವಿವಿಧೆಡೆ ಡೇಟಾ ಸೆಂಟರ್‌ಗಳಿಗೆ ಅಗತ್ಯವಿರುವ ವಿದ್ಯುತ್, ನೀರು ಹಾಗೂ ಇತರೆ ಮೂಲಸೌಕರ್ಯಗಳ ಲಭ್ಯತೆಯನ್ನು ಗುರುತಿಸುವ ಸಂಪನ್ಮೂಲ ಲಭ್ಯತಾ ನಕ್ಷೆ ಸಿದ್ಧಪಡಿಸುವುದು ನೀತಿಯ ಪ್ರಮುಖ ಅಂಶಗಳಾಗಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಮಂಗಳೂರು, ಮೈಸೂರು ಸೇರಿದಂತೆ ಬೆಂಗಳೂರಿನ ಹೊರಗಿನ ಪ್ರದೇಶಗಳಲ್ಲಿಯೂ ಡೇಟಾ ಸೆಂಟರ್ ಹೂಡಿಕೆಗೆ ಅವಕಾಶ ಕಲ್ಪಿಸುವ ಉದ್ದೇಶವನ್ನು ನೀತಿ ಹೊಂದಿದೆ ಎಂದು ಸಚಿವರು ಹೇಳಿದ್ದಾರೆ.

ಕೃತಕ ಬುದ್ಧಿಮತ್ತೆ ಮತ್ತು ಹೊಸ ತಂತ್ರಜ್ಞಾನಗಳ ಬೆಳವಣಿಗೆಯೊಂದಿಗೆ ಡೇಟಾ ಸೆಂಟರ್ ಮೂಲಸೌಕರ್ಯದ ಬೇಡಿಕೆ ವೇಗವಾಗಿ ಹೆಚ್ಚುತ್ತಿದೆ. ಕರ್ನಾಟಕದ ಮುಂದಿನ ಹಂತದ ಡಿಜಿಟಲ್ ಬೆಳವಣಿಗೆ ಸುಸ್ಥಿರವಾಗಿರಬೇಕು ಎಂಬ ಉದ್ದೇಶದಿಂದ ಹೊಸ ನೀತಿಯಲ್ಲಿ ವಿದ್ಯುತ್ ಮತ್ತು ನೀರಿನ ದಕ್ಷತೆ, ನವೀಕರಿಸಬಹುದಾದ ಇಂಧನ, ಹಸಿರು ತಂತ್ರಜ್ಞಾನ ಹಾಗೂ ಬೆಂಗಳೂರಿನ ಹೊರಗಿನ ಪ್ರದೇಶಗಳಲ್ಲಿ ಹೂಡಿಕೆಗಳಿಗೆ ಒತ್ತು ನೀಡಲಾಗಿದೆ, ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

### ಮತದಾರರ ಕರಡು ಪಟ್ಟಿಯಲ್ಲಿ ಭಾರಿ ಲೋಪ

## ದೋಷ ಸರಿಪಡಿಸದೆ ಪ್ರಕ್ರಿಯೆ ಪೂರ್ಣಗೊಳಿಸಬೇಡಿ: ಬಿ.ಕೆ.ಹರಿಪ್ರಸಾದ್



■ ರಾಜ್ಯ ಚುನಾವಣಾ ಆಯೋಗಕ್ಕೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಪತ್ರ

**ಬೆಂಗಳೂರು, ಸೆ.18:** ಕರ್ನಾಟಕದಲ್ಲಿ 2026ರ ಮತದಾರರ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕರಡು ಪಟ್ಟಿಯಲ್ಲಿ ಗಂಭೀರ ವ್ಯತ್ಯಾಸಗಳು, ಲೋಪಗಳು ಹಾಗೂ ನಿರಂಕುಶ ಕ್ರಮಗಳು ಕಂಡುಬಂದಿವೆ ಎಂದು ಆರೋಪಿಸಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಪತ್ರ ಬರೆದಿದೆ. ಈ ಗಂಭೀರ ದೋಷಗಳನ್ನು ಸರಿಪಡಿಸದ ಹೊರತು ಪ್ರಕ್ರಿಯೆಯನ್ನು ಆತುರವಾಗಿ ಮುಕ್ತಾಯಗೊಳಿಸಬಾರದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಒತ್ತಾಯಿಸಿದ್ದಾರೆ. 2025ರ ಅಂತಿಮ ಮತದಾರರ ಪಟ್ಟಿಯ ಆಧಾರದ ಮೇಲೆ ಒಟ್ಟು 5,54,22,344 ಮತದಾರರೊಂದಿಗೆ ಜೂನ್ 30ರಂದು ಆರಂಭವಾದ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಸೇರ್ಪಡೆ ಅಥವಾ ತಿದ್ದುಪಡಿ ಆಗಿವೆಯೇ ಎಂಬ ಬಗ್ಗೆ ಸ್ಪಷ್ಟತೆಯಿಲ್ಲ. ಎರಡೂ ಪಟ್ಟಿಗಳಲ್ಲಿ ಮತದಾರರ ಒಟ್ಟು ಸಂಖ್ಯೆ ಒಂದೇ ಆಗಿರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ.

ಇದಲ್ಲದೆ, 2025ರ ಪಟ್ಟಿಯಿಂದ ಕೈಬಿಡಲಾದ ಹೆಸರುಗಳು ಮತ್ತು 2026ರ ಎಎಸ್‌ಡಿಡಿಒ ಅಂಕಿ–ಅಂಶಗಳಲ್ಲಿ ಸ್ಪಷ್ಟ ಹೊಂದಾಣಿಕೆಯಿಲ್ಲದೆ ಗಂಭೀರ ವ್ಯತ್ಯಾಸಗಳಿದ್ದು, ಇವುಗಳನ್ನು ಕ್ಷೇತ್ರವಾರು ಮರುಪರಿಶೀಲನೆ ನಡೆಸಿ ಸರಿಪಡಿಸಬೇಕಿದೆ.

ಕರಡು ಪಟ್ಟಿಯಿಂದ ಹೊರಗುಳಿದ ಮತದಾರರ ಹೆಸರುಗಳು 2025ರ ಪಟ್ಟಿಯ ಸಂಬಂಧಪಟ್ಟ ಬೂತ್‌ಗಳಲ್ಲಿ ಕಾಣಿಸುತ್ತಿಲ್ಲದಿರುವುದು ಗಂಭೀರ ತಾಂತ್ರಿಕ ದೋಷವಾಗಿದೆ. ಜತೆಗೆ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ವ್ಯಾಪಕ ಪ್ರಮಾಣದಲ್ಲಿ ಮತಗಟ್ಟೆಗಳನ್ನು (ಬೂತ್) ಸ್ಥಳಾಂತರ ಮಾಡಲಾಗಿದೆ. ಈ ಹಠಾತ್ ಬದಲಾವಣೆಯಿಂದಾಗಿ ಫಾರ್ಮ್–20 ವಿಶ್ಲೇಷಣೆ ಮತ್ತು ಬೂತ್‌ವಾರು ಹೋಲಿಕೆ ಮಾಡುವುದು ಕಷ್ಟಕರವಾಗಿದ್ದು, ಆಯೋಗವು ಹಳೆಯ ಮತ್ತು ಹೊಸ ಬೂತ್‌ಗಳ ಮ್ಯಾಪಿಂಗ್ ವಿವರ ಹಾಗೂ ಸ್ಥಳಾಂತರಕ್ಕೆ ಸೂಕ್ತ ಕಾರಣ ನೀಡಬೇಕು ಎಂದು ಪತ್ರದಲ್ಲಿ ಆಗ್ರಹಿಸಿದ್ದಾರೆ.

# ಆಸ್ತಿ ಶುಲ್ಕದ ಮೇಲೆ ವಿಧಿಸಿರುವ ಸಾಫ್ಟ್‌ವೇರ್ ಸೆಸ್ ರದ್ದು ಮಾಡುವಂತೆ ಬಿಜೆಪಿ ಆಗ್ರಹ

### ಕಾಂಗ್ರೆಸ್ ಸರ್ಕಾರಕ್ಕೆ ಹಲವು ಪ್ರಶ್ನೆ ಮುಂದಿಟ್ಟ ಕಮಲ ಪಕ್ಷ

**ಬೆಂಗಳೂರು, ಸೆ.18:** ರಾಜ್ಯದಲ್ಲಿ ಆಸ್ತಿ ತೆರಿಗೆ ಪಾವತಿದಾರರ ಮೇಲೆ ಸರ್ಕಾರ ಹೊಸದಾಗಿ ಸಾಫ್ಟ್‌ವೇರ್ ಶುಲ್ಕದ ಹೊರೆ ಹೊರಿಸಿರುವುದು ಈಗ ಭಾರಿ ರಾಜಕೀಯ ಕಾಳಗಕ್ಕೆ ಕಾರಣವಾಗಿದೆ. ವಸತಿ ಆಸ್ತಿಗಳಿಗೆ ಪ್ರತಿ ಸ್ವತ್ತಿಗೆ 200 ಹಾಗೂ ವಾಣಿಜ್ಯ ಆಸ್ತಿಗಳಿಗೆ 1,000 ಸಾಫ್ಟ್ ವೇರ್ ವೆಚ್ಚವನ್ನು ವಿಧಿಸಿರುವುದನ್ನು ಖಂಡಿಸಿ ಪ್ರತಿಪಕ್ಷ ಬಿಜೆಪಿ, ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಸರ್ಕಾರದ ತಂತ್ರಜ್ಞಾನ ವ್ಯವಸ್ಥೆ ಮತ್ತು ತಂತ್ರಾಂಶಗಳ ಉನ್ನತೀಕರಣಕ್ಕೆ ಸಾರ್ವಜನಿಕರ ಜೇಬಿನಿಂದ ಏಕಪಕ್ಷೀಯವಾಗಿ ಹಣ ವಸೂಲಿ ಮಾಡುತ್ತಿರುವುದು ಎಷ್ಟು ಸರಿ ಎಂದು ಬಿಜೆಪಿ ಗಂಭೀರವಾಗಿ ಪ್ರಶ್ನಿಸಿದೆ.

ವಿಧಿಸಲಾಗಿರುವ ಈ ಶುಲ್ಕದ ಸಂಪೂರ್ಣ ವಿವರ (ಬ್ರೇಕ್ ಅಪ್) ಮತ್ತು ಹೊಣೆಗಾರಿಕೆಯನ್ನು ಸಾರ್ವಜನಿಕರ ಮುಂದಿಡಬೇಕು. ಡಿಜಿಟಲೀಕರಣ ಮತ್ತು ಆಡಳಿತ ಸುಧಾರಣೆ ಹೆಸರಿನಲ್ಲಿ ನಾಗರಿಕರ ಮೇಲೆ ಅನಗತ್ಯ ಆರ್ಥಿಕ ಹೊರೆ ಹೇರಲಾಗುತ್ತಿದ್ದು, ತಕ್ಷಣವೇ ಈ ಶುಲ್ಕವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದೆ.

ಸರ್ಕಾರದ ಈ ನೂತನ ನಿರ್ಧಾರವನ್ನು ಹಿಂದಿನ ಸರಣಿ ತೆರಿಗೆ ಮತ್ತು ದರ ಏರಿಕೆಗಳೊಂದಿಗೆ ಜೋಡಿಸಿ ಸಾರ್ವಜನಿಕ ವಲಯದಲ್ಲೂ ಅಸಮಾಧಾನ ವ್ಯಕ್ತವಾಗುತ್ತಿದೆ. ಗ್ಯಾರಂಟಿ ಯೋಜನೆಗಳ ನಿರ್ವಹಣೆಯ ನೆಪದಲ್ಲಿ ಇತ್ತೀಚಿನ ತಿಂಗಳುಗಳಲ್ಲಿ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಮತ್ತು ವಿದ್ಯುತ್ ಶುಲ್ಕಗಳನ್ನು ಹೆಚ್ಚಿಸಲಾಗಿತ್ತು.ಇತ್ತೀಚೆಗಷ್ಟೇ ರಾಜ್ಯಾದ್ಯಂತ ಆಸ್ತಿ ಮಾರ್ಗಸೂಚಿ ದರಗಳನ್ನು ಹೆಚ್ಚಿಸುವ ಮೂಲಕ ನೋಂದಣಿ ಮತ್ತು ಮುದ್ರಾಂಕ ಶುಲ್ಕದ ಹೊರೆ ಹೆಚ್ಚಿಸಲಾಗಿತ್ತು.

ಇದೀಗ ಪಾಲಿಕೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಇ–ಆಡಳಿತ ಆಪ್‌ಗಳು ಹಾಗೂ ತಂತ್ರಾಂಶಗಳ ನಿರ್ವಹಣೆಗೆ ತೆರಿಗೆದಾರರೇ ಹಣ ನೀಡಬೇಕು ಎನ್ನುವ ಹೊಸ ನಿಯಮ ತಂದಿರುವುದು ಸಾರ್ವಜನಿಕರಲ್ಲಿ ಆಕ್ರೋಶ ಮೂಡಿಸಿದೆ.

ಒಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ, ಯಾವುದೇ ಮುನ್ಸೂಚನೆ ಇಲ್ಲದೆ ಆಸ್ತಿ ತೆರಿಗೆಯಲ್ಲಿ ತಂತ್ರಜ್ಞಾನದ ಹೆಸರಿನಲ್ಲಿ ಸಾಫ್ಟ್‌ವೇರ್ ಶುಲ್ಕ ಸೇರಿಸಿರುವುದು ಗಾಯದ ಮೇಲೆ ಬಿಸಿತುಪ್ಪ ಸುರಿದಂತಾಗಿದೆ. ಸರ್ಕಾರ ಈ ಜನವಿರೋಧಿ ನಿರ್ಧಾರವನ್ನು ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ನಡೆಸುವುದಾಗಿ ಪ್ರತಿಪಕ್ಷಗಳು ಎಚ್ಚರಿಕೆ ನೀಡಿವೆ.

**ಕಾಂಗ್ರೆಸ್ ಸರ್ಕಾರಕ್ಕೆ ಬಿಜೆಪಿಯ ಪ್ರಶ್ನೆಗಳು:** ಹೊಸ ಶುಲ್ಕದ ಕುರಿತು ಬಿಜೆಪಿ ಮುಖ್ಯವಾಗಿ ಮೂರು ಅಂಶಗಳನ್ನು ಮುಂದಿಟ್ಟಿದ್ದು, 200 ಮತ್ತು 1,000 ಶುಲ್ಕ ನಿಗದಿಪಡಿಸಲು ಬಳಸಿದ ವೆಚ್ಚದ ಲೆಕ್ಕಾಚಾರವೇನು, ಸಾಫ್ಟ್‌ವೇರ್ ಅಭಿವೃದ್ಧಿ, ನಿರ್ವಹಣೆ ಮತ್ತು ತಾಂತ್ರಿಕ ಸೇವೆಗೆ ಒಟ್ಟು ಎಷ್ಟು ಹಣ ಖರ್ಚಾಗುತ್ತಿದೆ, ಈ ವೆಚ್ಚವನ್ನು ಸಾಮಾನ್ಯ ಆಡಳಿತ ವೆಚ್ಚವಾಗಿ ಭರಿಸುವ ಬದಲು ತೆರಿಗೆದಾರರ ಮೇಲೆ ಪ್ರತ್ಯೇಕ ಶುಲ್ಕವಾಗಿ ಹಾಕಿರುವುದಕ್ಕೆ ಕಾರಣವೇನು. ಸರ್ಕಾರ ಬಹಿರಂಗಪಡಿಸಬೇಕು ಅಥವಾ ಶುಲ್ಕವನ್ನು ಹಿಂಪಡೆಯಬೇಕು ಎಂದು ಬಿಜೆಪಿ ಒತ್ತಾಯಿಸಿದೆ.

## ಬರಪರಿಹಾರಕ್ಕೆ ತಕ್ಷಣವೇ ಧಾವಿಸಿ: ಆರ್.ಅಶೋಕ್



ಬರಪೀಡಿತ ತಾಲೂಕುಗಳಲ್ಲಿ ಕುಡಿಯುವ ನೀರು, ಬೆಳೆ ನಷ್ಟ ಪರಿಹಾರ ಹಾಗೂ ರೈತರ ನೆರವಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರೈತರ ಬದುಕಿನ ಪ್ರಶ್ನೆಯ ವಿಚಾರದಲ್ಲಿ ರಾಜ್ಯ ಸರ್ಕಾರದ ನಿರ್ಲಕ್ಷ್ಯವನ್ನು ಎಂದಿಗೂ ಸಹಿಸಲಾಗದು, ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಬೇಕು. ಇಲ್ಲದಿದ್ದರೆ, ರೈತರ ಪರವಾಗಿ ಸದನದ ಒಳಗೆ ಮತ್ತು ಹೊರಗೆ ಹೋರಾಟ ನಡೆಯಲಿದೆ ಎಂದು ಹೇಳಿದ್ದಾರೆ. 101 ತಾಲೂಕುಗಳನ್ನು ಬರಪೀಡಿತ ತಾಲೂಕು ಎಂದು ಘೋಷಣೆ ಮಾಡಿದ ರಾಜ್ಯ ಸರ್ಕಾರ ಬಿಜೆಪಿಯ ಒತ್ತಡಕ್ಕೆ ಮಣಿದು ಇನ್ನೂ 23 ತಾಲೂಕುಗಳನ್ನು ಆ ಪಟ್ಟಿಗೆ ಸೇರಿಸಿದೆ. ಇದರ ಜೊತೆಗೆ 53 ತಾಲೂಕುಗಳಲ್ಲಿ ಮಾಹಿತಿ ಕಲೆಹಾಕಲು ಸೂಚಿಸಿದೆ. ಇದು ಬಿಜೆಪಿ ಹೋರಾಟಕ್ಕೆ ಸಿಕ್ಕ ಗೆಲುವು ಎಂದು ತಿಳಿಸಿದ್ದಾರೆ.

# ಮಾನವ ಕಳ್ಳಸಾಗಣೆ ಪ್ರಕರಣ: 8 ಬಾಂಗ್ಲಾದೇಶಿ ಸೇರಿ ಒಂಬತ್ತು ಮಂದಿಗೆ ಜೀವಾವಧಿ ಶಿಕ್ಷೆ

**ಹೈದರಾಬಾದ್,ಸೆ.18:** ಉತ್ತಮ ಉದ್ಯೋಗ ಹಾಗೂ ಹೆಚ್ಚಿನ ವೇತನದ ಆಮಿಷವೊಡ್ಡಿ ಬಾಂಗ್ಲಾದೇಶಿ ಮಹಿಳೆಯರನ್ನು ಭಾರತಕ್ಕೆ ಕರೆತಂದು ಬಲವಂತವಾಗಿ ವೇಶ್ಯಾವಾಟಿಕೆಗೆ ತಳ್ಳಿದ ಪ್ರಕರಣದಲ್ಲಿ ಎಂಟು ಬಾಂಗ್ಲಾದೇಶಿ ಪ್ರಜೆಗಳು ಸೇರಿದಂತೆ ಒಟ್ಟು 9 ಮಂದಿ ಆರೋಪಿಗಳಿಗೆ ಹೈದರಾಬಾದ್‌ನ ವಿಶೇಷ ಎನ್‌ಐಎ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

2019ರಲ್ಲಿ ಬೆಳಕಿಗೆ ಬಂದಿದ್ದ ಮಾನವ ಕಳ್ಳಸಾಗಣೆ ಜಾಲಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ನ್ಯಾಯಾಲಯ ತೀರ್ಪು ಪ್ರಕಟಿಸಿದೆ. ಅಪರಾಧಿಗಳಿಗೆ 1.37 ಲಕ್ಷ ದಂಡವನ್ನೂ ವಿಧಿಸಲಾಗಿದ್ದು, ದಂಡ ಪಾವತಿಸದಿದ್ದರೆ ಹೆಚ್ಚುವರಿಯಾಗಿ ಮೂರು ತಿಂಗಳ ಸಾಮಾನ್ಯ ಜೈಲುಶಿಕ್ಷೆ ಅನುಭವಿಸಬೇಕು ಎಂದು ಆದೇಶಿಸಲಾಗಿದೆ.

ಉದ್ಯೋಗ ಹಾಗೂ ಉತ್ತಮ ವೇತನದ ಆಮಿಷವೊಡ್ಡಿ ಬಾಂಗ್ಲಾದೇಶಿ ಮಹಿಳೆಯರನ್ನು ಭಾರತಕ್ಕೆ ಕರೆತರುತ್ತಿದ್ದ ಆರೋಪಿಗಳು, ಬಳಿಕ ಅವರನ್ನು ಬಲವಂತವಾಗಿ ವೇಶ್ಯಾವಾಟಿಕೆಗೆ




ದೂಡುತ್ತಿದ್ದರು ಎಂದು ತನಿಖೆಯಲ್ಲಿ ಪತ್ತೆಯಾಗಿತ್ತು.

2019ರ ಸೆಪ್ಟೆಂಬರ್‌ನಲ್ಲಿ ತೆಲಂಗಾಣ ಪೊಲೀಸರು ಹೈದರಾಬಾದ್‌ನ ಪಹಾಡಿ ಶರೀಫ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಿ ಕಾರ್ಯಾಚರಣೆ ನಡೆಸಿದ್ದರು. ಜಲಪಲ್ಲಿ ಗ್ರಾಮದಲ್ಲಿ ನಡೆಯುತ್ತಿದ್ದ ವೇಶ್ಯಾವಾಟಿಕೆ ಕೇಂದ್ರದ ಮೇಲೆ ದಾಳಿ ನಡೆಸಿ ಮೂವರು ಬಾಂಗ್ಲಾದೇಶಿ ಮಹಿಳೆಯರನ್ನು ರಕ್ಷಿಸಲಾಗಿತ್ತು. ಬಾಲಾಪುರದ ಮಹಮೂದ್ ಕಾಲೋನಿಯ ಮನೆಯೊಂದರಿಂದ ಮತ್ತೊಬ್ಬ ಮಹಿಳೆಯನ್ನೂ ರಕ್ಷಿಸಲಾಗಿತ್ತು.ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ರಾಷ್ಟ್ರೀಯ ತನಿಖಾ ಸಂಸ್ಥೆ ತನಿಖೆಯನ್ನು ವಹಿಸಿಕೊಂಡಿತು.ತನಿಖೆ ಮುಂದುವರಿಸಿದ ಎನ್‌ಐಎ, ಆರೋಪಿಗಳ ವಿರುದ್ಧ 2020ರ ಅಕ್ಟೋಬರ್ 17ರಂದು ಆರೋಪಪಟ್ಟಿ ಸಲ್ಲಿಸಿತು. 12 ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ಅವರಲ್ಲಿ ಕೆಲವರು ತಲೆಮರೆಸಿಕೊಂಡಿದ್ದರು. 2019 ಮತ್ತು 2020ರಲ್ಲಿ ಪಶ್ಚಿಮ ಬಂಗಾಳ, ತೆಲಂಗಾಣ ಸೇರಿದಂತೆ ವಿವಿಧೆಡೆ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಲಾಗಿತ್ತು.


ಶಿಕ್ಷೆಗೆ ಗುರಿಯಾದವರನ್ನು ರೂಹುಲ್ ಅಮೀನ್ ಧಾಲಿ, ಮೊಹಮ್ಮದ್ ಯೂಸುಫ್ ಖಾನ್ ಅಲಿಯಾಸ್ ಮೊಹಮ್ಮದ್ ಇಮ್ರಾನ್, ಬಿಥಿ ಬೇಗಂ ಅಲಿಯಾಸ್ ಖದೀಜಾ ಶೇಖ್, ಇಮಾಮುಲ್ ಗಾಜಿ ಅಲಿಯಾಸ್ ಮೊಹಮ್ಮದ್ ರಾಣಾ ಹುಸೇನ್, ಮೊಹಮ್ಮದ್ ಅಲ್ ಮಾಮೂನ್, ಸೋಜಿಬ್ ಶೇಖ್, ಸುರೇಶ್ ಕುಮಾರ್ ದಾಸ್ ಅಲಿಯಾಸ್ ಸಾಗರ್, ಮೊಹಮ್ಮದ್ ಅಬ್ದುಲ್ಲಾ ಮುನ್ನಿ ಅಲಿಯಾಸ್ ಅಬ್ದುಲ್ ಸರ್ಕಾರ್ ಹಾಗೂ ಮೊಹಮ್ಮದ್ ಅಯೂಬ್ ಶೇಖ್ ಎಂದು ಗುರುತಿಸಲಾಗಿದೆ.

# ನಾವು ಬದುಕಬೇಕು, ಎಲ್ಲರನ್ನೂ ಬದುಕಲು ಬಿಡಬೇಕು, ಧರ್ಮ ಜನರನ್ನು ಒಗ್ಗೂಡಿಸುತ್ತದೆ, ಬಂಧಿಸುವುದಿಲ್ಲ: ಮೋಹನ್ ಭಾಗವತ್

**ಉಜ್ಜಯಿನಿ,ಸೆ.18:** ಧರ್ಮ ಎನ್ನುವುದು ಜನರನ್ನು ಬಂಧಿಸುವುದಲ್ಲ, ಬದಲಾಗಿ ಎಲ್ಲರನ್ನು ಒಗ್ಗೂಡಿಸುವ ಶಕ್ತಿಯಾಗಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಸರ ಸಂಘಚಾಲಕ ಮೋಹನ್ ಭಾಗವತ್ ಹೇಳಿದರು. ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ನಡೆದ ಯುವ ಧರ್ಮಸಂಸತ್ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಧರ್ಮ ಮತ್ತು ರಿಲಿಜನ್ ನಡುವೆ ದೊಡ್ಡ ವ್ಯತ್ಯಾಸವಿದೆ ಎಂದು ಭಾಗವತ್ ವಿವರಿಸಿದರು. ರಿಲಿಜನ್ ಎಂಬ ಪದದ ಅರ್ಥ ಹಾಗೂ ಧರ್ಮದ ಪರಿಕಲ್ಪನೆ ಒಂದೇ ಅಲ್ಲ. ಧರ್ಮವನ್ನು ಅದರ ಮೂಲ ಅರ್ಥದಿಂದ ಬೇರ್ಪಡಿಸಿ ನೋಡಿದಾಗ ಸಾಮಾಜಿಕ ಹಾಗೂ ಸಾಂಪ್ರದಾಯಿಕ ಸಂಘರ್ಷಗಳಿಗೆ ಕಾರಣವಾಗಬಹುದು ಎಂದು ಅವರು ಹೇಳಿದರು.

ಭಾರತದ ಪರಂಪರೆಯಲ್ಲಿ ಧರ್ಮವು ಸತ್ಯ, ಕರ್ತವ್ಯ, ನೈತಿಕತೆ ಮತ್ತು ಎಲ್ಲರ ಕಲ್ಯಾಣದೊಂದಿಗೆ ಸಂಬಂಧ ಹೊಂದಿದೆ



ಎಂದು ಭಾಗವತ್ ಹೇಳಿದರು. ನಾವು ಬದುಕಬೇಕು, ಎಲ್ಲರನ್ನೂ ಬದುಕಲು ಬಿಡಬೇಕು ಎಂಬುದು ಭಾರತೀಯ ಚಿಂತನೆಯ ಪ್ರಮುಖ ಅಂಶವಾಗಿದೆ ಎಂದರು. ಧರ್ಮದ ಉದ್ದೇಶ ಜನರನ್ನು ವಿಭಜಿಸುವುದಲ್ಲ, ಸಮಾಜವನ್ನು ಒಗ್ಗೂಡಿಸುವುದಾಗಿದೆ ಎಂದು ಪ್ರತಿಪಾದಿಸಿದರು.

ಯುವಕರು ಧರ್ಮದ ಬಗ್ಗೆ ಚಿಂತನೆ ನಡೆಸುತ್ತಿರುವುದು ಸಂತಸದ ವಿಚಾರ. ಧರ್ಮದ ಅರಿವು ವಯಸ್ಸಾದ ಬಳಿಕ ಪಡೆಯಬೇಕಾದ ವಿಷಯವಲ್ಲ. ಜೀವನದ ಆರಂಭದಿಂದಲೇ ಧರ್ಮವನ್ನು ಅರ್ಥ ಮಾಡಿಕೊಳ್ಳುವ ಪ್ರಯತ್ನ ನಡೆಯಬೇಕು ಎಂದು ಭಾಗವತ್ ಹೇಳಿದರು.

ಮನುಷ್ಯ ತನ್ನ ಇಚ್ಛೆಯಂತೆ ಎಲ್ಲವೂ ನಡೆಯಬೇಕು ಎಂಬ ಭಾವನೆಯಲ್ಲಿರುತ್ತಾನೆ. ಆದರೆ ಸೃಷ್ಟಿ ತನ್ನದೇ ಆದ ಪ್ರಕೃತಿ ಮತ್ತು ಧರ್ಮದ ಶಾಶ್ವತ ನಿಯಮಗಳಂತೆ ನಡೆಯುತ್ತದೆ. ಹೀಗಾಗಿ ಯುವಕರು ಎಲ್ಲವೂ ನನಗೆ ಗೊತ್ತು ಎಂಬ ಅಹಂಕಾರವನ್ನು ಬದಿಗಿಟ್ಟು, ಮನಸ್ಸನ್ನು ತೆರೆದಿಟ್ಟುಕೊಂಡು ಸತ್ಯವನ್ನು ಅರಿಯುವ ಪ್ರಯತ್ನ ಮಾಡಬೇಕು ಎಂದು ಭಾಗವತ್ ಸಲಹೆ ನೀಡಿದರು. ಧರ್ಮವನ್ನು ಅರ್ಥ ಮಾಡಿಕೊಳ್ಳುವುದು ಜೀವನಪೂರ್ತಿ ನಡೆಯುವ ಅನ್ವೇಷಣೆಯಾಗಿದೆ ಎಂದರು.

ಧರ್ಮದ ಕುರಿತು ಅರಿವು ಪಡೆಯುವ ಮುನ್ನ ಮನಸ್ಸನ್ನು ಪೂರ್ವಗ್ರಹಗಳಿಂದ ಮುಕ್ತಗೊಳಿಸಬೇಕು. ವಿನಯ, ಆತ್ಮಚಿಂತನೆ ಮತ್ತು ನಿರಂತರ ಕಲಿಕೆಯ ಮೂಲಕ ಧರ್ಮದ ನಿಜವಾದ ಅರ್ಥವನ್ನು ಅರಿಯಬಹುದು ಎಂದು ಅವರು ಹೇಳಿದರು.

# ಗೊಂದಲ್: ಆಸ್ಕರ್ 2027ಕ್ಕೆ ಭಾರತದ ಅಧಿಕೃತ ಪ್ರವೇಶ

**ಮುಂಬೈ,ಸೆ.18:** ಮರಾಠಿ ಭಾಷೆಯ ಥ್ರಿಲ್ಲರ್ ಚಿತ್ರ ಗೊಂದಲ್ ಅನ್ನು 2027ರ ಆಸ್ಕರ್ ಪ್ರಶಸ್ತಿಗೆ ಭಾರತದ ಅಧಿಕೃತ ಪ್ರವೇಶವಾಗಿ ಆಯ್ಕೆ ಮಾಡಲಾಗಿದೆ. ಮುಂಬೈನಲ್ಲಿ ನಡೆದ ಘೋಷಣೆಯಲ್ಲಿ ಫಿಲ್ಮ್ ಫೆಡರೇಷನ್ ಆಫ್ ಇಂಡಿಯಾ ಈ ಮಾಹಿತಿಯನ್ನು ಪ್ರಕಟಿಸಿದೆ. ನಿರ್ದೇಶಕ ಸಂತೋಷ್ ದವಾಖರ್ ಅವರ ಚಿತ್ರ ಗೊಂದಲ್ ಅನ್ನು 99ನೇ ಅಕಾಡೆಮಿ ಅವಾರ್ಡ್ಸ್ ಬೆಸ್ಟ್ ಇಂಟರ್‌ನ್ಯಾಷನಲ್ ಫೀಚರ್ ಫಿಲ್ಮ್ ವಿಭಾಗಕ್ಕೆ ಭಾರತದ ಪರವಾಗಿ ಕಳುಹಿಸಲಾಗುತ್ತಿದೆ. ಈ ವರ್ಷ ಆಸ್ಕರ್ ಪ್ರವೇಶಕ್ಕಾಗಿ ಸಲ್ಲಿಕೆಯಾಗಿದ್ದ 33 ಚಿತ್ರಗಳ ಪೈಕಿ ಗೊಂದಲ್ ಆಯ್ಕೆಯಾಗಿದೆ. ಮಹಾರಾಷ್ಟ್ರದ ಸಾಂಪ್ರದಾಯಿಕ ಗೊಂದಲ್ ಜನಪದ ಆಚರಣೆ ಚಿತ್ರದ ಪ್ರಮುಖ ಹಿನ್ನೆಲೆಯಾಗಿದೆ. ಮದುವೆಯ ಸಂಭ್ರಮದಿಂದ ಆರಂಭವಾಗುವ ಕಥೆ ಬಳಿಕ ಆಸೆ, ಅಸೂಯೆ, ವಂಚನೆ ಮತ್ತು ಗ್ರಾಮೀಣ ಬದುಕಿನಲ್ಲಿನ ಅಡಗಿರುವ ಸಂಘರ್ಷಗಳ ಸುತ್ತ ಸಾಗುತ್ತದೆ. ಚಿತ್ರದಲ್ಲಿ ಕಿಶೋರ್ ಕದಂ, ಇಶಿತಾ ದೇಶಮುಖ್, ಯೋಗೇಶ್ ಸೊಹೋನಿ, ನಿಶಾದ್ ಭೋಯಿರ್ ಮತ್ತು ಅನುಜ್ ಪ್ರಭು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಸಂತೋಷ್ ದವಾಖರ್ ಅವರ ಚೊಚ್ಚಲ ಫೀಚರ್ ಚಿತ್ರವಾಗಿರುವ ಗೊಂದಲ್ 2025ರಲ್ಲಿ ಗೋವಾದಲ್ಲಿ ನಡೆದ ಇಂಟರ್‌ನ್ಯಾಷನಲ್ ಫಿಲ್ಮ್ ಫೆಸ್ಟಿವಲ್ ಆಫ್ ಇಂಡಿಯಾದಲ್ಲಿ ಪ್ರದರ್ಶನಗೊಂಡಿತ್ತು. ಅಲ್ಲಿ ಚಿತ್ರಕ್ಕೆ ಸಿಲ್ವರ್ ಪೀಕಾಕ್ ಸ್ಪೆಷಲ್ ಜ್ಯೂರಿ ಗೌರವ ಲಭಿಸಿತ್ತು. ಆಸ್ಕರ್‌ಗೆ ಭಾರತದ ಅಧಿಕೃತ ಪ್ರವೇಶವಾಗಿಆಯ್ಕೆಯಾಗಿರುವುದು ಅಂತಿಮ ಆಸ್ಕರ್ ನಾಮನಿರ್ದೇಶನ ಎಂದರ್ಥವಲ್ಲ. ಮುಂದಿನ ಹಂತದಲ್ಲಿ ಅಕಾಡೆಮಿಯ ಇಂಟರ್‌ನ್ಯಾಷನಲ್ ಫೀಚರ್ ಫಿಲ್ಮ್ ವಿಭಾಗದ ಪ್ರಕ್ರಿಯೆಯಲ್ಲಿ ಚಿತ್ರವು ಪಟ್ಟಿಯಾಗಿದ್ದು, ಅಂತಿಮ ನಾಮನಿರ್ದೇಶನಕ್ಕಾಗಿ ಸ್ಪರ್ಧಿಸಲಿದೆ. 99ನೇ ಆಸ್ಕರ್ ಪ್ರಶಸ್ತಿ ಪ್ರದಾನ ಸಮಾರಂಭವು 2027ರ ಮಾರ್ಚ್ 14ರಂದು ಲಾಸ್ ಏಂಜಲೀಸ್‌ನ ಡಾಲ್ಬಿ ಥಿಯೇಟರ್‌ನಲ್ಲಿ ನಡೆಯಲಿದೆ.

# ನಿವೃತ್ತಿಯ ದಿನವೇ 1.01 ಕೋಟಿ ರೂ. ದೇಣಿಗೆ

ಜಬಲ್ಪುರ: ಮಧ್ಯಪ್ರದೇಶ ಹೈಕೋರ್ಟ್‌ನ ನ್ಯಾಯಮೂರ್ತಿ ಅವನೀಂದ್ರ ಕುಮಾರ್ ಸಿಂಗ್ ಅವರು 36 ವರ್ಷಗಳ ನ್ಯಾಯಾಂಗ ಸೇವೆಯ ಬಳಿಕ ನಿವೃತ್ತರಾದ ದಿನವೇ ಸಮಾಜಮುಖಿ ನಿರ್ಧಾರಗಳನ್ನು ಘೋಷಿಸಿದ್ದಾರೆ. ತಮ್ಮ ಜಿಪಿಎಫ್‌ನ 1.01 ಕೋಟಿ ಹಣವನ್ನು ಪಿಎಂ ಕೇರ್ಸ್ ನಿಧಿಗೆ ದೇಣಿಗೆ ನೀಡುವುದಾಗಿ ಅವರು ಪ್ರಕಟಿಸಿದ್ದಾರೆ.

ಜಬಲ್ಪುರದಲ್ಲಿ ನಡೆದ ಹೈಕೋರ್ಟ್‌ನ ಫುಲ್ ಕೋರ್ಟ್ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಜಸ್ಟಿಸ್ ಸಿಂಗ್, ತಮ್ಮ ಜೀವನದ ಸಂಪಾದನೆ ಮತ್ತು ಮರಣಾನಂತರ ತಮ್ಮ ದೇಹವನ್ನೂ ಸಮಾಜಕ್ಕೆ ಸಮರ್ಪಿಸುವ ಇಚ್ಛೆ ವ್ಯಕ್ತಪಡಿಸಿದರು. ತನ್ನಷ್ಟಕ್ಕೆ ತಾನೇ ಬದುಕಿದರೆ ಏನು ಪ್ರಯೋಜನ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು. ನ್ಯಾ. ಅವನೀಂದ್ರ ಕುಮಾರ್ ಸಿಂಗ್ ಹಾಗೂ ಅವರ ಪತ್ನಿ, ತಮ್ಮ ದೇಹವನ್ನು ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಗೆ ಬಳಸುವ ಉದ್ದೇಶದಿಂದ ಜಬಲ್ಪುರ ವೈದ್ಯಕೀಯ ಕಾಲೇಜಿನಲ್ಲಿ ದೇಹದಾನಕ್ಕೆ ನೋಂದಣಿ ಮಾಡಿಕೊಂಡಿದ್ದಾರೆ. ಎರಡು ದಿನಗಳ ಹಿಂದೆಯೇ ಈ ನೋಂದಣಿ ಮಾಡಿಸಿಕೊಂಡಿರುವುದಾಗಿ ಅವರು ಬೀಳ್ಕೊಡುಗೆ ಸಮಾರಂಭದಲ್ಲಿ ತಿಳಿಸಿದರು. ಜೀವನಪೂರ್ತಿ ನ್ಯಾಯಾಂಗ ಕರ್ತವ್ಯ ನಿರ್ವಹಿಸಿದ ದೇಹವು ಮುಂದಿನ ವೈದ್ಯರ ಜ್ಞಾನಾರ್ಜನೆಗೆ ಉಪಯೋಗವಾಗಬೇಕು ಎಂಬುದು ತಮ್ಮ ಆಶಯ ಎಂದು ಹೇಳಿದ್ದಾರೆ.

ನ್ಯಾ. ಅವನೀಂದ್ರ ಕುಮಾರ್ ಸಿಂಗ್ ಅವರು 1990ರಲ್ಲಿ ಸಿವಿಲ್ ಜಡ್ಜ್ ಆಗಿ ನ್ಯಾಯಾಂಗ ಸೇವೆ ಆರಂಭಿಸಿದ್ದರು. ಬಳಿಕ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ ಅವರು ಮೇ 2023ರಲ್ಲಿ ಮಧ್ಯಪ್ರದೇಶ ಹೈಕೋರ್ಟ್ ನ್ಯಾಯಮೂರ್ತಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಸುಮಾರು ಮೂರು ವರ್ಷಗಳ ಕಾಲ ಹೈಕೋರ್ಟ್ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದ ಬಳಿಕ ಸೆ.17 ರಂದು ನಿವೃತ್ತರಾದರು.

# ಸಮುದ್ರದಲ್ಲಿ ಯುದ್ಧನೌಕೆಯ ಡಿಕ್ಕಿ: ಪಾಕಿಸ್ತಾನಕ್ಕೆ ಭಾರತ ತರಾಟೆ

**ನವದೆಹಲಿ, ಸೆ.18:** ಅಂತಾರಾಷ್ಟ್ರೀಯ ಜಲಗಡಿಯಲ್ಲಿ ಸಂಭವಿಸಿದ ಹಡಗುಗಳ ಡಿಕ್ಕಿಯ ಘಟನೆಗೆ ಸಂಬಂಧಿಸಿದಂತೆ ಪಾಕಿಸ್ತಾನದ ಬೇಜವಾಬ್ದಾರಿ ನಡವಳಿಕೆ ಹಾಗೂ ಸುಳ್ಳು ಆರೋಪಗಳ ವಿರುದ್ಧ ಭಾರತೀಯ ನೌಕಾಪಡೆ ಮತ್ತು ವಿದೇಶಾಂಗ ಸಚಿವಾಲಯ ತೀವ್ರ ಆಕ್ರೋಶ ವ್ಯಕ್ತಪಡಿಸಿವೆ. ಪಾಕಿಸ್ತಾನ ನೌಕಾಪಡೆಯ ಯುದ್ಧನೌಕೆ ಪಿಎನ್‌ಎಸ್ ಹುನೈನ್ ಅಂತಾರಾಷ್ಟ್ರೀಯ ಸಮುದ್ರಯಾನ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿ, ಭಾರತೀಯ ನೌಕಾಪಡೆಯ ಹಡಗಿಗೆ ಅಪಾಯಕಾರಿ ರೀತಿಯಲ್ಲಿ ತಡೆಯೊಡ್ಡಲು ಯತ್ನಿಸಿದೆ ಎಂದು ಭಾರತ ಖಂಡಿಸಿದೆ.

ಭಾರತೀಯ ನೌಕಾಪಡೆಯ ಯುದ್ಧನೌಕೆಯು ತನ್ನ ನಿಯಮಿತ ಗಸ್ತು ತಿರುಗುವಿಕೆ ನಡೆಸುತ್ತಿದ್ದಾಗ, ಪಾಕಿಸ್ತಾನದ ಪಿಎನ್‌ಎಸ್ ಹುನೈನ್ ನೌಕೆಯು ಇದ್ದಕ್ಕಿದ್ದಂತೆ ನೌಕಾಯಾನ ನಿಯಮಗಳನ್ನು ಗಾಳಿಗೆ ತೂರಿ ಅತ್ಯಂತ ಹತ್ತಿರಕ್ಕೆ ಬಂದು ಅಪಾಯಕಾರಿ ರೀತಿಯಲ್ಲಿ ದಿಕ್ಕು ಬದಲಾಯಿಸಿತು. ಇದರಿಂದಾಗಿ ಸಣ್ಣ ಪ್ರಮಾಣದ ಡಿಕ್ಕಿ ಸಂಭವಿಸಿತು. ಪಿಎನ್‌ಎಸ್ ಹುನೈನ್ ಸುರಕ್ಷಿತ ಅಂತರ ಕಾಯ್ದುಕೊಳ್ಳುವಲ್ಲಿ ಸಂಪೂರ್ಣ ವಿಫಲವಾಗಿದೆ. ಪಾಕಿಸ್ತಾನಿ ನೌಕೆಯ ಈ ಬೇಜವಾಬ್ದಾರಿ ತಂತ್ರಗಳು ಕಡಲ ಭದ್ರತೆಗೆ ಭಾರಿ ಬೆದರಿಕೆಯಾಗಿವೆ ಎಂದು ಭಾರತ ಸ್ಪಷ್ಟಪಡಿಸಿದೆ.




ನಾವು ಸಲ್ಲಿಸಿದ ಪ್ರತಿಭಟನಾ ಪತ್ರಕ್ಕೆ ಪಾಕಿಸ್ತಾನ ನೀಡಿದ ಉತ್ತರವನ್ನು ನಾವು ಗಮನಿಸಿದ್ದೇವೆ. ಇದು ನಾವು ನಿರೀಕ್ಷಿಸಿದ ರೀತಿಯಲ್ಲೇ ಸಮಜಾಯಿಷಿ ಮತ್ತು ಸತ್ಯ ಮರೆಮಾಚುವ ಯತ್ನ ಮಾಡಲಾಗಿದೆ. ಅದರಲ್ಲಿರುವ ಎಲ್ಲಾ ಆರೋಪಗಳನ್ನು ಮತ್ತು ಅಪಪ್ರಚಾರಗಳನ್ನು ನಾವು ಖಡಾಖಂಡಿತವಾಗಿ ತಳ್ಳಿಹಾಕುತ್ತೇವೆ ಎಂದು ಜೈಸ್ವಾಲ್ ಹೇಳಿದ್ದಾರೆ.

ಪಾಕಿಸ್ತಾನದ ಹುನೈನ್ ನೌಕೆಯು ಭಾರತೀಯ ನೌಕೆಯನ್ನು ಅಪಾಯಕಾರಿಯಾಗಿ ಹಿಂದಿಕ್ಕಲು ಯತ್ನಿಸಿದ್ದು, ಏಪ್ರಿಲ್ 1991ರ ಭಾರತ-ಪಾಕಿಸ್ತಾನ ಸೈನಿಕ ಸಮರಾಭ್ಯಾಸ ಮತ್ತು ನೌಕಾ ಸಂಚಾರ ಒಪ್ಪಂದದ 10ನೇ ನಿಯಮವನ್ನು ಸಂಪೂರ್ಣವಾಗಿ ಉಲ್ಲಂಘಿಸಿದೆ. ಈ ನಿಯಮದ ಪ್ರಕಾರ ಉಭಯ ದೇಶಗಳ ಯುದ್ಧನೌಕೆಗಳು ಸಮುದ್ರದಲ್ಲಿ ಕನಿಷ್ಠ 3 ನಾಟಿಕಲ್ ಮೈಲಿ ಅಂತರ ಕಾಯ್ದುಕೊಳ್ಳಬೇಕು. ಇದರ ಜೊತೆಗೆ ಅಂತಾರಾಷ್ಟ್ರೀಯ ಸಮುದ್ರ ಅಪಘಾತ ತಡೆ ನಿಯಮ ಪಾಕಿಸ್ತಾನ ಉಲ್ಲಂಘಿಸಿದೆ ಎಂದು ಅವರು ವಿವರಿಸಿದ್ದಾರೆ.

# ನವಜಾತ ಶಿಶುಗಳಿಗೆ 1 ಗ್ರಾಂ ಚಿನ್ನದ ಉಂಗುರ ಯೋಜನೆ: ಸೆ.28ರಂದು ಸಿಎಂ ವಿಜಯ್ ಚಾಲನೆ

ಚೆನ್ನೈ: ನವಜಾತ ಶಿಶುಗಳಿಗೆ 'ಒಂದು ಗ್ರಾಂ ಚಿನ್ನದ ಉಂಗುರ' ಉಡುಗೊರೆ ಯೋಜನೆಗೆ ಇದೇ ತಿಂಗಳ 28 ರಂದು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಚಾಲನೆ ನೀಡಲಿದ್ದಾರೆ ಎಂದು ರಾಜ್ಯ ಸರ್ಕಾರ ಶುಕ್ರವಾರ ಪ್ರಕಟಿಸಿದೆ.

ಈ ಯೋಜನೆಯ ಮೊದಲ ಹಂತದಲ್ಲಿ ಫಲಾನುಭವಿಗಳಿಗೆ ವಿತರಿಸಲು 1.28 ಲಕ್ಷ ಚಿನ್ನದ ಉಂಗುರಗಳನ್ನು ಸಂಗ್ರಹಿಸಲಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಜನಿಸುವ ಶಿಶುಗಳಿಗೆ ಈ ಉಂಗುರಗಳನ್ನು ನೀಡಲಾಗುತ್ತದೆ.

ಅಧಿಕೃತ ಪ್ರಕಟಣೆಯ ಪ್ರಕಾರ, ಪ್ರತಿಯೊಂದು ಚಿನ್ನದ ಉಂಗುರವು ವಿಶಿಷ್ಟವಾದ ಕ್ರಮ ಸಂಖ್ಯೆಯನ್ನು ಹೊಂದಿರುತ್ತದೆ ಮತ್ತು ಹಾಳುಮಾಡಲು ಸಾಧ್ಯವಾಗದ ಪ್ಯಾಕೇಜಿಂಗ್‌ನಲ್ಲಿ ಬರುತ್ತದೆ. ಈ ಯೋಜನೆಗೆ ಅರ್ಹರಾಗಲು, ಫಲಾನುಭವಿಗಳು ತಮಿಳುನಾಡಿನ ಖಾಯಂ ನಿವಾಸಿಗಳಾಗಿರಬೇಕು ಎಂದು ಸರ್ಕಾರ ತಿಳಿಸಿದೆ.

**217.63 ಕೋಟಿ ರೂ.ಗಳ ಹೆಚ್ಚುವರಿ ಅನುದಾನ:** ಪ್ರಸಕ್ತ ಹಣಕಾಸು ವರ್ಷದಲ್ಲಿ ಈ ಯೋಜನೆಗಾಗಿ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ 217.63 ಕೋಟಿ ರೂ.ಗಳನ್ನು ಮೀಸಲಿಟ್ಟಿದ್ದು, ಇದರೊಂದಿಗೆ ಕಾರ್ಯಕ್ರಮದ ಒಟ್ಟು ಬಜೆಟ್ 724 ಕೋಟಿ ರೂ.ಗೆ ಏರಿಕೆಯಾಗಿದೆ. ಸಚಿವಾಲಯದಲ್ಲಿ ವಿಜಯ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ಕಾರ್ಯಕ್ರಮವನ್ನು ವಿಸ್ತರಿಸುವ ನಿರ್ಧಾರವನ್ನು



ತೆಗೆದುಕೊಳ್ಳಲಾಯಿತು. ಮುಖ್ಯಮಂತ್ರಿಯವರು ತಿರುವಾನ್ಮಿಯೂರ್‌ನಲ್ಲಿರುವ ಸರ್ಕಾರಿ ಅನುದಾನಿತ ಶಾಲೆಯೊಂದರಲ್ಲಿ ಈ ಕಾರ್ಯಕ್ರಮ ಅಧಿಕೃತವಾಗಿ ಚಾಲನೆ ನೀಡುವ ನಿರೀಕ್ಷೆಯಿದೆ.

**ಸೆಪ್ಟೆಂಬರ್ 17 ರಂದು ನಿಗದಿಯಾಗಿದ್ದ ಉದ್ಘಾಟನೆ:** ವಿಸ್ತೃತ ಯೋಜನೆಯು ಆರಂಭದಲ್ಲಿ ಸೆಪ್ಟೆಂಬರ್ 17 ರಂದು ಪ್ರಾರಂಭವಾಗಬೇಕಿತ್ತು, ಆದರೆ ಲಂಡನ್‌ಗೆ ವಿಜಯ್ ಅವರ ಅಧಿಕೃತ ಹೂಡಿಕೆ ಪ್ರವಾಸದ ಕಾರಣದಿಂದಾಗಿ ಅದನ್ನು ಮುಂದೂಡಲಾಯಿತು. ಮಧುರಾಂತಕಂ ಮತ್ತು ಧಾರಾಪುರಂ ವಿಧಾನಸಭಾ ಕ್ಷೇತ್ರಗಳಲ್ಲಿ ಅಕ್ಟೋಬರ್ 6 ರಂದು ನಡೆಯಲಿರುವ ಉಪಚುನಾವಣೆಗಳ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ, ಚೆಂಗಲ್‌ಪಟ್ಟು ಮತ್ತು ತಿರುಪ್ಪೂರ್ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದಿಲ್ಲ ಎಂದು ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ.

# ದೆಹಲಿಯಲ್ಲಿ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ, ಕೊಲೆ

## 50ಕ್ಕೂ ಹೆಚ್ಚು ಸಿಸಿಟಿವಿ ಆಧರಿಸಿ ಆರೋಪಿಗಳ ಪತ್ತೆ; ಮೂವರು ಅಪ್ರಾಪ್ತ ವಯಸ್ಕರು ಸೇರಿ ನಾಲ್ವರು ಬಂಧನ

**ನವದೆಹಲಿ,ಸೆ.18:** ದೆಹಲಿಯ ಸ್ವರೂಪ ನಗರ ಪ್ರದೇಶದಲ್ಲಿ ಅಪ್ರಾಪ್ತ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ, ಬಳಿಕ ಚಾಕುವಿನಿಂದ ಇರಿದು ಕೊಲೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮೂವರು ಅಪ್ರಾಪ್ತರು ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ.

ಬಂಧಿತರಲ್ಲಿ ಒಬ್ಬರು ವಯಸ್ಕನಾಗಿದ್ದು, ಆತನನ್ನು ಖಡ್ಡಾ ಕಾಲೋನಿ ನಿವಾಸಿ ಶಿವಂ ಅಲಿಯಾಸ್ ಸುದಾಮಾ ಎಂದು ಗುರುತಿಸಲಾಗಿದೆ. ಬಾಕಿ ಮೂವರು ಆರೋಪಿಗಳು ಅಪ್ರಾಪ್ತ ವಯಸ್ಕರಾಗಿದ್ದು 16ರಿಂದ 17 ವರ್ಷಗಳ ನಡುವಿನ ವಯಸ್ಸಿನವರು ಎಂದು ಪೊಲೀಸರು ತಿಳಿಸಿದ್ದಾರೆ.

ಸೆಪ್ಟೆಂಬರ್ 13ರ ಬೆಳಗ್ಗೆ ಸ್ವರೂಪನಗರ ಠಾಣೆ ಪೊಲೀಸರಿಗೆ ಕುಶಕ್ ರಸ್ತೆ, ಲಾಲ್ ಬೌಂಡರಿ ಬಳಿಯ ಜಯಪಾಲ್ ರಾಣಾ ಅವರ ಹೊಲದಲ್ಲಿ ಬಾಲಕಿಯ ಶವ ಬಿದ್ದಿರುವ ಮಾಹಿತಿ ಬಂದಿತ್ತು. ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲಿಸಿದಾಗ ಬಾಲಕಿಯನ್ನು



ಚಾಕುವಿನಿಂದ ಇರಿದು ಕೊಲೆ ಮಾಡಿರುವುದು ಪತ್ತೆಯಾಗಿತ್ತು. ಆರಂಭದಲ್ಲಿ ಮೃತಳ ಗುರುತು ಪತ್ತೆಯಾಗಿರಲಿಲ್ಲ. ಬಳಿಕ ಆಕೆ ಸ್ವರೂಪ ನಗರ ಪ್ರದೇಶದ ನಿವಾಸಿ ಎಂಬುದು ದೃಢಪಟ್ಟಿತು. ಈ ಸಂಬಂಧ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದರು.

ಹೊಲದಲ್ಲಿ ತೆರೆದ ಪ್ರದೇಶದಲ್ಲಿ ಶವ ಪತ್ತೆಯಾಗಿದ್ದರಿಂದ, ಮೃತದೇಹ ಕೊಳೆಯುವ ಸ್ಥಿತಿಯಲ್ಲಿತ್ತು. ವರದಿಯ ಪ್ರಕಾರ, ಮೃತಳ ಒಂದು ಕೈ ಇರಲಿಲ್ಲ. ತೆರೆದ ಪ್ರದೇಶದಲ್ಲಿ ಶವ ಬಿದ್ದಿದ್ದರಿಂದ ನಾಯಿಗಳು ದೇಹವನ್ನು ಕಚ್ಚಿದ್ದವು ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣದ ತನಿಖೆಯಲ್ಲಿ ಪೊಲೀಸರಿಗೆ ಯಾವುದೇ ಪ್ರತ್ಯಕ್ಷ ಸಾಕ್ಷಿ ಸಿಕ್ಕಿರಲಿಲ್ಲ. ಹೀಗಾಗಿ ಪೊಲೀಸರು ಘಟನಾ ಸ್ಥಳ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿದ್ದ 50ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳ ದೃಶ್ಯಗಳನ್ನು ಪರಿಶೀಲಿಸಿದರು. ಈ ವೇಳೆ ಘಟನೆ ನಡೆದ ಸಮಯದ ಆಸುಪಾಸಿನಲ್ಲಿ ಪ್ರದೇಶದಲ್ಲಿ ಅನುಮಾನಾಸ್ಪದ ಟೆಂಪೋವೊಂದು ಸಂಚರಿಸಿರುವುದು ಸಿಸಿಟಿವಿಯಲ್ಲಿ ಕಂಡುಬಂದಿತು. ಆದರೆ ಕತ್ತಲಿದ್ದ ಕಾರಣ ಟೆಂಪೋದ ನೋಂದಣಿ ಸಂಖ್ಯೆ ಸ್ಪಷ್ಟವಾಗಿ ಕಾಣಿಸಿರಲಿಲ್ಲ.

ಪೊಲೀಸರು ವಿವಿಧ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿ ಟೆಂಪೋದ ಸಂಚಾರದ ಮಾರ್ಗವನ್ನು ಪತ್ತೆಹಚ್ಚಲು ಮುಂದಾದರು. ಸೆಪ್ಟೆಂಬರ್ 15ರ ರಾತ್ರಿ ಖಡ್ಡಾ ಕಾಲೋನಿಯಲ್ಲಿ ಇದೇ ಟೆಂಪೋ ಪತ್ತೆಯಾಯಿತು. ಟೆಂಪೋ ಚಾಲಕನ ವಿಚಾರಣೆ ನಡೆಸಿದ ಬಳಿಕ ಪ್ರಕರಣದ ಆರೋಪಿಗಳ ಬಗ್ಗೆ ಪೊಲೀಸರಿಗೆ ಸುಳಿವು ದೊರೆತಿದೆ.

ಪೊಲೀಸರ ಪ್ರಕಾರ, ಮೂವರು ಅಪ್ರಾಪ್ತರು ಮತ್ತು ಒಬ್ಬ ವಯಸ್ಕ ಸೇರಿದಂತೆ ನಾಲ್ವರು ಆರೋಪಿಗಳು ಟೆಂಪೋದಲ್ಲಿ ಒಟ್ಟಿಗೆ ಬಂದಿದ್ದರು. ಎಲ್ಲರೂ ಮದ್ಯ ಸೇವಿಸಿದ್ದರು.

ಬಂಧಿತ ಅಪ್ರಾಪ್ತ ಆರೋಪಿಗಳಲ್ಲಿ ಒಬ್ಬಳು ಮೃತ ಬಾಲಕಿಯ ಸ್ನೇಹಿತೆ ಎಂದು ಪೊಲೀಸರು ತಿಳಿಸಿದ್ದಾರೆ. ಬಾಲಕಿ ಈ ಘಟನೆ ಕುರಿತು ಪೊಲೀಸರಿಗೆ ದೂರು ನೀಡಬಹುದು ಎಂಬ ಭಯದಿಂದ ಆರೋಪಿಗಳು ಕೃತ್ಯ ಎಸಗಿದ್ದಾರೆ ಎಂದು ಪೊಲೀಸ್ ಮೂಲಗಳು ಹೇಳಿವೆ. ಈ ಆರೋಪಕ್ಕೆ ಸಂಬಂಧಿಸಿದ ಎಲ್ಲಾ ವಿಧಿವಿಜ್ಞಾನ ಮತ್ತು ತಾಂತ್ರಿಕ ಸಾಕ್ಷ್ಯಗಳನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಬಂಧಿತ ಆರೋಪಿಗಳಿಂದ ಪೊಲೀಸರು ಎರಡು ಚಾಕುಗಳು, ಕೃತ್ಯದ ಸಂದರ್ಭದಲ್ಲಿ ಧರಿಸಿದ್ದ ಬಟ್ಟೆಗಳು ಮತ್ತು ಟೆಂಪೋವನ್ನು ವಶಪಡಿಸಿಕೊಂಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ವಿಧಿವಿಜ್ಞಾನ ಹಾಗೂ ತಾಂತ್ರಿಕ ಸಾಕ್ಷ್ಯಗಳನ್ನು ಪೊಲೀಸರು ಮತ್ತಷ್ಟು ಪರಿಶೀಲಿಸುತ್ತಿದ್ದಾರೆ.

# ಅಪ್ರಾಪ್ತ ವಯಸ್ಕರಿಗೆ ಕೆಲಸ ಕೊಡಿಸಿ ಲೈಂಗಿಕ ಶೋಷಣೆ ಆರೋಪ ತಮಿಳುನಾಡು ಉದ್ಯಮಿ ವೀರಮಣಿ 3 ದಿನ ಕಸ್ಟಡಿಗೆ

**ಚೆನ್ನೈ,ಸೆ.18:** ಅಪ್ರಾಪ್ತ ವಯಸ್ಕ ಬಾಲಕಿಯರಿಗೆ ಕೆಲಸ ಕೊಡಿಸುವ ನೆಪದಲ್ಲಿ ಅವರನ್ನು ಲೈಂಗಿಕವಾಗಿ ಶೋಷಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಚೆನ್ನೈನ ಗ್ರಾನೈಟ್ ಉದ್ಯಮಿ ಆರ್. ವೀರಮಣಿ ವಿರುದ್ಧ ನಡೆಯುತ್ತಿರುವ ಪೋಕ್ಸೋ ಪ್ರಕರಣದ ತನಿಖೆಯಲ್ಲಿ ಹಲವು ಸಂತ್ರಸ್ತರನ್ನು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಕಳೆದ ಕೆಲವು ವರ್ಷಗಳಲ್ಲಿ ವೀರಮಣಿ ಹಲವು ಬಾಲಕಿಯರನ್ನು ಲೈಂಗಿಕವಾಗಿ ಶೋಷಿಸಿರುವ ಆರೋಪ ಕೇಳಿಬಂದಿದೆ. ಸಂತ್ರಸ್ತರಲ್ಲಿ ಹಲವರು ಅಪ್ರಾಪ್ತರಾಗಿದ್ದು, ಆರ್ಥಿಕವಾಗಿ ದುರ್ಬಲ ಕುಟುಂಬಗಳಿಗೆ ಸೇರಿದವರು. ಕೆಲವರು ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳವರಾಗಿದ್ದಾರೆ ಎಂದು ತನಿಖೆಯಿಂದ ತಿಳಿದುಬಂದಿದೆ.

ಆರೋಪಿಯು ಬಡ ಮತ್ತು ಅಸಹಾಯಕ ಕುಟುಂಬಗಳ ಬಾಲಕಿಯರಿಗೆ ಕೆಲಸ ಕೊಡಿಸುವ ಮೂಲಕ ಅವರನ್ನು ತನ್ನ ಸಂಪರ್ಕಕ್ಕೆ ತಂದು, ಬಳಿಕ ದೀರ್ಘಕಾಲ ಲೈಂಗಿಕವಾಗಿ ಶೋಷಿಸುತ್ತಿದ್ದ ಎಂಬ ಆರೋಪವಿದೆ. ಪ್ರಕರಣದ ತನಿಖೆಯ ವೇಳೆ ಸಂತ್ರಸ್ತರ ಹೇಳಿಕೆಗಳನ್ನು ನ್ಯಾಯಾಲಯದಲ್ಲಿ ದಾಖಲಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇದೇ ವೇಳೆ, ಸಂತ್ರಸ್ತರಲ್ಲಿ ಒಬ್ಬರು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವರು ಎಂಬುದು ದೃಢಪಟ್ಟ ಹಿನ್ನೆಲೆಯಲ್ಲಿ ಪ್ರಕರಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯ ಅಂಶಗಳನ್ನೂ ಸೇರಿಸಲಾಗಿದೆ. ಈ ಕಾಯ್ದೆಯಡಿ ಸಂತ್ರಸ್ತರಿಗೆ ಆರ್ಥಿಕ ನೆರವು ನೀಡಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಜೇವ್ ಗ್ರೂಪ್‌ನ ಅಧ್ಯಕ್ಷ ವೀರಮಣಿಯನ್ನು ನ್ಯಾಯಾಲಯ ಮೂರು ದಿನಗಳ ಪೊಲೀಸ್ ಕಸ್ಟಡಿಗೆ ಒಪ್ಪಿಸಿದೆ. 80 ವರ್ಷಕ್ಕಿಂತ ಹೆಚ್ಚು ವಯಸ್ಸಿನ ವೀರಮಣಿಯನ್ನು ಪೋಕ್ಸೋ ಪ್ರಕರಣದಲ್ಲಿ ಬಂಧಿಸಿದ ಬಳಿಕ ಪುಝಲ್ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿತ್ತು.

ವಯಸ್ಸು ಹಾಗೂ ಆರೋಗ್ಯ ಸಮಸ್ಯೆಗಳನ್ನು ಪರಿಗಣಿಸಿದ ಪೋಕ್ಸೋ ನ್ಯಾಯಾಲಯ, ಜೈಲು ಆವರಣದಲ್ಲಿಯೇ ತನಿಖಾಧಿಕಾರಿಗಳು ಅವರನ್ನು ವಿಚಾರಣೆ ನಡೆಸಬೇಕು ಎಂದು ಸೂಚಿಸಿದೆ. ಪೊಲೀಸ್ ಕಸ್ಟಡಿ ಅವಧಿಯಲ್ಲಿ ಪ್ರತಿದಿನ ತಮ್ಮ ವಕೀಲರನ್ನು ಭೇಟಿ ಮಾಡಲು ವೀರಮಣಿಗೆ ನ್ಯಾಯಾಲಯ ಅನುಮತಿ ನೀಡಿದೆ. ಇನ್ನೂ ಯಾವುದೇ ಬಾಲಕಿ ಶೋಷಣೆಗೆ ಒಳಗಾಗಿದ್ದಾರೆಯೇ ಎಂಬುದರ ಬಗ್ಗೆಯೂ ತನಿಖೆ ಮುಂದುವರಿದಿದೆ.

## 2025ರ ಅಕ್ಟೋಬರ್‌ನಲ್ಲಿ ಪ್ರಕರಣ ದಾಖಲು

2019ರಲ್ಲಿ ಅಪ್ರಾಪ್ತ ಬಾಲಕಿಯೊಬ್ಬಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ವೀರಮಣಿಯನ್ನು ಕಳೆದ ತಿಂಗಳು ಅವರ ಇಬ್ಬರು ಸಹಚರರಾದ ಶಾಂತಿ (60) ಮತ್ತು ಅವರ ಪತಿ ಮಹೇಂದ್ರ ಸಿಂಹನ್ (63) ಅವರೊಂದಿಗೆ ಬಂಧಿಸಲಾಗಿತ್ತು. ಬಳಿಕ ಮೂವರನ್ನೂ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿತ್ತು.

ತನಿಖಾ ತಂಡಕ್ಕೆ 2025ರ ಅಕ್ಟೋಬರ್‌ನಲ್ಲಿ ವೀಡಿಯೊ ತುಣುಕು ದೊರೆತ ಬಳಿಕ ಪ್ರಕರಣ ದಾಖಲಾಗಿತ್ತು. ಆ ವೀಡಿಯೊದಲ್ಲಿ ವೀರಮಣಿ ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದುದು ಕಂಡುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಇತರ ಸಂಭಾವ್ಯ ಸಂತ್ರಸ್ತರ ಬಗ್ಗೆಯೂ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ.


# ಜಮ್ಮು-ಕಾಶ್ಮೀರದಲ್ಲಿ ಉಗ್ರರ ಜಾಲ ಪತ್ತೆ: ಲಷ್ಕರ್ ಉಗ್ರರಿಗೆ ಆಶ್ರಯ ನೀಡಿದ ಮೂವರು ಶಂಕಿತರ ವಿಚಾರಣೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದಲ್ಲಿ ಶಂಕಿತ ಭಯೋತ್ಪಾದಕ ಜಾಲವನ್ನು ಪೊಲೀಸರು ಭೇದಿಸಿದ್ದಾರೆ. ರಜೌರಿಯ ಕೋಟ್ ಚರ್ವಾಲ್‌ನ ಮೂವರು ಆರೋಪಿಗಳು, ಉಗ್ರರಿಗೆ ನೆರವು ನೀಡಿರುವುದು ಬೆಳಕಿಗೆ ತಂದಿದೆ.

ಅಧಿಕಾರಿಗಳ ಪ್ರಕಾರ, ರಜೌರಿಯ ಧರ್ಮಸಾಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಅದರ ಆಧಾರದ ಮೇಲೆ ಕೂಲಂಕಷ ತನಿಖೆ ನಡೆಸಿದ್ದಾರೆ.

ಕೋಟ್ ಚಾರ್ವಾಲ್‌ನ ನಿವಾಸಿಗಳಾದ ಮೊಹಮ್ಮದ್ ಅಜಮ್, ಝಾಕಿರ್ ಹುಸೇನ್ ಮತ್ತು ಮೊಹಮ್ಮದ್ ಮುಷ್ತಾಕ್ ಎಂಬ ಮೂವರು ಆರೋಪಿಗಳು, ನಿಷೇಧಿತ ಭಯೋತ್ಪಾದಕ ಸಂಘಟನೆಯಾದ ಲಷ್ಕರ್-ಎ-ತೈಬಾದೊಂದಿಗೆ ಸಂಪರ್ಕ ಹೊಂದಿದ್ದರು ಹಾಗೂ ಅಗತ್ಯ ಸಂಪನ್ಮೂಲ ಮತ್ತು ಸಾರಿಗೆ ಬೆಂಬಲ ಒದಗಿಸುವ ಜಾಲದ ಭಾಗವಾಗಿದ್ದರು ಎಂಬುದು ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ತನಿಖೆಯ ಪ್ರಕಾರ, ಆರೋಪಿಗಳು ನಿಷೇಧಿತ ಸಂಘಟನೆಗೆ ಸಂಬಂಧಿಸಿದ



ಭಯೋತ್ಪಾದಕರಿಗೆ ಆಶ್ರಯ ನೀಡಿದ್ದಲ್ಲದೆ, ಅವರ ಸಂಚಾರಕ್ಕೂ ಸಹಕರಿಸಿದ್ದರೆಂದು ಆರೋಪಿಸಲಾಗಿದೆ.

2023ರಲ್ಲಿ ರಿಯಾಸಿಯ ಚಸ್ಸಾನಾದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಹತರಾದ ಭಯೋತ್ಪಾದಕರಿಗೆ ನೆರವು ನೀಡುವುದು, ಆಶ್ರಯ ಕಲ್ಪಿಸುವುದು ಮತ್ತು ಅವರ ಸಂಚಾರಕ್ಕೆ ಅನುವು ಮಾಡಿಕೊಡುವುದರಲ್ಲಿ ಇವರ ಪಾತ್ರವಿರುವುದು ಕೂಡ ಬೆಳಕಿಗೆ ಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆರೋಪಿಯು ಹಲವಾರು ಭಯೋತ್ಪಾದಕ ಸಂಘಟನೆಗಳಿಗೆ ಆಶ್ರಯ ಹಾಗೂ ಅಗತ್ಯ ಲಾಜಿಸ್ಟಿಕಲ್ ನೆರವು ಒದಗಿಸಿದ್ದಲ್ಲದೆ, ರಜೌರಿ-ರಿಯಾಸಿ ಜಿಲ್ಲೆಗಳು ಮತ್ತು ಪಿರ್ ಪಂಜಾಲ್ ಪ್ರದೇಶದ ಮೂಲಕ ಶೋಪಿಯಾನ್ ವರೆಗಿನ ಸಂಚಾರಕ್ಕೂ ಅನುವು ಮಾಡಿಕೊಟ್ಟಿದ್ದನೆಂದು ತನಿಖೆಯಿಂದ ತಿಳಿದುಬಂದಿದೆ.

ತನಿಖೆಯ ಭಾಗವಾಗಿ, ಆರೋಪಿಗಳು ನೀಡಿದ ಮಾಹಿತಿಯ ಆಧಾರದ ಮೇಲೆ ಪೊಲೀಸರು ಪರಿಶೀಲನೆ ನಡೆಸಿದ್ದು, ಸೆಪ್ಟೆಂಬರ್ 17 ರಂದು ಮ್ಯಾಗಜೀನ್ ಹಾಗೂ ಗುಂಡುಗಳ ಸಹಿತ ಒಂದು ಪಿಸ್ತೂಲ್ ಮತ್ತು ಎರಡು ಚೀನೀ ನಿರ್ಮಿತ ಗ್ರೆನೇಡ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಗುರುವಾರ, ಜಮ್ಮು ಮತ್ತು ಕಾಶ್ಮೀರದ ಉಧಮ್‌ಪುರ ಜಿಲ್ಲೆಯ ಅರಣ್ಯ ಪ್ರದೇಶವೊಂದರಲ್ಲಿ ಭದ್ರತಾ ಪಡೆಗಳೊಂದಿಗಿನ ಗುಂಡಿನ ಚಕಮಕಿಯಲ್ಲಿ ಇಬ್ಬರು ಭಯೋತ್ಪಾದಕರು ಹತರಾದರು. ಶಂಕಿತ ಭಯೋತ್ಪಾದಕರ ಚಲನವಲನದ ಕುರಿತಾದ ಮಾಹಿತಿಯ ಆಧಾರದ ಮೇಲೆ, ಬುಧವಾರ ರಾತ್ರಿ ಸುಮಾರು 9 ಗಂಟೆಗೆ ಮಜಲ್ಟಾದ ದೂರದ ಬ್ರಾಟೆಲ್ ಸೋನ್ ಮತ್ತು ಖುಬ್ಬನ್ ಪ್ರದೇಶಗಳಲ್ಲಿ ಸೇನೆ, ಪೊಲೀಸ್ ಮತ್ತು ಸಿಆರ್‌ಪಿಎಫ್ ಜಂಟಿ ಶೋಧ ಕಾರ್ಯಾಚರಣೆಯನ್ನು ನಡೆಸಿದವು; ಇದರ ಪರಿಣಾಮವಾಗಿ ಇಬ್ಬರು ಭಯೋತ್ಪಾದಕರನ್ನು ಹೊಡೆದುರುಳಿಸಲಾಯಿತು.

# ಜೀವವೈವಿಧ್ಯದ ಸಂರಕ್ಷಣೆ, ಸುಸ್ಥಿರ ಬಳಕೆ ವಿಕಸಿತ ಭಾರತದ ಭವಿಷ್ಯಕ್ಕೆ ನಿರ್ಣಾಯಕ: ರಾಜ್ಯಪಾಲ ಗೆಹ್ಲೋತ್ ಅಭಿಮತ



**ಬೆಂಗಳೂರು, ಸೆ.18:** ಜೀವವೈವಿಧ್ಯದ ಸಂರಕ್ಷಣೆ ಮತ್ತು ಸಸ್ಯ ತಳಿ ಸಂಪನ್ಮೂಲಗಳ ಸುಸ್ಥಿರ ಬಳಕೆಯು ವಿಕಸಿತ ಭಾರತದ ನಿರ್ಮಾಣಕ್ಕೆ ಅತ್ಯಂತ ನಿರ್ಣಾಯಕವಾಗಿದ್ದು, ಸಾಂಪ್ರದಾಯಿಕ ಜ್ಞಾನ, ಆಧುನಿಕ ವಿಜ್ಞಾನ ಮತ್ತು ಡಿಜಿಟಲ್ ನಾವೀನ್ಯತೆಯ ಸಮನ್ವಯದ ಮೂಲಕ ಭಾರತವನ್ನು ಸುಸ್ಥಿರ ಜೈವಿಕ ಆರ್ಥಿಕತೆಯತ್ತ ಮುನ್ನಡೆಸಬಹುದಾಗಿದೆ ಎಂದು ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅಭಿಪ್ರಾಯ ವ್ಯಕ್ತಪಡಿಸಿದರು.

ಹೆಸರಘಟ್ಟದ ಭಾರತೀಯ ಕೃಷಿ ಸಂಶೋಧನಾ ಮಂಡಳಿ (ಐಸಿಎಆರ್) ಅಧೀನದ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ಯ ಡಾ. ಜಿ.ಎಸ್. ರಾಂಧವ ಸಭಾಂಗಣದಲ್ಲಿ ಭಾರತೀಯ ಸಸ್ಯ ತಳಿ ಸಂಪನ್ಮೂಲಗಳ ಸಂಘ ಹಾಗೂ ಐಐಎಚ್‌ಆರ್ ವತಿಯಿಂದ ಆಯೋಜಿಸಿದ್ದ "ಭಾರತದ ಪರ್ಯಾಯ ದ್ವೀಪದ ಸಸ್ಯ ತಳಿ ಸಂಪನ್ಮೂಲಗಳನ್ನು ಬಳಸಿಕೊಳ್ಳುವುದು' ಜೀವವೈವಿಧ್ಯ ತಾಣದಿಂದ ಸುಸ್ಥಿರ ಜೈವಿಕ ಸಂಪನ್ಮೂಲ ಕೇಂದ್ರದವರೆಗೆ ಎಂಬ ರಾಷ್ಟ್ರೀಯ ವಿಚಾರ ಸಂಕಿರಣ ದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಪರ್ಯಾಯ ದ್ವೀಪ ಭಾರತವನ್ನು ಜೀವವೈವಿಧ್ಯದ ತಾಣದಿಂದ ಸುಸ್ಥಿರ ಜೈವಿಕ ಸಂಪನ್ಮೂಲ ಕೇಂದ್ರವಾಗಿ ರೂಪಿಸುವ ನಿಟ್ಟಿನಲ್ಲಿ ಸಂರಕ್ಷಣೆ, ಸಂಶೋಧನೆ, ನಾವೀನ್ಯತೆ, ಮೌಲ್ಯ ವರ್ಧನೆ, ಉದ್ಯಮಶೀಲತೆ ಮತ್ತು ರೈತರಿಗೆ ನೇರ ಪ್ರಯೋಜನ ತಲುಪಿಸುವ ಮೌಲ್ಯ ಸರಪಳಿಯನ್ನು ಬಲಪಡಿಸುವ ಅಗತ್ಯ ಎದೆ. ಜೀನೋಮಿಕ್ಸ್, ಜೈವಿಕ ತಂತ್ರಜ್ಞಾನ, ಜೈವಿಕ ಮಾಹಿತಿಶಾಸ್ತ್ರ, ಕೃತಕ ಬುದ್ಧಿಮತ್ತೆ ರಿಮೋಟ್ ಸೆನ್ಸಿಂಗ್ ಮತ್ತು GIS ತಂತ್ರಜ್ಞಾನಗಳ ನೆರವಿನಿಂದ ಸಸ್ಯಗಳ ಆನುವಂಶಿಕ ಲಕ್ಷಣಗಳ ಗುರುತಿಸುವಿಕೆ ಮತ್ತು ನಿರ್ವಹಣೆಯನ್ನು ಇನ್ನಷ್ಟು ಪರಿಣಾಮ ಕಾರಿಯಾಗಿ ಕೈಗೊಳ್ಳ ಬಹುದಾಗಿದೆ ಎಂದು ಹೇಳಿದರು.

ಬೆಂಗಳೂರು ವಿಜ್ಞಾನ, ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ನಾವೀನ್ಯತೆಯ ಪ್ರಮುಖ ಕೇಂದ್ರವಾಗಿದ್ದು, ಇಲ್ಲಿ ನಡೆಯುವ ಇಂತಹ ರಾಷ್ಟ್ರೀಯ ವಿಚಾರ ಸಂಕಿರಣಗಳು ದೇಶದ ವಿವಿಧ ಕೃಷಿ ವಲಯಗಳು ಮತ್ತು ರೈತರನ್ನು ತಲುಪುವ ಹೊಸ ಸಂಶೋಧನಾ ಸಹಭಾಗಿತ್ವ ಹಾಗೂ ಕಾರ್ಯ ಯೋಜನೆಗಳಿಗೆ ದಾರಿ ಮಾಡಿಕೊಡಲಿವೆ ಎಂಬ ವಿಶ್ವಾಸವನ್ನು ರಾಜ್ಯಪಾಲರು ವ್ಯಕ್ತಪಡಿಸಿದರು.ನಮ್ಮ ಬೀಜಗಳು ನಮ್ಮ ಪರಂಪರೆ, ನಮ್ಮ ಜೀವವೈವಿಧ್ಯ ನಮ್ಮ ಶಕ್ತಿ ಮತ್ತು ಅದರ ಸುಸ್ಥಿರ ಬಳಕೆಯೇ ನಮ್ಮ ಭವಿಷ್ಯದ ಸಾಧ್ಯತೆ. ಸಸ್ಯ ತಳಿ ಸಂಪನ್ಮೂಲಗಳ ಸಂರಕ್ಷಣೆ ಮತ್ತು ಸುಸ್ಥಿರ ಬಳಕೆಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವಂತೆ ಕರೆ ನೀಡಿದರು.

ಭಾರತೀಯ ಸಸ್ಯತಳಿ ಸಂಪನ್ಮೂಲ ಸಂಸ್ಥೆಯ ಅಧ್ಯಕ್ಷ ಡಾ. ಆರ್.ಎಸ್. ಪರೋಡಾ, ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಉಪ ಮಹಾನಿರ್ದೇಶಕ ಡಾ. ಡಿ.ಕೆ. ಯಾದವ್, ಐಎಸ್‌ಪಿಜಿಆರ್‌ನ ಪ್ರಧಾನ ಕಾರ್ಯದರ್ಶಿ ಡಾ. ಅನುರಾಧ ಅಗರ್ವಾಲ್, ICAR-IIHR ನಿರ್ದೇಶಕರಾದ ಡಾ. ತುಸಾರ್ ಕಾಂತಿ ಬೆಹೆರಾ ಸೇರಿದಂತೆ ದೇಶದ ವಿವಿಧ ರಾಜ್ಯಗಳ ಹಿರಿಯ ವಿಜ್ಞಾನಿಗಳು, ಕೃಷಿ ಮತ್ತು ತೋಟಗಾರಿಕೆ ತಜ್ಞರು, ಸಂಶೋಧಕರು, ಶಿಕ್ಷಣ ತಜ್ಞರು ಹಾಗೂ ರೈತ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಇಂದು ನಿರ್ಲಕ್ಷ್ಯಕ್ಕೊಳಗಾದ ಪ್ರಭೇದಗಳೇ ಭವಿಷ್ಯ ಆಹಾರ ಭದ್ರತೆಗೆ ಅಡಿಪಾಯ

ಇಂದು ನಿರ್ಲಕ್ಷ್ಯಕ್ಕೊಳಗಾಗಿರುವ ಸ್ಥಳೀಯ ಬೆಳೆಯ ಪ್ರಭೇದಗಳೇ ನಾಳೆಯ ಹವಾಮಾನ-ಸಹಿಷ್ಣು, ರೋಗ-ನಿರೋಧಕ ಹಾಗೂ ಪೌಷ್ಟಿಕಾಂಶಯುಕ್ತ ಬೆಳೆಗಳಾಗುವ ಸಾಮರ್ಥ್ಯ ಹೊಂದಿದ್ದು, ಇಂದು ಸಂರಕ್ಷಿಸುವ ಬೀಜಗಳೇ ಭವಿಷ್ಯದ ಆಹಾರ ಭದ್ರತೆಗೆ ಭದ್ರ ಅಡಿಪಾಯ ವಾಗಲಿವೆ. ಕರ್ನಾಟಕವು ರಾಗಿ, ಜೋಳ, ದ್ವಿದಳ ಧಾನ್ಯಗಳು, ಅಕ್ಕಿ, ಎಣ್ಣೆಕಾಳುಗಳು, ಮಸಾಲೆಗಳು ಹಾಗೂ ಔಷಧೀಯ ಸಸ್ಯಗಳ ಸಮೃದ್ಧ ಜೀವವೈವಿಧ್ಯ ಪರಂಪರೆಯನ್ನು ಹೊಂದಿರುವ ರಾಜ್ಯವಾಗಿದ್ದು, ವಿಶೇಷವಾಗಿ ರಾಗಿಯಂತಹ ಸಾಂಪ್ರದಾಯಿಕ ಬೆಳೆಗಳು ಹವಾಮಾನ ಸಹಿಷ್ಣುತೆ ಮತ್ತು ಪೌಷ್ಟಿಕಾಂಶ ಎರಡಕ್ಕೂ ಮಹತ್ವದ್ದಾಗಿವೆ.

ರೈತರು ಹಾಗೂ ಸ್ಥಳೀಯ ಸಮುದಾಯಗಳೇ ಜೀವವೈವಿಧ್ಯದ ನಿಜವಾದ ರಕ್ಷಕರಾಗಿದ್ದು, ಟೋಡಾ, ಕಾನಿ, ಸೋಲಿಗ ಸೇರಿದಂತೆ ವಿವಿಧ ಬುಡಕಟ್ಟು ಸಮುದಾಯಗಳು ತಲೆಮಾರುಗಳಿಂದ ಸಂರಕ್ಷಿಸಿ ಕೊಂಡು ಬಂದಿರುವ ಸಾಂಪ್ರದಾಯಿಕ ಜ್ಞಾನವು ಕೃಷಿಯ ಭವಿಷ್ಯಕ್ಕೆ ಅಮೂಲ್ಯ ಕೊಡುಗೆಯಾಗಿದೆ ಎಂದು ಗೆಹ್ಲೋಟ್ ತಿಳಿಸಿದರು.



ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಪಾತ್ರರಾಗಿರುವ ಹಿರಿಯ ನಟ ಅನಂತ್‌ನಾಗ್ ಅವರನ್ನು ಬೆಂಗಳೂರಿನಲ್ಲಿ ಭೇಟಿಮಾಡಿದ ಕೇಂದ್ರ ಸಚಿವ ವಿ.ಸೋಮಣ್ಣ ಅಭಿನಂದಿಸಿದರು. ಈ ವೇಳೆ ಅನಂತ್ ಪತ್ನಿ ಗಾಯತ್ರಿ ಇದ್ದರು.

# ಕೇಂದ್ರ ಮನಸ್ಸು ಮಾಡಿದರೆ ಯಾವುದೇ ವಿಧೇಯಕ ಅಂಗೀಕಾರ: ಮಹಿಳಾ ಮೀಸಲಾತಿ ವಿಧೇಯಕಕ್ಕೂ ಬೆಂಬಲ

## ಮಧುಗಿರಿ ಕ್ಷೇತ್ರ ರಚನೆಯಾದರೆ ಚುನಾವಣೆಗೆ ಸ್ಪರ್ಧೆ: ಕೆ.ಎನ್. ರಾಜಣ್ಣ



**ತುಮಕೂರು, ಸೆ.18:** ಕ್ಷೇತ್ರ ಮರುವಿಂಗಡಣೆ ಖಚಿತವಾಗಿದ್ದು, ಮಧುಗಿರಿ ಕ್ಷೇತ್ರ ರಚನೆಯಾದರೆ ಚುನಾವಣೆಗೆ ಸ್ಪರ್ಧಿಸುವುದಾಗಿ ಮಾಜಿ ಸಚಿವ, ಶಾಸಕ ಕೆಎನ್ ರಾಜಣ್ಣ ಹೇಳಿದ್ದಾರೆ. ಜತೆಗೆ ಮಹಿಳಾ ಮೀಸಲಾತಿ ವಿಧೇಯಕಕ್ಕೂ ಬೆಂಬಲ ವಿದೆ ಎಂದು ತಿಳಿಸಿದ್ದಾರೆ.

ತುಮಕೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಕ್ಷೇತ್ರ ಮರುವಿಂಗಡಣೆ ಬಳಿಕ ಮಧುಗಿರಿ ಉಪವಿಭಾಗಕ್ಕೆ ಒಂದು ಲೋಕಸಭಾ ಕ್ಷೇತ್ರ ಬರುವ ಸಾಧ್ಯತೆಯಿದೆ. ಆಗ ಲೋಕಸಭಾ ಚುನಾವಣೆಗೆ ಸ್ಪರ್ಧಿಸುವು ದಾಗಿ ಸ್ಪಷ್ಟಪಡಿಸಿದ್ದಾರೆ.

ಮಹಿಳಾ ಮೀಸಲಾತಿ ವಿಧೇಯಕ ಅಂಗೀಕಾರವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಕೇಂದ್ರ ಸರ್ಕಾರ ಮನಸ್ಸು ಮಾಡಿದರೆ ಯಾವುದೇ ವಿಧೇಯಕ ಅಂಗೀಕಾರ ವಾಗುವುದು ಕಷ್ಟವಲ್ಲ. ತಾವು ಮಹಿಳಾ ಮೀಸಲಾತಿ ವಿಧೇಯಕದ ಪರವಾಗಿರು ವುದಾಗಿ ಹೇಳಿದ್ದಾರೆ.

ವಿಶೇಷವೆಂದರೆ, ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ವಿಧೇಯಕಕ್ಕೆ ಕಾಂಗ್ರೆಸ್ ಪಕ್ಷ ಬೆಂಬಲ ನೀಡಿರಲಿಲ್ಲ. ಇದೀಗ ಕಾಂಗ್ರೆಸ್ ಹೈಕಮಾಂಡ್ ನಿಲುವಿಗೂ ಮೀರಿ ರಾಜಣ್ಣ ಮಹಿಳಾ ಮೀಸಲಾತಿ ವಿಧೇಯಕ ಪರ ಹೇಳಿಕೆ ನೀಡಿದ್ದಾರೆ.

### ಸಿದ್ದರಾಮಯ್ಯ ಪರ ಬ್ಯಾಟಿಂಗ್

ಮಾಜಿ ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರು ಅಹಿಂದದ ಪ್ರಶ್ನಾತೀತ ನಾಯಕರು ಎಂದು ರಾಜಣ್ಣ ಹೇಳಿದ್ದಾರೆ. ಸಿದ್ದರಾಮಯ್ಯ ಅವರು ತಮ್ಮನ್ನು ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರನ್ನಾಗಿ ಮಾಡಲು ಪ್ರಯತ್ನಿಸಿ ದ್ದರು. ಆದರೆ ಆ ಪ್ರಯತ್ನಕ್ಕೆ ಪ್ರತಿಫಲ ಸಿಕ್ಕಿಲ್ಲ ಎಂಬ ಕಾರಣಕ್ಕೆ ಅವರ ಮಾತು ನಡೆಯುವುದಿಲ್ಲ ಎಂದು ಹೇಳುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ವಿಚಾರದಲ್ಲಿ ತಮಗೆ ಯಾವುದೇ ಹಿನ್ನಡೆಯಾಗಿಲ್ಲ ಎಂದಿರುವ ಅವರು, ಸಿದ್ದರಾಮಯ್ಯ ಅವರ ಪ್ರಯತ್ನಕ್ಕೆ ಫಲ ಸಿಗದಿರುವುದನ್ನು ವೈಯಕ್ತಿಕ ಹಿನ್ನಡೆಯಾಗಿ ಪರಿಗಣಿಸು ವುದಿಲ್ಲ ಎಂದು ಹೇಳಿದ್ದಾರೆ.

# ಕೆಪಿಎಸ್‌ಸಿ ನೇಮಕಾತಿ ಅಕ್ರಮದ ಜಾಲ ಭೇದಿಸಿದ ಸಿಐಡಿ: 13 ಬೇನಾಮಿ ಖಾತೆಗಳಲ್ಲಿದ್ದ 67 ಲಕ್ಷ ರೂ.ಸೀಜ್!



**ಬೆಂಗಳೂರು, ಸೆ.18:** ಕರ್ನಾಟಕ ಲೋಕಸೇವಾ ಆಯೋಗದ ಪಶು ವೈದ್ಯಾಧಿಕಾರಿ ಸೇರಿ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆಗಳಲ್ಲಿ ನಡೆದಿದೆ ಎನ್ನಲಾದ ಭಾರೀ ಭ್ರಷ್ಟಾಚಾರ ಜಾಲದ ತನಿಖೆ ತೀವ್ರಗೊಂಡಿದ್ದು, ಹಿರಿಯ ಐಎಎಸ್ ಅಧಿಕಾರಿ ಜ್ಞಾನೇಂದ್ರಕುಮಾರ್ ಗಂಗ್ವಾರ್ ಹಾಗೂ ಪ್ರಕರಣದ ಪ್ರಮುಖ ದಲ್ಲಾಳಿ ಬಸವರಾಜ ಕನ್ನಾಳೆ ನಡುವಿನ ಅಕ್ರಮ ನಂಟು ಬಯಲಾಗಿದೆ.

ಸಿಐಡಿ ಅಧಿಕಾರಿಗಳು ನಡೆಸುತ್ತಿರುವ ಸತತ ವಿಚಾರಣೆಯಲ್ಲಿ ಹಗರಣದ ಕರಾಳ ಮುಖಗಳು ಒಂದೊಂದಾಗಿ ಸಾಕ್ಷ್ಯಸಮೇತ ಬೆಳಕಿಗೆ ಬರುತ್ತಿವೆ. ಅಧಿಕಾರಿಯ ಸಂಪೂರ್ಣ ಆತಿಥ್ಯ ವಹಿಸಿಕೊಂಡಿದ್ದ ಮಧ್ಯವರ್ತಿ ಗಂಗ್ವಾರ್ ಅವರು 2024ರಲ್ಲಿ ಕೆಪಿಎಸ್‌ಸಿಯ ಪರೀಕ್ಷಾ ನಿಯಂತ್ರಕರಾಗಿ ಅಧಿಕಾರ ವಹಿಸಿಕೊಂಡ ಕ್ಷಣದಿಂದಲೇ ಅವರ ಆಪ್ತ ವಲಯದಲ್ಲಿದ್ದ ಬಸವರಾಜ ಕನ್ನಾಳೆ ಅಕ್ರಮಕ್ಕೆ ರಹದಾರಿ ಸಿದ್ಧಪಡಿಸಿದ್ದನು. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಉದ್ಯೋಗಾಕಾಂಕ್ಷಿಗಳಿಂದ ಕೋಟ್ಯಂತರ ರೂಪಾಯಿ ವಸೂಲಿ ಮಾಡುವ ಸಂಚಿಗೆ ಅಧಿಕಾರಿಯನ್ನು ಒಪ್ಪಿಸಿದ್ದ ಕನ್ನಾಳೆ, ಅವರ ಸಕಲ ಖರ್ಚು-ವೆಚ್ಚಗಳನ್ನು ತಾನೇ ನೋಡಿಕೊಳ್ಳುತ್ತಿದ್ದನು. ಗಂಗ್ವಾರ್ ಅವರ ನವದೆಹಲಿ ಮತ್ತು ಉತ್ತರ ಪ್ರದೇಶ ಪ್ರವಾಸಗಳಿಗಾಗಿ ಸುಮಾರು 11 ಲಕ್ಷ ರೂಪಾಯಿ ಮೌಲ್ಯದ ವಿಮಾನ ಟಿಕೆಟ್‌ಗಳನ್ನು ಕನ್ನಾಳೆಯೇ ಬುಕ್ ಮಾಡಿಕೊಟ್ಟಿದ್ದ ಅಂಶ ತನಿಖೆಯಲ್ಲಿ ದೃಢಪಟ್ಟಿದೆ.

ಅಧಿಕಾರಿಯ ಮನೆಗೆ ನಿರಂತರವಾಗಿ ಭೇಟಿ ನೀಡುತ್ತಿದ್ದ ಈತ, ಅವರ ಇಷ್ಟಾರ್ಥಗಳನ್ನು ಪೂರೈಸುತ್ತಾ ತನ್ನ ಕೈಗೊಂಬೆಯನ್ನಾಗಿಸಿ ಕೊಂಡು ಡೀಲ್ ಕುದುರಿಸುತ್ತಿದ್ದನು. ಪ್ರಕರಣದ ತನಿಖೆ ಸಿಐಡಿ ಕೈಗೆ ಹೋಗುತ್ತಿದ್ದಂತೆ, ತುಮಕೂರು ವಿವಿ ಸಿಂಡಿಕೇಟ್ ಸದಸ್ಯನಾಗಿದ್ದ ಕನ್ನಾಳೆಗೆ ಬಂಧನದ ಆತಂಕ ಶುರುವಾಗಿತ್ತು. ರಾಜಕೀಯ ಪ್ರಭಾವಿಗಳ ರಕ್ಷಣೆಯೂ ಕೈಕೊಟ್ಟಿದ್ದ ರಿಂದ ವಿದೇಶಕ್ಕೆ ಎಸ್ಕೇಪ್ ಆಗಲು ಸಂಚು ರೂಪಿಸಿದ್ದನು. ಕಜಕಿಸ್ತಾನದಲ್ಲಿ ಒಂದು ತಿಂಗಳು ನೆಲೆಸಲು ವೀಸಾ ಪಡೆದುಕೊಂಡಿದ್ದ ಈತ, ನವದೆಹಲಿ ವಿಮಾನ ನಿಲ್ದಾಣದ ಮೂಲಕ ದೇಶ ಬಿಟ್ಟು ಹಾರಲು ಯತ್ನಿಸುತ್ತಿದ್ದಾಗಲೇ ತನಿಖಾ ತಂಡದ ಬಲೆಗೆ ಬಿದ್ದಿದ್ದಾನೆ.

ಅಭ್ಯರ್ಥಿಗಳಿಂದ ಸುಲಿಗೆ ಮಾಡುತ್ತಿದ್ದ ಹಣವನ್ನು ಕನ್ನಾಳೆ ಬೇರೆ ಬೇರೆ ಹೆಸರಿನ ಖಾತೆಗಳಿಗೆ ವರ್ಗಾಯಿಸುತ್ತಿದ್ದನು. ಬೀದರ್‌ನ ಓಂ ಶ್ರೀಲಕ್ಷ್ಮಿ ಸೌಹಾರ್ದ ಸೊಸೈಟಿ ಸೇರಿದಂತೆ ವಿವಿಧ ಬ್ಯಾಂಕುಗಳಲ್ಲಿ ನಿರ್ವಹಿಸುತ್ತಿದ್ದ ಇಂತಹ 13 ಬೇನಾಮಿ ಖಾತೆಗಳಲ್ಲಿದ್ದ 67 ಲಕ್ಷ ರೂಪಾಯಿ ನಗದನ್ನು ಸಿಐಡಿ ಅಧಿಕಾರಿಗಳು ಸೀಜ್ ಮಾಡಿದ್ದಾರೆ.

ಇದರೊಂದಿಗೆ ಆತನ ಬೆಂಗಳೂರಿನ ಸಂಜಯನಗರದ ಮನೆಯ ಮೇಲೆ ದಾಳಿ ನಡೆಸಿ 3 ಲಕ್ಷ ರೂಪಾಯಿ ನಗದನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದ್ದು, ಪ್ರಕರಣದ ಬೇರುಗಳನ್ನು ಹೆಕ್ಕಿ ತೆಗೆಯಲು ತನಿಖೆ ಮುಂದುವರಿದಿದೆ.

# ನಂದಿನಿ ಹಾಲು ಲೀಟರ್‌ಗೆ 5-10 ರೂ. ಹೆಚ್ಚಳಕ್ಕೆ ಹಾಲು ಒಕ್ಕೂಟಗಳ ಒತ್ತಾಯ




**ಬೆಂಗಳೂರು, ಸೆ.18:** ರಾಜ್ಯದಲ್ಲಿ ತೀವ್ರವಾಗಿರುವ ಬರ, ಜಾನುವಾರುಗಳ ಮೇವಿನ ಕೊರತೆ ಹಾಗೂ ಪಶು ಆಹಾರದ ಬೆಲೆ ಏರಿಕೆಯಿಂದ ಹಾಲು ಉತ್ಪಾದನಾ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ನಂದಿನಿ ಹಾಲಿನ ದರ ಪರಿಷ್ಕರಣೆಯ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ.

ವಿವಿಧ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟಗಳು ರೈತರಿಂದ ಖರೀದಿಸುವ ಹಾಲಿನ ದರವನ್ನು ಹೆಚ್ಚಿಸುವಂತೆ ರಾಜ್ಯ ಸರ್ಕಾರ ಮತ್ತು ಕರ್ನಾಟಕ ಹಾಲು ಮಹಾಮಂಡಳಿಗೆ (ಕೆಎಂಎಫ್) ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಹಾಲಿನ ಚಿಲ್ಲರೆ ದರವೂ ಏರಿಕೆಯಾಗುವ ಸಾಧ್ಯತೆ ಇದೆ. ಹಾಲಿನ ಮಾರಾಟ ದರವನ್ನು ಲೀಟರ್‌ಗೆ 5ರಿಂದ 10 ರೂ.ವರೆಗೆ ಹೆಚ್ಚಿಸುವಂತೆ ಕೆಲವು ಹಾಲು ಒಕ್ಕೂಟಗಳು ಪ್ರಸ್ತಾವನೆ ಸಲ್ಲಿಸಿವೆ ಎನ್ನಲಾಗಿದ್ದು, ಕೆಲವು ಒಕ್ಕೂಟಗಳು ರೈತರಿಗೆ ನೀಡುವ ಖರೀದಿ ದರವನ್ನು ಕನಿಷ್ಠ 5 ರೂ. ಹೆಚ್ಚಿಸಬೇಕು ಎಂದು ಒತ್ತಾಯಿಸಿವೆ.

ರಾಜ್ಯದಲ್ಲಿ ಮುಂಗಾರು ಮಳೆಯ ಕೊರತೆಯಿಂದ ಕೃಷಿ ಮಾತ್ರವಲ್ಲದೆ ಪಶುಸಂಗೋಪನಾ ಕ್ಷೇತ್ರವೂ ಸಂಕಷ್ಟಕ್ಕೆ ಸಿಲುಕಿದೆ. ಮೇವು ಮತ್ತು ಪಶು ಆಹಾರದ ವೆಚ್ಚ ಹೆಚ್ಚಾಗಿರುವುದು ಹೈನುಗಾರರಿಗೆ ಹೆಚ್ಚುವರಿ ಹೊರೆಯಾಗಿದೆ. ನೀರಿನ ಲಭ್ಯತೆಯಲ್ಲಿನ ಸಮಸ್ಯೆ ಹಾಗೂ ಮೇವಿನ ಕೊರತೆಯ ಪರಿಣಾಮ ಹಾಲಿನ ಉತ್ಪಾದನೆಯ ಮೇಲೂ ಒತ್ತಡ ಉಂಟಾಗಿದೆ.

ಹಾಲಿನ ಮಾರಾಟ ದರ ಹೆಚ್ಚಳದ ಚರ್ಚೆಯ ಪ್ರಮುಖ ಉದ್ದೇಶ ರೈತರಿಗೆ ನೀಡುವ ಖರೀದಿ ದರವನ್ನು ಹೆಚ್ಚಿಸುವುದಾಗಿದೆ ಎಂದು ಹಾಲು ಕ್ಷೇತ್ರದ ಮೂಲಗಳು ತಿಳಿಸಿವೆ. ಅಂದರೆ, ಗ್ರಾಹಕರಿಂದ ಹೆಚ್ಚುವರಿಯಾಗಿ ಸಂಗ್ರಹವಾಗುವ ಮೊತ್ತದ ಒಂದು ಭಾಗವನ್ನು ಹಾಲು ಉತ್ಪಾದಕರಿಗೆ ವರ್ಗಾಯಿಸುವ ಉದ್ದೇಶವಿದೆ.

# ಕಾಂಗ್ರೆಸ್‌ನಿಂದ ಸಿದ್ದರಾಮಯ್ಯಗೆ ವಿಶ್ರಾಂತಿಯ ಗ್ಯಾರಂಟಿ: ಆರ್.ಅಶೋಕ್ ವ್ಯಂಗ್ಯ



**ರಾಮನಗರ, ಸೆ.18:** ಕಾಂಗ್ರೆಸ್ ಪಕ್ಷ ಸಿದ್ದರಾಮಯ್ಯ ಅವರಿಗೆ ವಿಶ್ರಾಂತಿಯ ಗ್ಯಾರಂಟಿ ಕೊಟ್ಟಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ವ್ಯಂಗ್ಯವಾಡಿದ್ದಾರೆ.

ಡಿ.ಕೆ.ಶಿವಕುಮಾರ್ ಮುಖ ನೋಡಿ ಒಕ್ಕಲಿಗರು ವೋಟ್ ಹಾಕಲ್ಲ ಎಂದು ಅವರದೇ ಪಕ್ಷದ ಕೆ.ಎನ್. ರಾಜಣ್ಣ ಹೇಳಿದ್ದಾರೆ. ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಕರಿಬೇವು ಸೊಪ್ಪಿನಂತೆ ಒಗ್ಗರಣೆಗೆ ಬಳಸಿ ಸೈಡಿಗೆ ಇಟ್ಟಿದೆ. ಅವರ ಬಾಯಿ ಮುಚ್ಚಿಸಲಾಗಿದ್ದು, ಮೈಸೂರಿನ ಮನೆಯಲ್ಲಿ ರೆಸ್ಟ್ ಗ್ಯಾರಂಟಿ ಮಾಡುವ ಸ್ಥಿತಿಗೆ ತರಲಾಗಿದೆ ಎಂದು ಕುಟುಕಿದರು.

ಮಂಗಳೂರಿನಲ್ಲಿ ಮೊದಲ ಬಾರಿಗೆ ಸರ್ಕಾರ ಸಂಪುಟ ಸಭೆ ನಡೆಸಿದ ಕುರಿತು ಪ್ರತಿಕ್ರಿಯಿಸಿ, ರಾಜ್ಯ ಸರ್ಕಾರ ಸಾಲದಲ್ಲಿ ಮುಳುಗಿದ್ದು, ಹೊಸ ಘೋಷಣೆಗೆ ಹಣ ಎಲ್ಲಿಂದ ತರುತ್ತೆ, ಕಾಂಗ್ರೆಸ್ ಸರ್ಕಾರ ಮೂರೇ ವರ್ಷಗಳಲ್ಲಿ 1.5 ಲಕ್ಷ ಕೋಟಿ ಸಾಲಮಾಡಲು ಹೊರಟಿದೆ. ಪ್ರಸ್ತುತ ವರ್ಷಕ್ಕೆ 35,000 ದಿಂದ 40,000 ಕೋಟಿ ಬಡ್ಡಿ ಕಟ್ಟುವ ಸ್ಥಿತಿ ಎದುರಾಗಿದೆ. ಸಾಲ ಮಾಡದೇ ಬಜೆಟ್ ಮಂಡಿಸಿ ತೋರಿಸಲಿ ಎಂದು ಸಿಎಂಗೆ ಅಶೋಕ್ ಸವಾಲು ಹಾಕಿದರು.

ಬೊಮ್ಮಾಯಿ ಸರ್ಕಾರ ಉಳಿತಾಯದ ಬಜೆಟ್ ನೀಡಿದ್ದರೆ, ಈ ಸರ್ಕಾರ ದಿವಾಳಿಯಾದ ಬಜೆಟ್ ನೀಡಿದೆ. ಕೆಎಸ್‌ಆರ್‌ಟಿಸಿಗೆ 5,000 ಕೋಟಿ ಬಾಕಿ ಉಳಿಸಿಕೊಳ್ಳಲಾಗಿದ್ದು, ಸಿಬ್ಬಂದಿಗೆ ಸಂಬಳ ಹಾಗೂ ಡೀಸೆಲ್‌ಗೂ ಹಣವಿಲ್ಲದಂತಾಗಿದೆ. ಕ್ರಷರ್‌ಗಳಿಂದ ವರ್ಷಕ್ಕೆ 1 ಕೋಟಿ ಕಮಿಷನ್ ಬೇಡಿಕೆ ಇಟ್ಟಿರುವುದರಿಂದ ಜೆಲ್ಲಿ, ಎಂ-ಸ್ಯಾಂಡ್ ಸಿಗದೆ ರಸ್ತೆ ಕಾಮಗಾರಿಗಳು ಸ್ಥಗಿತಗೊಂಡಿವೆ. ಆಸ್ಪತ್ರೆಗಳಲ್ಲಿ ಔಷಧಿಯಿಲ್ಲ, ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನ ಏರಿಕೆಯಾಗಿಲ್ಲ ಮತ್ತು ರೈತರಿಗೆ ಸೂಕ್ತ ಬರ ಪರಿಹಾರ ತಲುಪಿಲ್ಲ. ಹಿಂದೆ ಕಲಬುರಗಿಯಲ್ಲಿ ನಡೆಸಿದ ಕ್ಯಾಬಿನೆಟ್ ಸಭೆಯ ಘೋಷಣೆಗಳು ಒಂದೂ ಜಾರಿಯಾಗಿಲ್ಲ. ಈಗ ಮಂಗಳೂರಿನ ರೆಸಾರ್ಟ್‌ನಲ್ಲಿ ಮೀನು, ಏಡಿಕಾಯಿ ತಿಂದುಕೊಂಡು ಕ್ಯಾಬಿನೆಟ್ ನಡೆಸಿ ಜನರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡುತ್ತಿದ್ದಾರೆ ಎಂದು ಅಶೋಕ್ ಕಟುವಾಗಿ ಟೀಕಿಸಿದರು.

# ಪ್ರಸಾರ ಭಾರತಿಯಲ್ಲಿ ಮಾರ್ಕೆಟಿಂಗ್ ಎಕ್ಸಿಕ್ಯುಟೀವ್ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಸೆ.18:** ಪ್ರಸಾರ ಭಾರತಿಯು ಮಾರ್ಕೆಟಿಂಗ್ ಎಕ್ಸಿಕ್ಯೂಟೀವ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದೆ.


ಬೆಂಗಳೂರಿನ ಮಾರಾಟ ವಿಭಾಗದಲ್ಲಿ ಎರಡು, ಬೆಂಗಳೂರು ದೂರದರ್ಶನದಲ್ಲಿ ಒಂದು ಹುದ್ದೆಗಳಿಗೆ ಅವಕಾಶವಿದ್ದು, ಮೀಡಿಯಾ ಸೇಲ್ಸ್‌ನಲ್ಲಿ ಒಂದು ವರ್ಷ ಅನುಭವ ಇರುವ, 35 ವರ್ಷ ವಯೋ ಮಿತಿಯೊಳಗಿನವರಿಗೆ ಅವಕಾಶವಿದೆ.

ಇದು ಸಂಪೂರ್ಣವಾಗಿ ಗುತ್ತಿಗೆ ಅಲ್ಪಾವಧಿ ಗುತ್ತಿಗೆ ಆಧಾರದ ಹುದ್ದೆಯಾಗಿದ್ದು, ಅಕ್ಟೋಬರ್ 5ರ ಒಳಗಾಗಿ http://avedna.prasarabharathi.org ಮೂಲಕ ಅರ್ಜಿ ಸಲ್ಲಿಸುವಂತೆ ಕೋರಲಾಗಿದೆ.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರದ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡ ಬಿ. ಜನಾರ್ದನ ಪೂಜಾರಿ ಅವರ ಬಂಟ್ವಾಳ ನಿವಾಸಕ್ಕೆ ಶುಕ್ರವಾರ ರಾತ್ರಿ ಭೇಟಿ ನೀಡಿ ಮಾತುಕತೆ ನಡೆಸಿದರು.

# ಹಬ್ಬದ ಸಂದರ್ಭದಲ್ಲಿ ಅಧಿಕ ದರ ವಸೂಲಿ: 33 ಬಸ್‌ಗಳು ವಶಕ್ಕೆ



**ಬೆಂಗಳೂರು, ಸೆ.18:** ಹಬ್ಬದ ಸಮಯದಲ್ಲಿ ಕೆಲವು ಖಾಸಗಿ ಬಸ್‌ಗಳು ಪ್ರಯಾಣಿಕರಿಂದ ಹೆಚ್ಚುವರಿ ದರ ವಸೂಲಿ ಮಾಡಿರುವ ಬಗ್ಗೆ ಆರ್‌ಟಿಓ ಅಧಿಕಾರಿಗಳು ವ್ಯಾಪಕ ಕಾರ್ಯಾಚರಣೆ ನಡೆಸಿ 3,756 ಪ್ರಕರಣಗಳನ್ನು ದಾಖಲಿಸಿಕೊಂಡು 33 ಬಸ್‌ಗಳನ್ನು ವಶಕ್ಕೆ ಪಡೆದಿದ್ದಾರೆ.

ಪ್ರಮುಖವಾಗಿ ಗಣೇಶ ಚತುರ್ಥಿ ಹಬ್ಬದ ಹಿನ್ನಲೆಯಲ್ಲಿ ಖಾಸಗಿ ಬಸ್‌ಗಳು ಪ್ರಯಾಣಿಕ ರಿಂದ ದುಪ್ಪಟ್ಟು ದರ ವಸೂಲಿ ಮಾಡುತ್ತಿವೆ ಎಂಬ ದೂರುಗಳು ಬಂದಿದ್ದವು.

ಈ ಹಿನ್ನಲೆಯಲ್ಲಿ ಆರ್‌ಟಿಓ ಅಧಿಕಾರಿಗಳು ಖಾಸಗಿ ಬಸ್‌ಗಳ ವಿರುದ್ಧ ಕಾರ್ಯಾಚರಣೆಗಿಳಿದು ಸೆ.11 ರಿಂದ 15 ರವರೆಗೆ ಒಟ್ಟು 14,987 ಖಾಸಗಿ ಬಸ್‌ಗಳನ್ನು ಪರಿಶೀಲಿಸಿದ್ದಾರೆ. ತಪಾಸಣೆ ಸಂದರ್ಭದಲ್ಲಿ ಹಲವು ಖಾಸಗಿ ಬಸ್‌ಗಳು ನಿಯಮ ಉಲ್ಲಂಘನೆ ಮಾಡಿರುವುದು ಪತ್ತೆಯಾಗಿದೆ. ಪರವಾನಗಿ ನಿಯಮಗಳನ್ನು ಮೀರಿ ಕಾರ್ಯನಿರ್ವಹಿಸುತ್ತಿದ್ದ ಬಸ್‌ಗಳು, ತೆರಿಗೆ ವಂಚನೆ ಮಾಡಿದ್ದ ಬಸ್‌ಗಳು ಮತ್ತು ಪ್ರಯಾಣಿಕರಿಂದ ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿದ್ದ ಬಸ್‌ಗಳ ವಿರುದ್ಧ ವಿವಿಧ ಪ್ರಕರಣಗಳನ್ನು ದಾಖಲಿಸಲಾಗಿದೆ. ಹಬ್ಬದ ಸಂದರ್ಭದಲ್ಲಿ ಬೆಂಗಳೂರಿ ನಿಂದ ಹುಬ್ಬಳ್ಳಿಗೆ ಪ್ರಯಾಣಿಸಲು ಕೆಲ ಪ್ರಯಾಣಿಕರಿಂದ ಏಳು ಸಾವಿರದ ವರೆಗೆ ದರ ವಸೂಲಿ ಮಾಡಲಾಗಿದೆ ಎಂಬ ಸಾರ್ವಜನಿಕರಿಂದ ಬಂದ ದೂರುಗಳ ಆಧಾರದ ಮೇಲೆ ಆರ್‌ಟಿಓ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

ಈ ಖಾಸಗಿ ಬಸ್‌ಗಳು ಹಬ್ಬದ ಸಂದರ್ಭಗಳಲ್ಲಿ ಹೆಚ್ಚುವರಿ ದರ ವಸೂಲಿ ಮಾಡಿ ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕುತ್ತವೆ, ಹೀಗಾಗಿ ಆರ್‌ಟಿಓ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಒಟ್ಟು 73.6 ಲಕ್ಷ ಹಣ ಸಂಗ್ರಹವಾಗಿದ್ದು,ಇದರಲ್ಲಿ 40.3 ಲಕ್ಷ ದಂಡ ಸಂಗ್ರಹಿಸಲಾಗಿದೆ.

ಉಳಿದ ಹಣ ವಿವಿಧ ರೀತಿಯ ಶುಲ್ಕಗಳು ಮತ್ತು ಇತರ ವಸೂಲಿಗಳಿಂದ ಬಂದಿದೆ. ಜಪ್ತಿಮಾಡಿದ 33 ಬಸ್‌ಗಳನ್ನು ಸಂಬಂಧಪಟ್ಟ ಅಧಿಕಾರಿಗಳ ವಶಕ್ಕೆ ನೀಡಲಾಗಿದೆ. ಸಾರ್ವಜನಿಕರಿಂದ ಬಂದ ದೂರುಗಳನ್ನು ಸಂಬಂಧಪಟ್ಟ ನೋಂದಣಿ ಪ್ರಾಧಿಕಾರಗಳಿಗೆ ರವಾನಿಸಲಾಗಿದೆ.

# ಜಯನಗರದ 5ನೇ ಬ್ಲಾಕ್‌ನಲ್ಲಿ ದಕ್ಷಿಣ ಭಾರತದ ಮೊದಲ ಪುರುಷರ ವಸ್ತ್ರವಿನ್ಯಾಸದ ಬಿ-ಮೋರ್ ಸ್ಟುಡಿಯೋ ಆರಂಭ



**ಬೆಂಗಳೂರು, ಸೆ.18:** ಜಯನಗರ 5ನೇ ಬ್ಲಾಕ್‌ನಲ್ಲಿ ದಕ್ಷಿಣ ಭಾರತದಲ್ಲೇ ಮೊದಲ ಆಕರ್ಷಕ ವಿನ್ಯಾಸಕಾರರ ಪುರುಷರ ವಸ್ತ್ರ ಮಾರಾಟ ಸ್ಟುಡಿಯೋ "ಬಿ – ಮೋರ್" ಆರಂಭವಾಗಿದೆ.

ಹಾಲಿವುಡ್, ಬಾಲಿವುಡ್ ವಲಯದ ಪ್ರಮುಖ ವಸ್ತ್ರ ವಿನ್ಯಾಸಕಾರ ರೋಹಿತ್ ದೋಷಿ ಮಳಿಗೆ ಉದ್ಘಾಟಿಸಿ, ಗ್ರಾಹಕರೊಂದಿಗೆ ವೈಯಕ್ತಿಕವಾಗಿ ಸಂವಾದ ನಡೆಸಿದರು.


ಈ ಸಂದರ್ಭದಲ್ಲಿ ಸಂಗೀತ ನಿರ್ದೇಶಕ ವಿ. ಹರಿಕೃಷ್ಣ, ದಿ ಬೆಂಗಳೂರು ಹೋಲ್ ಸೇಲ್ ಕ್ಲಾತ್ ಮರ್ಚೆಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಪ್ರಕಾಶ್ ಪಿರಿಗಲ್, ಮುಂಬೈನ ವಸ್ತ್ರ ವಿನ್ಯಾಸಕಾರರಾದ ಲಲಿತ್, ಸಿಡೆಂಟ್ ಬೀಸ್ಪೋಕ್ ಮತ್ತು ಬಿ-ಮೋರ್ ಸಂಸ್ಥೆಯ ಅಧ್ಯಕ್ಷರಾದ ಪಿ. ಪ್ರಕಾಶ್ ಬಾಫ್ ಹಾಜರಿದ್ದರು.

ನಂತರ ಲೋಹಿತ್ ದೋಷಿ ಮಾತನಾಡಿ, ಹಾಲಿವುಡ್, ಬಾಲಿವುಡ್ ಸಿನೆಮಾ, ತಾರೆಯರ ಮದುವೆ, ಮತ್ತಿತರೆ ಕಾರ್ಯಕ್ರಮಗಳಿಗೆ ತಾವು ವಸ್ತ್ರ ವಿನ್ಯಾಸಕಾರರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಈಗಿನ ವಸ್ತ್ರಗಳ ಟ್ರೆಂಡ್ ಬಗ್ಗೆ ಜನರಲ್ಲಿ ವ್ಯಾಪಕ ಕುತೂಹಲವಿದೆ. ಭಾರತದಲ್ಲಿ ಇದೇ ಮೊದಲ ಶೋ ರೂಂ ಆಗಿದ್ದು, ಮೆನ್ಸ್, ವೆಡ್ಡಿಂಗ್, ಕ್ಯಾಶುವಲ್ ವೇರ್, ಫಾರ್ಮಲ್ ವೇರ್, ಪಾರ್ಟಿವೇರ್ ನಂತಹ ಭಿನ್ನ, ವಿಭಿನ್ನ ವಸ್ತ್ರಗಳನ್ನು ಪರಿಚಯಿಸಲಾಗಿದೆ ಎಂದರು.

ಸಂಗೀತ ನಿರ್ದೇಶಕ ವಿ.ಹರಿಕೃಷ್ಣ ಮಾತನಾಡಿ, ಸಿನೆಮಾಗಳಿಗೆ ಅಗತ್ಯವಾಗಿರುವ ವಸ್ತ್ರಗಳನ್ನು ಸಂಗ್ರಹಿಸಲು ಮುಂಬೈ, ದೆಹಲಿ ಮತ್ತಿತರ ನಗರಗಳಿಗೆ ತೆರಳುವ ಪರಿಸ್ಥಿತಿ ಇದೆ. ಬೆಂಗಳೂರಿನಲ್ಲಿ ಎಲ್ಲಾ ಟ್ರೆಂಡ್‌ಗಳ ಬಟ್ಟೆಗಳು ದೊರೆಯುವುದರಿಂದ ಚಿತ್ರೀಕರಣಕ್ಕೆ ಅನುಕೂಲವಾಗಲಿದೆ ಎಂದರು.

ಬಿ-ಮೋರ್ ಸಂಸ್ಥೆಯ ಅಧ್ಯಕ್ಷ ಪಿ. ಪ್ರಕಾಶ್ ಬಾಫ್ ಮಾತನಾಡಿ, ಬೀ ಮೋರ್ ಮಳಿಗೆ ನೋಡಲು ವಿದೇಶಕ್ಕೆ ಹೋಗಬೇಕಾಗಿದೆ. 20 ರಿಂದ 80 ವರ್ಷದವರೆಗೆ ಪ್ರತಿಯೊಬ್ಬರಿಗೂ ವೈವಿಧ್ಯಮಯ ಬಟ್ಟೆಗಳು ದೊರೆಯುಲಿವೆ. ಇಟಲಿ, ಜಪಾನ್‌ನ ಬಟ್ಟೆಯಲ್ಲಿ ಈ ವಸ್ತ್ರಗಳನ್ನು ತಯಾರು ಮಾಡಲಾಗಿದೆ ಎಂದರು.

# ರಾಜ್ಯದಲ್ಲಿ ನದಿಗಳ ಒಳಹರಿವಿನಲ್ಲಿ ಏರಿಕೆ ಜಲಾಶಯಗಳ ಮಟ್ಟ ದಿನೇದಿನೇ ಇಳಿಕೆ



**ಬೆಂಗಳೂರು, ಸೆ.18:** ರಾಜ್ಯದಲ್ಲಿ ಈವರೆಗೆ ಸುರಿದ ಹಾಗೂ ಅಲ್ಲಲ್ಲಿ ಮಳೆಯಾಗುತ್ತಿರುವುದರಿಂದ ನದಿಗಳ ಒಳಹರಿವು ಏರಿಕೆ ಆಗಿದೆ. ಕೆಲವು ಜಲಾಶಯಗಳಲ್ಲಿ ನೀರು ದಿನೇದಿನೆ ಖಾಲಿ ಆಗುತ್ತಿದ್ದು, ಆಲಮಟ್ಟಿ, ತುಂಗಭದ್ರಾ ಡ್ಯಾಂಗಳಲ್ಲಿ ನೀರು ಭರ್ತಿ ಹಂತದಲ್ಲಿದ್ದು, ಜೀವಕಳೆ ಬಂದಿದೆ.

ಕೃಷ್ಣರಾಜ ಸಾಗರ (ಕೆಆರ್‌ಎಸ್), ಕಬಿನಿ ಇನ್ನಿತರ ಡ್ಯಾಂಗಳಲ್ಲಿ ನೀರಿನ ಹೊರ ಹರಿವು ಹೆಚ್ಚಿದೆ. ಇದರಿಂದ ಜಲಾನಯನ ಭಾಗದ ರೈತರು, ನಾಗರಿಕರು ಆತಂಕ ಮನೆ ಮಾಡಿದೆ. ಇಂದು ಕರ್ನಾಟಕದ ಪ್ರಮುಖ ಅಣೆಕಟ್ಟುಗಳ ನೀರಿನ ಮಟ್ಟ ಎಷ್ಟಿದೆ ಎಂಬ ವಿವರ ಇಲ್ಲಿದೆ.

ಕರ್ನಾಟಕದ ಅರ್ಧ ಜಿಲ್ಲೆಗಳಲ್ಲಿ ಮಳೆಯ ಮುನ್ಸೂಚನೆ ಇದ್ದು, ಮುಂದಿನ ಕೆಲವು ದಿನ ಮಳೆ ಆಗಲಿದೆ. ಉತ್ತರ ಒಳನಾಡಿನಲ್ಲಿ ಒಣಹವೆ ಮುಂದುವರಿಯಲಿದೆ. ಮಲೆನಾಡು, ದಕ್ಷಿಣ ಒಳನಾಡಿನ ಭಾಗಗಳಲ್ಲಿ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕೇರಳ, ಪಶ್ಚಿಮ ಘಟ್ಟಗಳ ಸಾಲಿನಲ್ಲಿ ಆಗಾಗ ಬಂದು ಹೋಗುವ ಮಳೆಯಿಂದ ಹಾರಂಗಿ, ಹೇಮಾವತಿ, ತುಂಗಭದ್ರಾ, ಕೆಆರ್. ಎಸ್, ಕಬಿನಿ ಡ್ಯಾಂಗಳಲ್ಲಿ ಒಳಹರಿವು ಉತ್ತಮವಾಗಿದೆ. ಘಟಪ್ರಭಾ ಜಲಾಶಯದಲ್ಲೂ ನೀರಿನ ಸಂಗ್ರಹ ಉತ್ತಮವಾಗಿದೆ.

* **ಕಬಿನಿ:** ಗರಿಷ್ಠ ಮಟ್ಟ: 19.52 ಟಿಎಂಸಿ, ಇಂದಿನ ಸಂಗ್ರಹ: 10.97 ಟಿಎಂಸಿ, ಒಳಹರಿವು: 914 ಕ್ಯೂಸೆಕ್, ಹೊರ ಹರಿವು: 557ಕ್ಯೂಸೆಕ್
* **ಹಾರಂಗಿ ಡ್ಯಾಂ:** ಗರಿಷ್ಠ ಮಟ್ಟ: 8.50 ಟಿಎಂಸಿ, ಇಂದಿನ ಸಂಗ್ರಹ: 6.14 ಟಿಎಂಸಿ, ಒಳಹರಿವು: 229 ಕ್ಯೂಸೆಕ್, ಹೊರ ಹರಿವು: 2950 ಕ್ಯೂಸೆಕ್
* **ಕೆಆರ್‌ಎಸ್:** ಗರಿಷ್ಠ ಮಟ್ಟ: 49.45 ಟಿಎಂಸಿ, ಇಂದಿನ ಸಂಗ್ರಹ: 27.83 ಟಿಎಂಸಿ, ಒಳಹರಿವು: 4152 ಕ್ಯೂಸೆಕ್, ಹೊರ ಹರಿವು: 1516 ಕ್ಯೂಸೆಕ್
* **ಆಲಮಟ್ಟಿ :** ಗರಿಷ್ಠ ಮಟ್ಟ: 123 ಟಿಎಂಸಿ, ಇಂದಿನ ಸಂಗ್ರಹ: 119.23 ಟಿಎಂಸಿ, ಒಳಹರಿವು: 00 ಕ್ಯೂಸೆಕ್

**ಹೊರಹರಿವು: 10389ಕ್ಯೂಸೆಕ್**

* **ಲಿಂಗನಮಕ್ಕಿ:** ಗರಿಷ್ಠ ಮಟ್ಟ: 151.75 ಟಿಎಂಸಿ, ಇಂದಿನ ಸಂಗ್ರಹ: 86.86 ಟಿಎಂಸಿ, ಒಳಹರಿವು: 2084ಕ್ಯೂಸೆಕ್

**ಹೊರಹರಿವು: 7343ಕ್ಯೂಸೆಕ್**

* **ಹೇಮಾವತಿ:** ಗರಿಷ್ಠ ಮಟ್ಟ: 37.10 ಟಿಎಂಸಿ, ಇಂದಿನ ಸಂಗ್ರಹ: 18.17 ಟಿಎಂಸಿ, ಒಳಹರಿವು: 1726ಕ್ಯೂಸೆಕ್

**ಹೊರಹರಿವು: 9300ಕ್ಯೂಸೆಕ್**

* **ತುಂಗಭದ್ರಾ:** ಗರಿಷ್ಠ ಮಟ್ಟ: 105 ಟಿಎಂಸಿ, ಇಂದಿನ ಸಂಗ್ರಹ: 82.74 ಟಿಎಂಸಿ, ಒಳಹರಿವು: 00 ಕ್ಯೂಸೆಕ್

**ಹೊರಹರಿವು: 11771 ಕ್ಯೂಸೆಕ್**

* **ಭದ್ರಾ:** ಗರಿಷ್ಠ ಮಟ್ಟ: 71.54 ಟಿಎಂಸಿ, ಇಂದಿನ ಸಂಗ್ರಹ: 62.19 ಟಿಎಂಸಿ, ಒಳಹರಿವು: 314 ಕ್ಯೂಸೆಕ್

**ಹೊರಹರಿವು: 1726 ಕ್ಯೂಸೆಕ್**

* **ಘಟಪ್ರಭಾ:** ಗರಿಷ್ಠ ಮಟ್ಟ: 51 ಟಿಎಂಸಿ, ಇಂದಿನ ಸಂಗ್ರಹ: 50.84 ಟಿಎಂಸಿ, ಒಳಹರಿವು: 509 ಕ್ಯೂಸೆಕ್

**ಹೊರಹರಿವು: 190 ಕ್ಯೂಸೆಕ್**



ಸಿಎಂ ಡಿ.ಕೆ...ಶಿವಕುಮಾರ್ ಅವರು ತಮ್ಮ ಸಂಪುಟ ಸಹೋದ್ಯೋಗಿಗಳ ಜತೆ ಮಂಗಳೂರಿನ ಕದ್ರಿಯ ಮಂಜುನಾಥ ಸ್ವಾಮಿ ದೇಗುಲಕ್ಕೆ ಶುಕ್ರವಾರ ಭೇಟಿ ನೀಡಿ ಪೂಜೆ ಸಲ್ಲಿಸಿದರು.

# ಸ್ಥಳ ಪರಿಶೀಲನೆ ನಂತರ ಬರಪೀಡಿತ ಪಟ್ಟಿಗೆ ಸೇರ್ಪಡೆ: ಡಾ.ಅಜಯಸಿಂಗ್ ವಿಶ್ವಾಸ

**ಕಲಬುರಗಿ, ಸೆ. 18:** ಜಿಲ್ಲೆಯ ಯಡ್ರಾಮಿ ತಾಲ್ಲೂಕನ್ನು ರಾಜ್ಯ ಸರ್ಕಾರ ತೀವ್ರ ಬರಪೀಡಿತ ತಾಲೂಕಾಗಿ ಘೋಷಿಸಿದ್ದು, ಇದೀಗ ಜೇವರ್ಗಿ ತಾಲ್ಲೂಕನ್ನು ಬರ ಪರಿಸ್ಥಿತಿಯ ಅಧ್ಯಯನಕ್ಕಾಗಿ ಗ್ರೌಂಡ್ ಟ್ರೂಥಿಂಗ್‌ಗೆ ಆಯ್ಕೆ ಮಾಡಲಾಗಿದೆ. ಸ್ಥಳ ಪರಿಶೀಲನೆ ಮತ್ತು ಬೆಳೆ ಹಾನಿ ವರದಿ ಬಳಿಕ ಜೇವರ್ಗಿಯನ್ನೂ ಬರಪೀಡಿತ ತಾಲೂಕಾಗಿ ಸರ್ಕಾರ ಪರಿಗಣಿಸಲಿದೆ ಎಂಬ ವಿಶ್ವಾಸವಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ತಿಳಿಸಿದರು.

ರಾಜ್ಯದಲ್ಲಿ ಮಳೆ ಮತ್ತು ಬೆಳೆ ಪರಿಸ್ಥಿತಿಯ ಮರುಪರಿಶೀಲನೆಯ ಭಾಗವಾಗಿ 17 ಜಿಲ್ಲೆಗಳ 53 ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ ನಡೆಸಲು ಸರ್ಕಾರ ಸೂಚಿಸಿದ್ದು, ಜಿಲ್ಲೆಯ ಚಿಂಚೋಳಿ, ಜೇವರ್ಗಿ, ಸೇಡಂ, ಕಾಳಗಿ ಮತ್ತು ಕಮಲಾಪುರ ತಾಲೂಕುಗಳು ಈ ಪಟ್ಟಿಯಲ್ಲಿ ಸೇರಿವೆ. ಗ್ರೌಂಡ್ ಟ್ರೂಥಿಂಗ್ ಸಂದರ್ಭದಲ್ಲಿ ಗ್ರಾಮ ಮತ್ತು ಜಮೀನು ಮಟ್ಟದಲ್ಲಿ ಬೆಳೆಗಳ ಸ್ಥಿತಿ, ಮಳೆ ಕೊರತೆ ಹಾಗೂ ಬೆಳೆ ನಷ್ಟದ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಲಾಗುತ್ತದೆ. ಸ್ಥಳ ಪರಿಶೀಲನೆಯಿಂದ ಸಂಗ್ರಹವಾಗುವ ಮಾಹಿತಿಯನ್ನು ಆಧರಿಸಿ ಸರ್ಕಾರ ಮುಂದಿನ ಹಂತದಲ್ಲಿ ಅರ್ಹ ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸುವ ಕುರಿತು ನಿರ್ಧಾರ ಕೈಗೊಳ್ಳಲಿದೆ ಎಂದು ಅವರು ಹೇಳಿಕೆಯಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಮೊದಲ ಹಂತದಲ್ಲಿ 101 ತಾಲ್ಲೂಕುಗಳು ಮತ್ತು ಸೆ.17ರಂದು ಮತ್ತಷ್ಟು 23 ತಾಲ್ಲೂಕುಗಳು ಬರಪೀಡಿತ ಎಂದು ಘೋಷಿಸಲ್ಪಟ್ಟಿವೆ. ಯಡ್ರಾಮಿ ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸಬೇಕೆಂಬ ರೈತರ ಬೇಡಿಕೆಗೆ ಸರ್ಕಾರ ಸ್ಪಂದಿಸಿದೆ.

ಇದೀಗ ಜೇವರ್ಗಿ ತಾಲೂಕನ್ನೂ ಗ್ರೌಂಡ್ ಟ್ರೂಥಿಂಗ್‌ಗೆ ಆಯ್ಕೆ ಮಾಡಲಾಗಿದೆ. ಸ್ಥಳ ಪರಿಶೀಲನೆಯಲ್ಲಿ ರೈತರು ಎದುರಿಸುತ್ತಿರುವ ನೈಜ ಪರಿಸ್ಥಿತಿ ಸ್ಪಷ್ಟವಾಗಿ ದಾಖಲಾಗಲಿದೆ. ಸಮಗ್ರ ವರದಿ ಸಲ್ಲಿಕೆಯಾದ ಬಳಿಕ ಜೇವರ್ಗಿಯನ್ನೂ ಬರಪೀಡಿತ ತಾಲೂಕಾಗಿ ಪರಿಗಣಿಸಲಾಗುತ್ತದೆ ಎಂಬ ವಿಶ್ವಾಸವಿದೆ ಎಂದು ಅವರು ತಿಳಿಸಿದರು.



### ಆಸ್ಪತ್ರೆ ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆ

# ಆರೋಗ್ಯ ಸಚಿವ ಖಾದರ್ ಫೋಟೋಗೆ ಕತ್ತರಿ ಹಾಕಿದ್ದ ಡಿಎಚ್‌ಓ ಅಮಾನತು

**ಬಸವಕಲ್ಯಾಣ, ಸೆ. 18:** ತಾಲೂಕಿನಲ್ಲಿ ನಡೆದ ಉಪವಿಭಾಗ ಆಸ್ಪತ್ರೆಯ ಕಟ್ಟಡ ಕಾಮಗಾರಿಯ ಶಂಕುಸ್ಥಾಪನೆ ಸರ್ಕಾರಿ ಕಾರ್ಯಕ್ರಮದ ಬ್ಯಾನರ್‌ನಲ್ಲಿ ಆರೋಗ್ಯ ಸಚಿವರ ಫೋಟೋ ಹಾಕದೆ ಶಿಷ್ಟಾಚಾರ ಉಲ್ಲಂಘಿಸಿ ನಿರ್ಲಕ್ಷ್ಯ ತೋರಿದ್ದ ಬೀದರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಧ್ಯಾಲೇಶ್ವರ ನಿರಗುಡೆ ಹಾಗೂ ಬಸವಕಲ್ಯಾಣ ತಾಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಶೋಕ ಮೈಲಾರೆ ಅವರನ್ನು ಅಮಾನತು ಮಾಡಲಾಗಿದೆ.



ಜಿಲ್ಲೆಯ ಬಸವಕಲ್ಯಾಣದಲ್ಲಿ ನಡೆದ ಉಪವಿಭಾಗೀಯ ಆಸ್ಪತ್ರೆ ಕಟ್ಟಡ ಕಾಮಗಾರಿ ಶಂಕುಸ್ಥಾಪನೆ ಸಮಾರಂಭದಲ್ಲಿ ಅಧಿಕಾರಿಗಳ ಶಿಷ್ಟಾಚಾರದ ನಿರ್ಲಕ್ಷ್ಯ ಹಾಗೂ ಕರ್ತವ್ಯ ಲೋಪದ ಕುರಿತು ಬುಧವಾರದ ಪತ್ರಿಕೆಯೊಂದು ವರದಿ ಪ್ರಕಟಿಸಿ ಸರ್ಕಾರದ ಗಮನ ಸೆಳೆದಿತ್ತು.

ಈ ಕುರಿತು ಕರ್ತವ್ಯ ನಿರ್ಲಕ್ಷ್ಯ ಹಾಗೂ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು ಉಲ್ಲಂಘನೆ ಮೇಲ್ನೋಟಕ್ಕೆ ಕಂಡುಬಂದ ಹಿನ್ನೆಲೆಯಲ್ಲಿ ಇಲಾಖಾ ವಿಚಾರಣೆ ಬಾಕಿ ಇರಿಸಿ ಈ ಶಿಸ್ತು ಕ್ರಮ ಜರುಗಿಸಲಾಗಿದೆ.

ಪತ್ರಿಕಾ ವರದಿಗಳಿಗೆ ತಕ್ಷಣವೇ ಸ್ಪಂದಿಸಿರುವ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಯು ಇದೀಗ ಕಟ್ಟುನಿಟ್ಟಿನ ಕ್ರಮ ಜರುಗಿಸಿದ್ದು, ಶಿಷ್ಟಾಚಾರ ನಿಯಮಗಳ ಉಲ್ಲಂಘನೆ ಹಾಗೂ ಕರ್ತವ್ಯ ನಿರ್ಲಕ್ಷ್ಯದ ಆರೋಪದ ಹಿನ್ನೆಲೆಯಲ್ಲಿ ಇಬ್ಬರು ಹಿರಿಯ ವೈದ್ಯಾಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತು ಗೊಳಿಸಿ ಆದೇಶಿಸಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು ಹಾಗೂ ಶಿಸ್ತು ಪ್ರಾಧಿಕಾರಿಯಾದ ಗುರುದತ್ತ ಹೆಗಡೆ ಸೆ.17ರಂದು ಈ ಅಮಾನತು ಆದೇಶವನ್ನು ಹೊರಡಿಸಿದ್ದಾರೆ.

# ತುಳು ಭಾಷೆಗೆ ಅಧಿಕೃತ ಮಾನ್ಯತೆ ದೀರ್ಘ ಕಾಲದ ಕನಸು ನನಸು: ಡಾ ಸದಾನಂದ ಪೆರ್ಲ

**ಕಲಬುರಗಿ, ಸೆ.18–** ತುಳು ಭಾಥೆ ಕರ್ನಾಟದ ಎರಡನೆಯ ಆಧಿಕೃತ ಭಾಷೆಯಾಗಿ ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಅಂಗೀಕಾರ ನೀಡಿರುವುದು ತುಳು ಭಾಷಿಕರ ದೀರ್ಘಕಾಲದ ಕನಸಿಗೆ ಸಿಕ್ಕ ಪುರಸ್ಕಾರ ಎಂದು ದಕ್ಷಿಣ ಕಣ್ಣಡ ಸಂಘದ ಮಾಜಿ ಅಧ್ಯಕ್ಷರು ಹಾಗೂ ತುಳು ಬರಹಗಾರ ಡಾ ಸದಾನಂದ ಪೆರ್ಲ ಹರ್ಷ ವ್ಯಕ್ತಪಡಿಸಿದ್ದಾರೆ.



ತುಳು ಭಾಷೆಗೆ ಅಧಿಕೃತ ಮಾನ್ಯತೆ ನೀಡುವ ಐತಿಹಾಸಿಕ ನಿರ್ಧಾರ ಕೈಗೊಂಡಿರುವ ಕರ್ನಾಟಕ ಸರಕಾರ ಹಾಗೂ ಮುಖ್ಯಮಂತ್ರಿ ಡಿ ಕೆ ಶಿವಕುಮಾರ ಅವರಿಗೆ ಕಲ್ಯಾಣ ಕರ್ನಾಟಜದ ಸಮಸ್ತ ತುಳು ಭಾಷಿಕರ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು. ತುಳು ಕೇವಲ ಒಂದು ಭಾಷೆಯಲ್ಲ. ಅದು ತುಳು ನಾಡಿನಜನರ ಅಸ್ಮಿತೆ, ಆತ್ಮಗೌರವ, ಸಂಸ್ಕೃತಿ ಪರಂಪಸರೆ ಮತ್ತು ಬದುಕಿನ ಅವಿಭಾಜ್ಯ ಅಂಗವಾಗಿದೆ. ಶತಮಾನಗಳಿಂದ ಜನರ ನಿತ್ಯ ಜೀವನದಲ್ಲಿ ಜೀವಂತವಾಗಿರುವ ಭಾಷೆಯಾಗಿದೆ. ಕಳೆದ ಹಲವಾರು ವರ್ಷಗಳಿಂದ ತುಳು ಭಾಷೆಯನ್ನು ರಾಜ್ಯದ ಅಧಿಕೃತ ಭಾಷೆಯಾಗಿ ಅಂಗಿಕರಿಸಿ ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ಸೇರಿಸುವಂತೆ ತುಳುವರು ನಡೆಸಿದ ಬೇಡಿಕೆ ಹೋರಾಟಕ್ಕೆ ರಾಜ್ಯ ಸತ್ರಕಾರ ಸ್ಪಂದನೆ ನೀಡಿ ಮಹತ್ವದ ನಿರ್ಧಾರ ಕೈಗೊಂಡಿದೆ ಎಂದು ಡಾ ಪೆರ್ಲ ತಿಳಿಸಿದರು.

ತುಳು ಭಾಷೆಯು ಇಂದು ಕೇವಲ ಕರಾವಳಿಗರ ಮಾತ್ರ ಭಾಷೆಯಾಗಿ ಮಾತ್ರ ಉಳಿದಿಲ್ಲ. ಜಗತ್ತಿನಾದ್ಯಂತ ನೆಲೆಸಿರುವ ಕೋಟಿ ಕೋಟಿ ಸಂಖ್ಯೆಯ ತುಳುವರ ಹೃದಯದ ಭಾಷೆಯಾಗಿದೆ. ಕರಾವಳಿಯಲ್ಲಿ ತುಳು ಭಾಷೆ ಕಲಿಕೆಗೆ ಈಗಾಗಲೇ ಶಾಲೆಗಳಲ್ಲಿ ಅವಕಾಶ ಕಲ್ಪಿಸಲಾಗಿದ್ದು ಭಾಷೆಯ ಸಂಸ್ಕೃತಿಯ ಪರಂಪರೆಯ ಸಮಗ್ರ ಅಧ್ಯಯನಕ್ಕೆ ಸರಕಾರದ ಈ ನಿರ್ಧಾರದಿಂದ ಅನುಕೂಲವಾಗಲಿದೆ. ಕೇಂದ್ರ ಸರ್ಕಾರವು ತುಳು ಭಾಷೆಯನ್ನು ಎಂಟನೇ ಪರಿಚ್ಛೇದಕ್ಕೆ ಸೇರಿಸಲು ಈಗ ದಾರಿ ಸುಗಮಗೊಂಡಂತಾಗಿದೆ. ಸಣ್ಣ ಸಣ್ಣ ಭಾಷೆಗಳು ಅಳಿಯುತ್ತಿರುವ ಆತಂಕದ ನಡುವೆ ತುಳು ಭಾಷೆಗೆ ಸರಕಾರವು ಅಧಿಕೃತ ಮಾನ್ಯತೆ ನೀಡಿ ಭಾಷಾ ಬೆಳವಣಿಗೆಗೆ ಮತ್ತಷ್ಟು ಬಲ ದೊರೆತಂತಾಗಿದೆ. ತುಳು ಭಾಷಾ ಕಲಿಕೆಗೆ ಸೌಲಭ್ಯ, ತುಳು ಮಾಧ್ಯಮದ ಮೂಲಕ ಶಿಕ್ಷಣ, ತುಳು ಭಾಷೆಯ ಅಭಿವೃದ್ಧಿ ನಿಗಮ ಸ್ಥಾಪನೆ,ತುಳು ಭಾಷೆಯಲ್ಲಿ ಸಂಶೋಧನೆ, ಡಿಜಿಟಲೀಕರಣ, ದಾಖಲೀಕರಣ ಹಾಗೂ ವಿಶ್ವವಿದ್ಯಾಲಯ ಹಂತಕ್ಕೂ ತುಳು ಅಧ್ಯಯನದ ಅವಕಾಶ ಹಾಗೂ ಸಂವಿಧಾನದ ಎಂಟನೇ ಅನುಸೂಚಿಯಲ್ಲಿ ಸೇರ್ಪಡೆ ಕಾರ್ಯ ಮುಂದಿನ ದಿನಗಳಲ್ಲಿ ಸಾಕಾರಗೊಳ್ಳಲಿ ಎಂದು ಡಾ ಸದಾನಂದ ಪೆರ್ಲ ಆಶಯ ವ್ಯಕ್ತಪಡಿಸಿದ್ದಾರೆ.

### ಮಲ್ಲಿಕಾರ್ಜುನ ಖರ್ಗೆ ಭಾಷಣ ಮಾಡಿದ ವೇದಿಕೆ ಶುದ್ದೀಕರಣ

## ರಾಹುಲ್‌ಗಾಂಧಿ ವಿರುದ್ಧ ಎಫ್‌ಐಆರ್

### ವಿರೋಧಿಸಿ ದ.ಕ. ಜಿಲ್ಲಾ ಕಾಂಗ್ರೆಸ್‌ನಿಂದ ಧರಣಿ

**ಮಂಗಳೂರು, ಸೆ.18:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಭಾಷಣ ಮಾಡಿದ ವೇದಿಕೆಯನ್ನು ಶುದ್ದೀಕರಣ ಹೆಸರಲ್ಲಿ ಅವಮಾನಿಸಿದ ಘಟನೆ ಹಾಗೂ ಇದನ್ನು ಪ್ರಶ್ನಿಸಿದ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಉತ್ತರಾಖಂಡದ ಬಿಜೆಪಿ ಸರಕಾರದ ನಡೆಯನ್ನು ಖಂಡಿಸಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ದ.ಕ.ಜಿಲ್ಲಾ ಸಮಿತಿ ವತಿಯಿಂದ ನಗರದ ಕುದ್ಮಲ್ ರಂಗರಾವ್ ಪುರಭವನದ ಗಾಂಧಿ ಪ್ರತಿಮೆ ಮುಂಭಾಗದಲ್ಲಿ ಗಾಂಧಿ ಸತ್ಯಾಗ್ರಹ– ಧರಣಿ ನಡೆಯಿತು.

ಕಳೆದ 12 ವರ್ಷಗಳ ಕೇಂದ್ರದ ಎನ್‌ಡಿಎ ಸರಕಾರದ ಆಡಳಿತದಲ್ಲಿ ಯುವಜನರ ಉದ್ಯೋಗ, ಶಿಕ್ಷಣ, ಪರೀಕ್ಷೆ–ನೇಮಕಾತಿ, ಸಮಾನ ಅವಕಾಶ, ಹಾಗೂ ಭವಿಷ್ಯದ ಭದ್ರತೆಗೆ ಸಂಬಂಧಿಸಿದ ವೈಫಲ್ಯಗಳನ್ನು ಈ ಸಂದರ್ಭದಲ್ಲಿ ಪ್ರಶ್ನಿಸಿದರು.ಕೆಪಿಸಿಸಿ ಪ್ರಚಾರ ಸಮಿತಿಯ ಅಧ್ಯಕ್ಷ ವಿನಯ ಕುಮಾರ್ ಸೊರಕೆ ಈ ಸಂದರ್ಭದಲ್ಲಿ ಮಾತನಾಡಿ, ಮಲ್ಲಿಕಾರ್ಜುನ ಖರ್ಗೆಯವರು ಭಾಷಣ ಮಾಡಿದ ವೇದಿಕೆಯನ್ನು ಶುದ್ದೀಕರಣ ಹೆಸರಲ್ಲಿ ಅವಮಾನಿಸಿದ ಘಟನೆ ಖಂಡಿಸಿ ಕೆಪಿಸಿಸಿ ಪ್ರಚಾರ ಸಮಿತಿಯ ವತಿಯಿಂದ ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಧರಣಿ ನಡೆದಿದೆ. ಈಗ ಕೊನೆಯಲ್ಲಿ ಮಂಗಳೂರಿನಲ್ಲಿ ಕಾರ್ಯಕ್ರಮ ನಡೆಯುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕಾರ್ಮಿಕನ ಮಗನಾಗಿ ಕಟ್ಟಕಡೆಯ ಕುಟುಂಬದಿಂದ ಬಂದು ಶಿಕ್ಷಣ, ಕಂದಾಯ ಸಚಿವರಾಗಿ ಭೂ ಮಸೂದೆ ಕಾನೂನಿಗೆ ಹೊಂದಿ ಕೊಂಡು ಅನೇಕರಿಗೆ ಮನೆ ನಿವೇಶನ ಕೊಟ್ಟಿದ್ದಾರೆ.

ಅಕ್ರಮ ಸಕ್ರಮ ಯೋಜನೆಯಲ್ಲಿ ರಾಜ್ಯಾದ್ಯಂತ ಎಕ್ರೆಗಟ್ಟಲೆ ಜಾಗವನ್ನು ಬಡವರಿಗೆ ನೀಡಿದವರು. ಕೇಂದ್ರ ಸಚಿವರಾಗಿ, ವಿಪಕ್ಷ ನಾಯಕರಾಗಿ, ಕಾರ್ಮಿಕ ಸಚಿವರಾಗಿ ಬಡವರ ಸೇವೆ ಮಾಡಿದವರು. ಅವರು ಭಾಷಣ ಮಾಡಿದ ಜಾಗವನ್ನು ಭಾರತೀಯ ಜನತಾ ಪಕ್ಷದವರು ಗಂಗಾಜಲ ಸಿಂಪಡಿಸಿ ಶುದ್ದೀಕರಣ ಮಾಡುವ ಮೂಲಕ ದೇಶದ 144 ಕೋಟಿ ಜನರು ತಲೆತಗ್ಗಿಸುವ ಕೆಲಸ ಮಾಡಿದ್ದಾರೆ. ಇದು ಅವರು ಭಾರತದ ಸಂವಿಧಾನಕ್ಕೆ ಮಾಡಿದ ಅವಮಾನ ಎಂದರು.

ಈ ಪ್ರಕರಣದಲ್ಲಿ ನಾವು ನ್ಯಾಯ ಕೊಡುತ್ತೇವೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಕೇಂದ್ರ ಸಚಿವ ಜೆಪಿ ನಡ್ಡಾ ಹೇಳಿದ್ದರೂ ಅದು ಇನ್ನೂ ಕಾರ್ಯಗತಗೊಂಡಿಲ್ಲ. ಈ ಘಟನೆಯ ಬಗ್ಗೆ ಸಂವಿಧಾನದ 17ನೇ ವಿಧಿ ಪ್ರಕಾರ ಪ್ರಕರಣ ದಾಖಲಿಸಿಕೊಂಡು ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ಆಗಿದೆ. ಒಂದು ರೀತಿಯಲ್ಲಿ ಕಳ್ಳನಿಗೆ ರಕ್ಷಣೆ, ಪೊಲೀಸರಿಗೆ ಜೈಲು ಎಂಬ ಸ್ಥಿತಿ ಬಿಜೆಪಿ ನೇತೃತ್ವದ ಕೇಂದ್ರ ಸರಕಾರದ್ದಾಗಿದೆ? ಎಂದು ಸೊರಕೆ ಆಪಾದಿಸಿದರು.

# ನಡುರಸ್ತೆಯಲ್ಲೇ ಮಹಿಳೆಯ ಮೇಲೆ ಹಲ್ಲೆ, ಪ್ರಕರಣ ದಾಖಲಿಸಿದ ಪಿಎಸ್‌ಐ ವಾಹನಕ್ಕೆ ಬೆಂಕಿ ಹಚ್ಚಿದ ಪೇದೆ

**ಕಲಬುರಗಿ, ಸೆ. 18:** ಜಿಲ್ಲೆಯ ಮಹಾಗಾಂವ ಕ್ರಾಸ್‌ನಲ್ಲಿ ಪೊಲೀಸ್ ಪೇದೆಯೊಬ್ಬ ನಡುಬೀದಿಯಲ್ಲೇ ಮಹಿಳೆ ಮೇಲೆ ಹಲ್ಲೆಮಾಡಿ ಮನೆಯ ಬಾಗಿಲು ಮುರಿದು ಚಿಂದಿ ಬಟ್ಟೆಗಳಿಗೆ ಬೆಂಕಿ ಹಚ್ಚಿರುವ ಘಟನೆ ಹಿನ್ನೆಲೆಯಲ್ಲಿ ಆತನ ವಿರುದ್ಧ ಕೇಸ್ ದಾಖಲಿಸಿರುವುದಕ್ಕೆ ಕುಪಿತಗೊಂಡ ಪೇದೆ, ಪಿಎಸ್‌ಐ ವಾಹನಕ್ಕೆ ಬೆಂಕಿ ಹಚ್ಚಿದ್ದು, ಚಿಂಚೋಳಿ ಠಾಣೆಯ ಪೇದೆ ರಾಜಶೇಖರ ವರನಾಳ್ ಎಂಬಾತನೇ ಈ ಕೃತ್ಯ ಎಸಗಿದ್ದಾನೆ ಎನ್ನಲಾಗಿದೆ.




ಈ ಹಿಂದೆ ಈತ ಮಹಾಗಾಂವ ಪೊಲೀಸ್ ಠಾಣೆಯಲ್ಲಿ 3–4 ವರ್ಷ ಸೇವೆ ಸಲ್ಲಿಸಿದ್ದ. ಮಹಾಗಾಂವ್ ಕ್ರಾಸ್‌ನಲ್ಲಿ ಮಹಿಳೆಯ ಜತೆ ಅನೈತಿಕ ಸಂಬಂಧ ಹೊಂದಿದ್ದ ಎನ್ನಲಾಗಿದೆ. ಮಹಿಳೆಯ ಸಂಬಂಧಿಕರು ದೂರು ನೀಡಿದ್ದಕ್ಕೆ ಚಿಂಚೋಳಿ ಠಾಣೆಗೆ ಆತನನ್ನು ವರ್ಗಾವಣೆ ಮಾಡಲಾಗಿತ್ತು. ಬಳಿಕ ರಾಜಶೇಖರ ಮಕ್ಕಳ ಶಾಲೆಯ ನೆಪದಲ್ಲಿ ಮಹಾಗಾಂವ್ ಕ್ರಾಸ್‌ನಲ್ಲಿ ವಾಸವಾಗಿದ್ದು, ಭಾನುವಾರ ಸಂಜೆ ಮಹಿಳೆಯನ್ನು ಜೊತೆಗೆ ಕರೆದುಕೊಂಡು ಹೋಗಿ ನಡುರಸ್ತೆಯಲ್ಲಿ ಹಲ್ಲೆ ಮಾಡಿದ್ದಾನೆ. ಬಂಡೆಗಲ್ಲು ಎತ್ತಿಹಾಕಿ ಬಾಗಿಲು ಮುರಿದು ಮನೆಗೆ ನುಗ್ಗಿ ಚಿಂದಿ ಬಟ್ಟೆ, ಪ್ಲಾಸ್ಟಿಕ್ ಕಾಗದಗಳಿಗೆ ಬೆಂಕಿ ಹಚ್ಚಿದ್ದಾನೆ. ಇದನ್ನು ನೋಡಿದ ಜನರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸರಿಗೆ ಆಕೆ ನನಗೆ 10 ಲಕ್ಷ ರೂ. ಹಣ, ಬಂಗಾರ ಕೊಡಬೇಕು. ಕೇಳಿದರೆ ಏನು ಇಲ್ಲ ಎನ್ನುತ್ತಿದ್ದಾಳೆ, ಆದ್ದರಿಂದ ಈ ಘಟನೆ ಸಂಭವಿಸಿದೆ ಎಂದು ತಿಳಿಸಿದ್ದಾನೆ. ಮಹಿಳೆಯ ಪತಿ ಮಹಾಗಾಂವ ಠಾಣೆಗೆ ದೂರು ಸಲ್ಲಿಸಿದ್ದಾರೆ. ಇನ್ನೂ ಪ್ರಕರಣದಲ್ಲಿ ಪೇದೆ ರಾಜಶೇಖರ ವಿರುದ್ಧ ಮಹಾಗಾಂವ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳುವ ಪ್ರಕ್ರಿಯೆ ನಡೆಯಿತು. ಇದರಿಂದ ಕುಪಿತಗೊಂಡ ಆತ ನಾನು ಇಲ್ಲಿಯೇ ಕೆಲಸ ಮಾಡಿದ್ದೇನೆ. ನನ್ನ ಮೇಲೆ ಕೇಸ್ ದಾಖಲಿಸಿಕೊಳ್ಳುವುದು ಸರಿಯಲ್ಲ ಎಂದು ಪಿಎಸ್‌ಐ ಬಸವರಾಜ್ ಚಿತ್ತಕೋಟಗೆ ಆರೋಪಿ ಬೆದರಿಕೆ ಹಾಕಿದ್ದಾನೆ.

ಮಾತಿನ ಚಕಮಕಿ ನಡೆದಿದ್ದು, ಇದನ್ನು ಸಹಿಸದ ರಾಜಶೇಖರ ಪಿಎಸ್‌ಐ ಕಾರಿಗೂ ಬೆಂಕಿ ಹಚ್ಚಿ ಪರಾರಿಯಾಗಿದ್ದಾನೆ. ಈ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

# ಹಸಿರು ಹೊದಿಕೆ ಹೆಚ್ಚಳ ತುರ್ತು ಅಗತ್ಯ: ಖಂಡ್ರೆ



**ಬೀದರ್, ಸೆ. 18:** ಜಾಗತಿಕ ತಾಪಮಾನ ಹೆಚ್ಚಳದಿಂದ ಅನೇಕ ಗಂಡಾಂತರಗಳು ಎದುರಾಗುತ್ತಿದ್ದು, ಹಸಿರು ಹೊದಿಕೆ ಹೆಚ್ಚಿಸುವ ತುರ್ತು ಅಗತ್ಯವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು.

ಅರಣ್ಯ ಇಲಾಖೆ, ಪ್ರಾದೇಶಿಕ ಅರಣ್ಯ ವಿಭಾಗ ಬೀದರ್ ಹಾಗೂ ಪ್ರಾದೇಶಿಕ ಅರಣ್ಯ ವಲಯ ಭಾಲ್ಕಿ ಸಹಯೋಗದಲ್ಲಿ ಭಾಲ್ಕಿಯ ಇಂಚೂರಿನಲ್ಲಿ ಏರ್ಪಡಿಸಿದ್ದ ಡಾ.ಚನ್ನಬಸವ ಪಟ್ಟದ್ದೇವರ ನೂತನ ಟ್ರೀ ಪಾರ್ಕ್ (ವೃಕ್ಷೋದ್ಯಾನ) ಉದ್ಘಾಟಿಸಿ, ಹವಾಮಾನ ವೈಪರೀತ್ಯದಿಂದ ಬಹಳಷ್ಟು ಅಪಾಯ ಎದುರಿಸುತ್ತಿದ್ದೇವೆ. ಹೆಚ್ಚೆಚ್ಚು ಸಸಿ ನೆಡುವುದರ ಮೂಲಕ ಹಸಿರು ಪ್ರದೇಶ ಹೆಚ್ಚಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ.

ವಿಶೇಷವಾಗಿ ಮಕ್ಕಳಲ್ಲಿ ಪರಿಸರ ಪ್ರೀತಿ, ಕಾಳಜಿ ಗುಣ ಬೆಳೆಸಬೇಕು. ಸಾರ್ವಜನಿಕರು ಹಾಗೂ ಶಾಲಾ ಮಕ್ಕಳಿಗಾಗಿ ಸುಸಜ್ಜಿತ ವೃಕ್ಷೋದ್ಯಾನ ನಿರ್ಮಿಸಲಾಗಿದ್ದು, ಇದರ ಪ್ರಯೋಜನ ಪಡೆಯಬೇಕು. ಮೈಸೂರಿನ ಬೃಂದಾವನ ಮಾದರಿಯಲ್ಲೇ ಇಲ್ಲಿಯೂ ಸಂಜೆ ವೇಳೆ ಸಾರ್ವಜನಿಕರನ್ನು ಸೆಳೆಯಲು ವರ್ಣರಂಜಿತ ಸಂಗೀತ ಕಾರಂಜಿ ನಿರ್ಮಿಸಲು ಅಧಿಕಾರಿಗಳಿಗೆ ತಿಳಿಸಿದ್ದೇನೆ ಎಂದರು.

ವಿಧಾನ ಪರಿಷತ್ ಸದಸ್ಯ ಎಂ.ಜಿ.ಮುಳೆ ಮಾತನಾಡಿ, ನಮ್ಮದು ಅರಣ್ಯ, ಮರ, ಮಳೆ ಕಡಿಮೆ ಇರುವ ಪ್ರದೇಶ. ಇಂತಹ ಭಾಗದಲ್ಲಿ ಟ್ರೀ ಪಾರ್ಕ್ ನಿರ್ಮಿಸಿರುವುದು ಸಂತಸದ ವಿಷಯ ಎಂದು ತಿಳಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ರಾಮಾಯಣ, ಮಹಾಭಾರತ ನಡೆದದ್ದು ಪ್ರಕೃತಿಯಲ್ಲಿ, ಬುದ್ಧನಿಗೆ ಜ್ಞಾನೋದಯ ಆಗಿದ್ದು ಮರದ ಕೆಳಗಡೆ. ಈಗ ಇಂಚೂರ್ ಗ್ರಾಮದ ಹತ್ತಿರ 13 ಎಕರೆ ಭೂಮಿಯಲ್ಲಿ ಡಾ. ಚನ್ನಬಸವ ಪಟ್ಟದ್ದೇವರ ಹೆಸರಲ್ಲಿ ವೃಕ್ಷೋದ್ಯಾನ ನಿರ್ಮಾಣ ಮಾಡಿದ್ದು ಖುಷಿಯ ವಿಚಾರ ಎಂದು ಹೇಳಿದರು.

# ತಹಶೀಲ್ದಾರ ಕಚೇರಿ ಸಭಾಭವನದಲ್ಲಿ ನಡೆದ ವಿಶ್ವಕರ್ಮ ದಿನಾಚರಣೆ



**ಅಂಕೋಲಾ, ಸೆ.18– :** ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಭವನದಲ್ಲಿ ಗುರುವಾರ ವಿಶ್ವಕರ್ಮ ದಿನಾಚರಣೆ ಆಚರಿಸಿದರು. ಶಿರಸ್ತೇದಾರ ಗಿರೀಶ ಜಾಂಬಾವಳಿಕರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬರು ಉನ್ನತ ಶಿಕ್ಷಣವನ್ನು ಪಡೆದು ಸಮಾಜಮುಖಿ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ವಿಶ್ವಕರ್ಮ ಸಮಾಜದ ಕೊಡುಗೆ ಅಪಾರವಾದದ್ದು. ಇದನ್ನು ಮುಂದುವರಿಸಿಕೊಂಡು ಹೋಗುವಂತಾಗಲಿ ಎಂದರು.

ಈ ಸಂದರ್ಭದಲ್ಲಿ ಮಹಾಕಾಳಿ ದೇವಸ್ಥಾನದ ಮಾಜಿ ಮೊಕ್ತೇಸರ ದತ್ತು ಎಂ. ಆಚಾರಿ, ವಿಶ್ವಕರ್ಮ ಸಮಾಜ ಅಭಿವೃದ್ಧಿ ಸಂಘ ಅಧ್ಯಕ್ಷ ಸಂತೋಷ ಎಸ್. ಆಚಾರಿ ಮಾತನಾಡಿದರು. ನಾಗರಾಜ ಎನ್. ಆಚಾರಿ ಉಪನ್ಯಾಸ ನೀಡಿದರು. ಮಹಾಕಾಳಿ ದೇವಸ್ಥಾನದ ಉಪ ಮೊಕ್ತೇಸರ ಪ್ರಕಾಶ ಜಿ. ಆಚಾರಿ ಇತರರು ಉಪಸ್ಥಿತರಿದ್ದರು. ವಿಶ್ವಕರ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿದರು. ಸಿಬ್ಬಂದಿ ತೇಜಸ್ ನಾಯಕ ಸಹಕರಿಸಿದರು.

### ಕಿಷ್ಕಿಂದ ವಿಶ್ವವಿದ್ಯಾಲಯದಲ್ಲಿ ಮತದಾರರ ಜಾಗೃತಿ, ನೋಂದಣಿ ಅಭಿಯಾನ

# ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿ: ಎಸ್‌ಪಿ ಡಾ.ಸುಮನ್ ಡಿ.ಪೆನ್ನೇಕರ್ ಕರೆ

**ಬಳ್ಳಾರಿ,ಸೆ.18.** 18 ವರ್ಷ ಪೂರೈಸಿದ ಅಥವಾ ಮುಂಬರುವ ಅರ್ಹತಾ ದಿನಾಂಕಕ್ಕೆ 18 ವರ್ಷ ಭರ್ತಿಯಾಗುವ ಯುವಜನರು ನಮೂನೆ–6 ಸಲ್ಲಿಸಿ ತಮ್ಮ ಹೆಸರನ್ನು ಹೊಸದಾಗಿ ಮತದಾರರ ಪಟ್ಟಿಗೆ ಸೇರಿಸಿಕೊಳ್ಳಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಬಳ್ಳಾರಿ ಇವರ ಸಹಯೋಗದೊಂದಿಗೆ ಕಿಷ್ಕಿಂದ ವಿಶ್ವವಿದ್ಯಾಲಯದ ಎಲೆಕ್ಟೋರಲ್ ಕ್ಲಬ್ ವತಿಯಿಂದ ವಿವಿಯ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಮತ್ತು ಮತದಾರರ ನೋಂದಣಿ ವಿಶೇಷ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವಜನತೆ ಹಾಗೂ ವಿದ್ಯಾರ್ಥಿಗಳಲ್ಲಿ ಮತದಾನದ ಮಹತ್ವವನ್ನು ತಿಳಿಸುವುದು ಮತ್ತು ಹೊಸ ಮತದಾರರ ನೋಂದಣಿಗೆ ಪ್ರೇರೇಪಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಎಸ್‌ಐಆರ್ ಭಾಗವಾಗಿ ನಾಗರಿಕರು ತಮ್ಮ ಮತದಾರರ ಗುರುತಿನ ಚೀಟಿಗೆ ಸಂಬಂಧಿಸಿದ ಆಕ್ಷೇಪಣೆ ಹಾಗೂ ತಿದ್ದುಪಡಿ ಮಾಡಿಸಲು ಸೆ.19 ಮತ್ತು 20 ರಂದು ಜಿಲ್ಲೆಯ ಎಲ್ಲಾ ಮತಗಟ್ಟೆ ಕೇಂದ್ರಗಳಲ್ಲಿ ಅಧಿಕಾರಿಗಳು ಹಾಜರಿರಲಿದ್ದು, ಪೂರಕ ದಾಖಲೆಗಳೊಂದಿಗೆ ಭೇಟಿ ನೀಡಬಹುದಾಗಿದೆ ಎಂದು ಹೇಳಿದರು.

ಅರ್ಹ ನಾಗರಿಕರ ಹೆಸರನ್ನು ಸೇರಿಸಲು ಮತ್ತು ದೋಷರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ವ್ಯಾಪ್ತಿಯ ಮತಗಟ್ಟೆಗಳಿಗೆ ಭೇಟಿ ನೀಡಿ, ತಮ್ಮ ಹೆಸರನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳಿದ್ದರೆ ಮಾಡಿಸಿಕೊಳ್ಳಬಹುದು ಎಂದರು.

ಮತದಾರರ ಗುರುತಿನ ಚೀಟಿಯಲ್ಲಿ ಹೆಸರು, ವಿಳಾಸ, ಭಾವಚಿತ್ರ, ಜನ್ಮದಿನಾಂಕ ತಿದ್ದುಪಡಿ ಅಥವಾ ಮತಕ್ಷೇತ್ರ ಬದಲಾವಣೆಗಾಗಿ ನಮೂನೆ–8 ಮೂಲಕ ಅರ್ಜಿ ಸಲ್ಲಿಸಬಹುದು. ಮೃತಪಟ್ಟವರ ಅಥವಾ ಶಾಶ್ವತವಾಗಿ ಸ್ಥಳಾಂತರಗೊಂಡವರ ಹೆಸರನ್ನು ತೆಗೆದುಹಾಕಲು ನಮೂನೆ–7 ಬಳಸಬಹುದು ಎಂದರು.

ಸಾರ್ವಜನಿಕರು ಕಚೇರಿಗಳಿಗೆ ಅಲೆಯದೆ ಸುಲಭವಾಗಿ ತಮ್ಮ ಮೊಬೈಲ್ ಮೂಲಕವೇ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ವೆಬ್‌ಸೈಟ್ ಇಸಿಐ.ನೆಟ್ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಮತದಾರರ ಪಟ್ಟಿಗೆ ಸಂಬಂಧಿಸಿದ ಯಾವುದೇ ಗೊಂದಲ ಅಥವಾ ಮಾಹಿತಿಗಾಗಿ ಉಚಿತ ಸಹಾಯವಾಣಿ ಸಂಖ್ಯೆ 1950 ಅನ್ನು ಸಂಪರ್ಕಿಸಬಹುದು. ಅರ್ಹ ಯುವ ಮತದಾರರು ಹಾಗೂ ಇದುವರೆಗೆ ನೋಂದಾಯಿಸಿಕೊಳ್ಳದ ನಾಗರಿಕರು ಈ ವಿಶೇಷ ಅಭಿಯಾನವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ಚುನಾವಣಾ ಆಯೋಗದ ನಿರ್ದೇಶನದಂತೆ ಅರ್ಹ ನಾಗರಿಕರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳಲು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಅಂಗವಾಗಿ ಹೊಸ ಮತದಾರರ ನೋಂದಣಿ ಹಾಗೂ ಮಾಹಿತಿ ತಿದ್ದುಪಡಿಯ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

# ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಇನ್ನೂ ಹಲವು ಕ್ಷೇತ್ರಗಳು ಹಿಂದುಳಿದಿವೆ: ಡಾ.ಸಂಗೀತಾ ಕಟ್ಟಿಮನಿ

**ಕಲಬುರಗಿ, ಸೆ. 18:** ಕಲ್ಯಾಣ ಕರ್ನಾಟಕ ಪ್ರದೇಶವು ಹಲವು ಕ್ಷೇತ್ರಗಳಲ್ಲಿ ಇಂದಿಗೂ ಹಿಂದುಳಿದ ಸ್ಥಿತಿಯಲ್ಲಿದ್ದು, ಪ್ರಾದೇಶಿಕ ಅಸಮ ತೋಲನ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ನಿರೀಕ್ಷಿತ ಮಟ್ಟದಲ್ಲಿ ಪರಿಣಾಮ ಬೀರಿಲ್ಲ ಎಂದು ಖ್ಯಾತ ಅರ್ಥಶಾಸ್ತ್ರಜ್ಞೆ ಹಾಗೂ ಗೋವಿಂದರಾವ್ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸದಸ್ಯೆ ಡಾ. ಸಂಗೀತಾ ಕಟ್ಟಿಮನಿ ಹೇಳಿದರು.

2002ರಲ್ಲಿ ನಂಜುಂಡಪ್ಪ ಸಮಿತಿ ಗುರುತಿಸಿದ್ದ ಅತ್ಯಂತ ಹಿಂದುಳಿದ ತಾಲೂಕುಗಳ ಸಂಖ್ಯೆ ಹಾಗೂ ಗೋವಿಂದರಾವ್ ಸಮಿತಿ ಗುರುತಿಸಿರುವ ತಾಲೂಕುಗಳ ಸಂಖ್ಯೆಯಲ್ಲಿ ಹೆಚ್ಚಿನ ಬದಲಾವಣೆ ಕಂಡುಬಂದಿಲ್ಲ. ನಂಜುಂಡಪ್ಪ ಸಮಿತಿಯು ಅಂದಿನ 31 ತಾಲೂಕುಗಳ ಪೈಕಿ 21 ತಾಲೂಕುಗಳನ್ನು ಅತ್ಯಂತ ಹಿಂದುಳಿದ ತಾಲೂಕುಗಳೆಂದು ಗುರುತಿಸಿತ್ತು.

ಪ್ರಸ್ತುತ ಗೋವಿಂದರಾವ್ ಸಮಿತಿಯು ಕಲ್ಯಾಣ ಕರ್ನಾಟಕದ 50 ತಾಲೂಕುಗಳ ಪೈಕಿ 39 ತಾಲೂಕುಗಳನ್ನು ಅತ್ಯಂತ ಹಿಂದುಳಿದ ತಾಲೂಕುಗಳೆಂದು ಗುರುತಿಸಿರುವುದು ಪ್ರದೇಶದ ಹಿಂದು ಳಿದ ಸ್ಥಿತಿಗೆ ಸಾಕ್ಷಿಯಾಗಿದೆ ಎಂದು ಅವರು ವಿವರಿಸಿದರು.

ಕಲ್ಯಾಣ ಕರ್ನಾಟಕವು ಚಿನ್ನ, ಯುರೇನಿಯಂ ಸೇರಿದಂತೆ ಅಪಾರ ಖನಿಜ ಸಂಪತ್ತು ಹೊಂದಿದೆ. ಬಳ್ಳಾರಿಯ ಕಬ್ಬಿಣದ ಅದಿರು, ಕಲಬುರಗಿಯ ಪೌಷ್ಟಿಕಾಂಶಯುಕ್ತ ತೊಗರಿ ಹಾಗೂ ಅವಿಭಜಿತ ರಾಯಚೂರು ಜಿಲ್ಲೆಯ ಗಂಗಾವತಿಯ ಉತ್ತಮ ಗುಣಮಟ್ಟದ ಭತ್ತದಂತಹ ಸಂಪನ್ಮೂಲಗಳಿದ್ದರೂ, ರಾಜ್ಯದ ಇತರ ಭಾಗಗಳಿಗೆ ಹೋಲಿಸಿದರೆ ಈ ಪ್ರದೇಶದ ತಲಾ ಆದಾಯ ಕಡಿಮೆಯಾಗಿದೆ ಎಂದರು.




ಇತ್ತೀಚಿನ ಎನ್‌ಎಫ್‌ಎಚ್‌ಎಸ್ ವರದಿಯ ಪ್ರಕಾರ, ಕಲ್ಯಾಣ ಕರ್ನಾಟಕದಲ್ಲಿ ಶೇ.27ರಷ್ಟು ಜನಸಂಖ್ಯೆ 15 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದಾರೆ. ಇದು ಈ ಪ್ರದೇಶದ ದೊಡ್ಡ ಯುವಶಕ್ತಿಯಾಗಿದ್ದು, ಸೂಕ್ತ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗಾವಕಾಶಗಳ ಮೂಲಕ ಯುವಜನರ ಸಾಮರ್ಥ್ಯವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ರಾಯಚೂರಿನಲ್ಲಿ 15 ವರ್ಷಕ್ಕಿಂತ ಕಡಿಮೆ ವಯಸ್ಸಿನವರ ಪ್ರಮಾಣ ಶೇ.27.8ರಷ್ಟಿದ್ದು, ನಂತರ ಕೊಪ್ಪಳ, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಗಳಿವೆ. ರಾಜ್ಯದ ಇತರ ಭಾಗಗಳಲ್ಲಿ ಜನಸಂಖ್ಯೆ ವಯೋವೃದ್ಧವಾಗುತ್ತಿರುವ ಸಂದರ್ಭ ದಲ್ಲಿ ಕಲ್ಯಾಣ ಕರ್ನಾಟಕದ ಯುವಜನತೆ ಪ್ರದೇಶದ ಆರ್ಥಿಕ ಪರಿವರ್ತನೆಗೆ ಪ್ರಮುಖ ಶಕ್ತಿಯಾಗಬಹುದು ಎಂದು ಡಾ. ಕಟ್ಟಿಮನಿ ಅಭಿಪ್ರಾಯಪಟ್ಟರು.

ಕಲ್ಯಾಣ ಕರ್ನಾಟಕದಲ್ಲಿ ಸಾಕ್ಷರತಾ ಪ್ರಮಾಣ ಗಣನೀಯವಾಗಿ ಏರಿಕೆ ಯಾಗಿದ್ದರೂ, ನಗರ ಮತ್ತು ಗ್ರಾಮೀಣ ಪ್ರದೇಶಗಳ ನಡುವಿನ ಸಾಕ್ಷರತಾ ಅಂತರ ಆತಂಕಕಾರಿ ಸಂಗತಿಯಾಗಿದೆ. ನಗರ ಪ್ರದೇಶಗಳಲ್ಲಿ ಸಾಕ್ಷರತಾ ಪ್ರಮಾಣ ಹೆಚ್ಚಾಗಿದ್ದರೆ, ಗ್ರಾಮೀಣ ಭಾಗಗಳಲ್ಲಿ ಇನ್ನೂ ಕಡಿಮೆಯಾಗಿದೆ. ಇದೇ ರೀತಿಯಲ್ಲಿ ಮೂಲಸೌಕರ್ಯ ಹಾಗೂ ಒಟ್ಟಾರೆ ಅಭಿವೃದ್ಧಿಯಲ್ಲೂ ನಗರ, ಗ್ರಾಮೀಣ ಅಂತರ ಸ್ಪಷ್ಟವಾಗಿ ಕಾಣಿಸುತ್ತಿದೆ. ದೂರದ ಗ್ರಾಮಗಳಿಗೆ ಸಮರ್ಪಕ ಸಾರಿಗೆ ಸಂಪರ್ಕ, ಉತ್ತಮ ಶಾಲಾ ಕಟ್ಟಡಗಳು ಹಾಗೂ ಅಗತ್ಯ ಮೂಲಸೌಕರ್ಯಗಳ ಕೊರತೆ ಮುಂದುವರಿದಿದೆ ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳ ಫಲಿತಾಂಶದಲ್ಲಿಯೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಹಿಂದುಳಿದಿವೆ. ಶಿಕ್ಷಕರ ಹುದ್ದೆಗಳನ್ನು ಭರಿಸದಿರುವುದು ಹಾಗೂ ಮೂಲಸೌಕರ್ಯಗಳ ಕೊರತೆ ಇದಕ್ಕೆ ಪ್ರಮುಖ ಕಾರಣಗಳಾಗಿವೆ. ಈ ಪ್ರದೇಶದಲ್ಲಿ 7,800ಕ್ಕೂ ಅಧಿಕ ಶಾಲೆಗಳಲ್ಲಿ ಒಬ್ಬರೇ ಶಿಕ್ಷಕರಿದ್ದು, ಪತ್ರಿಕಾ ವರದಿಯೊಂದರ ಪ್ರಕಾರ 255 ಶಾಲೆಗಳಲ್ಲಿ ಶಿಕ್ಷಕರೇ ಇಲ್ಲದಿರುವುದು ಶಿಕ್ಷಣ ಕ್ಷೇತ್ರದ ಗಂಭೀರ ಪರಿಸ್ಥಿತಿಯನ್ನು ತೋರಿಸುತ್ತದೆ ಎಂದು ಡಾ. ಕಟ್ಟಿಮನಿ ಹೇಳಿದರು.

ಕಲ್ಯಾಣ ಕರ್ನಾಟಕ ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳಲ್ಲಿ ಅಪೌಷ್ಟಿಕತೆಯೂ ಒಂದಾಗಿದೆ. ಇತ್ತೀಚಿನ ಎನ್‌ಎಫ್ ಎಚ್‌ಎಸ್ ವರದಿಯ ಪ್ರಕಾರ ರಾಯಚೂರು ಜಿಲ್ಲೆ ಯಲ್ಲಿ ಐದು ವರ್ಷದೊಳಗಿನ ಶೇ.46 ರಷ್ಟು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಮತ್ತು ಉದ್ಯೋಗ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಮಾತ್ರ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದು ಅವರು ಪ್ರತಿಪಾದಿಸಿದರು.

# ಸಾತನೂರು ಆರ್‌ಇಎಸ್ ಪ್ರೌಢಶಾಲೆಯಲ್ಲಿ ಇಂದು ಗುರುವಂದನಾ ಸ್ನೇಹಸಂಗಮ




**ಕನಕಪುರ, ಸೆ.18:** ಕಾಲದ ಹೆಜ್ಜೆಗಳು ಎಷ್ಟೇ ದೂರ ಸಾಗಿದರೂ, ಬಾಲ್ಯದ ಹೆಜ್ಜೆ ಗುರುತುಗಳನ್ನು ಅಳಿಸಲು ಸಾಧ್ಯವಿಲ್ಲ. ಬದುಕಿನ ಪಯಣದಲ್ಲಿ ಎಷ್ಟೇ ಎತ್ತರಕ್ಕೇರಿದರೂ, ಅಕ್ಷರ ಕಲಿಸಿದ ಗುರುಗಳ ಮುಂದೆ ಶಿಷ್ಯನ ಮನಸ್ಸು ಮಾತ್ರ ಸದಾ ಅದೇ ಶಾಲೆಯ ಅಂಗಳದಲ್ಲಿ ನಿಂತಿರುತ್ತದೆ. ಅಂತಹ ಅಪರೂಪದ ಭಾವನಾತ್ಮಕ ಕ್ಷಣವೊಂದಕ್ಕೆ ಸಾತನೂರಿನ ಆರ್‌ಇಎಸ್ ಗ್ರಾಮಾಂತರ ಪ್ರೌಢಶಾಲೆ ಸಾಕ್ಷಿಯಾಗಲಿದೆ.

1992–93ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ತಾವು ವಿದ್ಯಾಭ್ಯಾಸ ಮಾಡಿದ ಶಾಲೆಯ ಅಂಗಳದಲ್ಲಿಯೇ ಸೆ.19ರಂದು ಶನಿವಾರ ಬೆಳಗ್ಗೆ 10.30ಕ್ಕೆ ಗುರುವಂದನಾ ಹಾಗೂ ಸ್ನೇಹ ಸಂಗಮ ಕಾರ್ಯಕ್ರಮವನ್ನು ಆರ್‌ಇಎಸ್ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ದಿ. ಎಸ್. ಕರಿಯಪ್ಪ ಅವರ ಪುಣ್ಯಸ್ಮರಣೆಯೊಂದಿಗೆ ಆಯೋಜಿಸಿದ್ದಾರೆ.

ಸುಮಾರು ಮೂರು ದಶಕಗಳ ಹಿಂದಿನ ವಿದ್ಯಾರ್ಥಿ ಜೀವನದ ನೆನಪುಗಳನ್ನು ಮತ್ತೆ ಜೀವಂತಗೊಳಿಸುವ ಈ ಕಾರ್ಯಕ್ರಮ, ಗುರುಗಳಿಗೆ ಗೌರವ ಸಲ್ಲಿಸುವುದರ ಜೊತೆಗೆ ಅಂದಿನ ಸ್ನೇಹಿತರನ್ನು ಮತ್ತೊಮ್ಮೆ ಒಂದೇ ವೇದಿಕೆಗೆ ಕರೆತರುವ ಅಪರೂಪದ ಕ್ಷಣವಾಗಲಿದೆ.

**ಬೆಳ್ಳಿರಥದಲ್ಲಿ ಗುರುಗಳಿಗೆ ಸ್ವಾಗತ:**

ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ 9 ಗಂಟೆಗೆ ಸಾತನೂರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಗುರು?ಹಿರಿಯರನ್ನು ಶಾಲೆಯ ಆವರಣಕ್ಕೆ ಬೆಳ್ಳಿ ರಥದಲ್ಲಿ ಮೆರವಣಿಗೆ ಮೂಲಕ ಕರೆತರಲಾಗುತ್ತದೆ. ಒಮ್ಮೆ ತಮ್ಮ ಕೈ ಹಿಡಿದು ಅಕ್ಷರ ಲೋಕಕ್ಕೆ ಕರೆದೊಯ್ದ ಗುರುಗಳನ್ನು ಅದೇ ಶಾಲೆಯ ಹಳೆಯ ವಿದ್ಯಾರ್ಥಿಗಳು ಗೌರವಪೂರ್ವಕವಾಗಿ ಕರೆತರುವುದು ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಲಿದೆ.

ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ಗಣ್ಯರು ಕಾರ್ಯಕ್ರಮಕ್ಕೆ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ.

**ನೆನಪಾಗಿ ಉಳಿದವರಿಗೆ ನಮನ...**

ಜೀವನದ ಪಯಣದಲ್ಲಿ ಕೆಲವರು ನಮ್ಮೊಂದಿಗೆ ಸಾಗುತ್ತಾರೆ; ಇನ್ನು ಕೆಲವರು ನೆನಪಾಗಿ ಉಳಿಯುತ್ತಾರೆ. 1992–93ನೇ ಸಾಲಿನ ಈ ವಿದ್ಯಾರ್ಥಿ ಬಳಗದೊಂದಿಗೆ ಹೆಜ್ಜೆ ಹಾಕಿ ಇಂದು ಅಗಲಿರುವ ಗುರುಗಳು ಹಾಗೂ ಸ್ನೇಹಿತರನ್ನು ಕಾರ್ಯಕ್ರಮದಲ್ಲಿ ಸ್ಮರಿಸಿ ಸಂತಾಪ ಸೂಚಿಸಲಾಗುತ್ತದೆ. ಅವರ ನೆನಪುಗಳ ಮುಂದೆ ಕೆಲ ಕ್ಷಣ ಮೌನವಾಗುವ ಮೂಲಕ, ಬದುಕಿನ ಒಂದು ಅಮೂಲ್ಯ ಅಧ್ಯಾಯವನ್ನು ಮತ್ತೆ ನೆನಪಿಸಿಕೊಳ್ಳಲಾಗುತ್ತದೆ.

**ಗುರುಗಳಿಗೆ ಗೌರವ, ಶಿಷ್ಯರಿಗೆ ನೆನಪಿನ ಕಾಣಿಕೆ**

ಕಾರ್ಯಕ್ರಮದಲ್ಲಿ ಗುರು–ಹಿರಿಯರ ಹಿತವಚನಕ್ಕೆ ವಿಶೇಷ ಅವಕಾಶ ಕಲ್ಪಿಸಲಾಗಿದ್ದು, ಅಂದಿನ ಶಿಕ್ಷಕರು ತಮ್ಮ ಶಿಷ್ಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮೂರು ದಶಕಗಳ ಹಿಂದಿನ ತರಗತಿ ಕೊಠಡಿಯ ನೆನಪುಗಳು, ಶಿಕ್ಷಕರ ಬೋಧನೆಯ ಕ್ಷಣಗಳು, ವಿದ್ಯಾರ್ಥಿಗಳ ತುಂಟಾಟ, ಸ್ನೇಹಿತರ ಒಡನಾಟ ಇವೆಲ್ಲವೂ ಮಾತಿನ ರೂಪದಲ್ಲಿ ಮತ್ತೆ ಮೆಲುಕು ಹಾಕಲಿವೆ.

ತಮ್ಮ ಬದುಕಿನ ದಾರಿಗೆ ಬೆಳಕು ನೀಡಿದ ಗುರು–ಹಿರಿಯರನ್ನು ಸನ್ಮಾನಿಸಿ ಗೌರವಿಸಲಾಗುತ್ತದೆ. ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಹಿರಿಯ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ವಿತರಿಸಲಾಗುತ್ತದೆ.

ಇದು ಕೇವಲ ಸನ್ಮಾನವಲ್ಲ; ನಮ್ಮ ಬದುಕಿನಲ್ಲಿ ನಿಮ್ಮ ಪಾತ್ರವನ್ನು ನಾವು ಮರೆತಿಲ್ಲ ಎಂಬ ಶಿಷ್ಯರ ಕೃತಜ್ಞತೆಯ ಅಭಿವ್ಯಕ್ತಿಯಾಗಲಿದೆ.

**ಮೂರು ದಶಕಗಳ ನಂತರ ಮತ್ತೆ ಒಂದೇ ಅಂಗಳದಲ್ಲಿ...**

1992–93ರ ಎಸ್‌ಎಸ್‌ಎಲ್‌ಸಿ ಬ್ಯಾಚ್‌ನ ವಿದ್ಯಾರ್ಥಿಗಳು ಇಂದು ತಮ್ಮದೇ ಕುಟುಂಬ, ಉದ್ಯೋಗ, ಜವಾಬ್ದಾರಿಗಳೊಂದಿಗೆ ಬದುಕಿನ ವಿವಿಧ ದಿಕ್ಕುಗಳಲ್ಲಿ ಸಾಗುತ್ತಿದ್ದಾರೆ. ಆದರೆ ಈ ಒಂದು ದಿನ ಮಾತ್ರ ಎಲ್ಲರೂ ತಮ್ಮ ಪ್ರಸ್ತುತ ಬದುಕಿನ ಗುರುತನ್ನು ಬದಿಗಿಟ್ಟು, ಮತ್ತೆ ಅದೇ ಹಳೆಯ ಶಾಲೆಯ ವಿದ್ಯಾರ್ಥಿಗಳಾಗಿ ಒಂದಾಗಲಿದ್ದಾರೆ. ಒಮ್ಮೆ ಗಂಟೆ ಹೊಡೆಯುತ್ತಿದ್ದಂತೆ ತರಗತಿಯತ್ತ ಓಡುತ್ತಿದ್ದ ಹೆಜ್ಜೆಗಳು, ಸ್ನೇಹಿತರೊಂದಿಗೆ ಹಂಚಿಕೊಂಡ ಮಾತುಗಳು, ಪರೀಕ್ಷೆಯ ಆತಂಕ, ಶಿಕ್ಷಕರ ಪ್ರೀತಿಯ ಗದರಿಕೆ, ಶಾಲೆಯ ಅಂಗಳದಲ್ಲಿ ಕಳೆದ ಕ್ಷಣಗಳು ಎಲ್ಲವೂ ಮತ್ತೆ ಕಣ್ಣಮುಂದೆ ಸುಳಿದಾಡಲಿವೆ.

ಕಾಲ ಬದಲಾಗಿದೆ; ಮುಖಗಳಲ್ಲಿ ವಯಸ್ಸಿನ ಗೆರೆ ಮೂಡಿದೆ. ಆದರೆ ಸ್ನೇಹದ ನೆನಪುಗಳಿಗೆ ವಯಸ್ಸಾಗಿಲ್ಲ. ಗುರುಗಳ ಮೇಲಿನ ಗೌರವಕ್ಕೆ ಮುಪ್ಪಾಗಿಲ್ಲ.

**ಕುಟುಂಬ ಸಮೇತ ಬನ್ನಿ... ನೆನಪುಗಳ ಹಬ್ಬವಾಗಿಸಿ**

ಗುರುವಂದನಾ ಹಾಗೂ ಸ್ನೇಹಸಂಗಮ ಕಾರ್ಯಕ್ರಮಕ್ಕೆ 1992–93ನೇ ಸಾಲಿನ ಎಲ್ಲಾ ಹಿರಿಯ ವಿದ್ಯಾರ್ಥಿಗಳು ತಮ್ಮ ಕುಟುಂಬ ಸಮೇತರಾಗಿ ತಪ್ಪದೆ ಆಗಮಿಸಬೇಕೆಂದು ಆಯೋಜಕರು ಮನವಿ ಮಾಡಿದ್ದಾರೆ.


ಗುರುಗಳಿಗೆ ಗೌರವ ಸಲ್ಲಿಸುವ ಈ ಅಪೂರ್ವ ಸಂದರ್ಭ, ಹಳೆಯ ಸ್ನೇಹವನ್ನು ಮತ್ತೆ ಬೆಸೆಯುವ ಸೇತುವೆಯಾಗಲಿ; ಮರೆಯಲಾಗದ ಶಾಲಾ ದಿನಗಳನ್ನು ಮತ್ತೊಮ್ಮೆ ಬದುಕುವ ಸುಂದರ ಅವಕಾಶವಾಗಲಿ ಎಂಬ ಆಶಯ ಆಯೋಜಕರದ್ದಾಗಿದೆ.

**ಶಾಲೆ ಕೇವಲ ಕಟ್ಟಡವಲ್ಲ; ಅದು ಬದುಕಿನ ಮೊದಲ ಪಾಠಶಾಲೆ.**

ಗುರು ಕೇವಲ ಬೋಧಕರಲ್ಲ; ಅವರು ಬದುಕಿನ ದಾರಿದೀಪ.

ಸ್ನೇಹ ಕೇವಲ ಪರಿಚಯವಲ್ಲ; ಅದು ಕಾಲದಾಚೆಯೂ ಉಳಿಯುವ ನೆನಪು.

ಸಾತನೂರಿನ ಆರ್‌ಇಎಸ್ ಗ್ರಾಮಾಂತರ ಪ್ರೌಢಶಾಲೆಯ ಅಂಗಳದಲ್ಲಿ ಸೆ.19ರಂದು ನಡೆಯಲಿರುವ ಈ ಗುರುವಂದನಾ ಸ್ನೇಹ ಸಂಗಮ, ಹೀಗಾಗಿ ಒಂದು ಕಾರ್ಯಕ್ರಮವಾಗದೆ ಮೂರು ದಶಕಗಳ ನೆನಪುಗಳಿಗೆ ಜೀವ ತುಂಬುವ ಭಾವಗಳ ಹಬ್ಬವಾಗಲಿದೆ.



ಮೂರು ದಶಕಗಳು ಕಳೆದರೂ ನಮ್ಮ ಶಾಲಾ ದಿನಗಳ ನೆನಪುಗಳು ಮನಸ್ಸಿನಿಂದ ಮಾಸಿಲ್ಲ. ಅಂದು ಅಕ್ಷರ ಕಲಿಸಿದ ಗುರುಗಳೇ ನಮ್ಮ ಬದುಕಿನ ದಾರಿಗೆ ಬೆಳಕು ತೋರಿದವರು. ಇಂದು ಅದೇ ಗುರುಗಳ ಮುಂದೆ ಶಿಷ್ಯರಾಗಿ ನಿಂತು ಕೃತಜ್ಞತೆ ಸಲ್ಲಿಸುವ ಅವಕಾಶ ಸಿಕ್ಕಿರುವುದು ನಮ್ಮ ಪಾಲಿನ ಅಪೂರ್ವ ಭಾಗ್ಯ. ಹಳೆಯ ಸ್ನೇಹಿತರೆಲ್ಲರೂ ಒಂದೇ ಅಂಗಳದಲ್ಲಿ ಮತ್ತೆ ಸೇರುವ ಈ ಕ್ಷಣ, ನಮ್ಮ ಪಾಲಿಗೆ ಬಾಲ್ಯವನ್ನು ಮತ್ತೊಮ್ಮೆ ಬದುಕಿದಂತೆಯೇ. ಇದು ಕೇವಲ ಗುರುವಂದನೆಯಲ್ಲ; ನಮ್ಮ ಬದುಕಿನ ಬೇರುಗಳಿಗೆ ಸಲ್ಲಿಸುವ ಗೌರವ.

**–ಡಿ.ಬಿ.ಬಸವರಾಜು,**
ಶಾಲೆಯ ಹಿರಿಯ ವಿದ್ಯಾರ್ಥಿ ಹಾಗೂ ಪತ್ರಿಕೋದ್ಯಮಿ



ಸಿಎಂ ಡಿ ಕೆ ಶಿವಕುಮಾರ್ ಅವರು ಮಂಗಳೂರು ಮೂಲದ ಸಾಮಾಜಿಕ ಜಾಲತಾಣದ ಪ್ರಭಾವಿಗಳ ಜತೆ ಮಂಗಳೂರಿನ ಕೆಫೆಯಲ್ಲಿ ಶುಕ್ರವಾರ ಸಂವಾದ ನಡೆಸಿದರು.

# ಹಿಂದು ಧರ್ಮ, ಸಂಸ್ಕೃತಿ ರಕ್ಷಣೆಗೆ ಹುಲಿಯಾಗಿ

## ಹೆಣ್ಣುಮಕ್ಕಳಿಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕರೆ

**ಉಡುಪಿ, ಸೆ.18:** ಬ್ರಹ್ಮಾವರದ ವಾರಂಬಳ್ಳಿ ಫ್ರೆಂಡ್ಸ್ ಆಯೋಜಿಸಿದ್ದ ಹುಲಿವೇಷ ಸೇವಾ ಸಮಿತಿಯ ಊದು ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ "ಹಿಂದೂ ಧರ್ಮ ಮತ್ತು ಸಂಸ್ಕೃತಿಯ ರಕ್ಷಣೆಗೆ ಹಿಂದೂ ಹೆಣ್ಣುಮಕ್ಕಳು ಹುಲಿಯಾಗಬೇಕು ಹಾಗೂ ಅಗತ್ಯಬಿದ್ದರೆ ಪ್ರಾಣ ಕೊಡಲು ಸಿದ್ಧರಾಗಬೇಕು" ಎಂದು ಕರೆ ನೀಡಿದ್ದಾರೆ.

ದೇಶದಲ್ಲಿ ನಡೆಯುತ್ತಿರುವ ಪ್ರಚಲಿತ ವಿದ್ಯಮಾನಗಳ ಕುರಿತು ಆತಂಕ ವ್ಯಕ್ತಪಡಿಸಿದ ಅವರು, ಕೇರಳ, ಕಾಶ್ಮೀರ ಹಾಗೂ ಪಶ್ಚಿಮ ಬಂಗಾಳದಲ್ಲಿ ಪ್ರಸ್ತುತ ನಿರ್ಮಾಣವಾಗಿರುವ ಪರಿಸ್ಥಿತಿಯನ್ನು ಪ್ರತಿಯೊಬ್ಬರೂ ಒಮ್ಮೆ ಗಮನಿಸಬೇಕು ಎಂದು ಹೇಳಿದರು.



ನಮ್ಮ ಪುಣ್ಯ ಕ್ಷೇತ್ರಗಳು ಹಾಗೂ ಧರ್ಮಕ್ಷೇತ್ರಗಳನ್ನು ಅಪವಿತ್ರಗೊಳಿಸುವ ಮತ್ತು ಅಪಪ್ರಚಾರ ಮಾಡುವ ವ್ಯವಸ್ಥಿತ ಸಂಚು ನಡೆಯುತ್ತಿದೆ. ದೇಶ ದ್ರೋಹಿಗಳು ಹಾಗೂ ಮತಾಂತರ ಮಾಡುವ ಶಕ್ತಿಗಳು ದೊಡ್ಡಮಟ್ಟದ ಜಾಲ ಹೆಣೆದಿದ್ದು, ಧರ್ಮಸ್ಥಳವನ್ನು ಅಂತಹ ಕೃತ್ಯಗಳ ಪ್ರಯೋಗಶಾಲೆಯಾಗಿ ಮಾಡಲು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ದೇಶದಲ್ಲೆಡೆ ಲವ್ ಜಿಹಾದ್ ನಂತಹ ಕೆಟ್ಟ ಸಂಸ್ಕೃತಿ ಮತ್ತು ದೇಶದ್ರೋಹಿಗಳ ಆಟಾಟೋಪ ಹೆಚ್ಚಾಗಿದ್ದು, ಎಲ್ಲೋ ನಮ್ಮ ಧರ್ಮ ನಶಿಸಿಹೋಗುತ್ತಿದೆಯೋ ಎಂಬ ಭೀತಿ ಕಾಡುತ್ತಿದೆ ಎಂದು ಯತ್ನಾಳ್ ಕಳವಳ ವ್ಯಕ್ತಪಡಿಸಿದರು.

ಇದೇ ವೇಳೆ ಕರಾವಳಿ ಭಾಗದ ಜನರನ್ನು ಶ್ಲಾಘಿಸಿದ ಅವರು, "ಇಂದಿಗೂ ಹಿಂದುತ್ವ ಸಜೀವವಾಗಿ ಉಳಿಯಲು ಕರಾವಳಿಯ ನಿಜವಾದ ಹಿಂದೂಗಳೇ ಪ್ರಮುಖ ಕಾರಣ" ಎಂದು ಬಣ್ಣಿಸಿದರು.

# ಬಳ್ಳಾರಿಯಲ್ಲಿ ಸೆ. 20ರಂದು ಪೊಲೀಸ್ ಪೇದೆ ಲಿಖಿತ ಪರೀಕ್ಷೆ

## ಜಿಲ್ಲಾಡಳಿತದಿಂದ ಸಕಲ ಸಿದ್ಧತೆ, ಅಭ್ಯರ್ಥಿಗಳಿಗೆ ವಸತಿ ಸೌಲಭ್ಯ-ಡಿ.ಸಿ

**ಬಳ್ಳಾರಿ,ಸೆ.18.**ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ಪೊಲೀಸ್ ಕಾನ್‌ಸ್ಟೇಬಲ್ (ಕೆ.ಎಸ್.ಆರ್.ಪಿ, ಕೆ.ಎಸ್.ಐ.ಎಸ್.ಎಫ್, ಐ.ಆರ್.ಬಿ) ಹುದ್ದೆಗಳ ನೇರ ನೇಮಕಾತಿಯ ಲಿಖಿತ ಪರೀಕ್ಷೆಯು ಸೆಪ್ಟೆಂಬರ್ 20 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ನಗರದ 23 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಬಳ್ಳಾರಿ ನಗರದಲ್ಲಿ ಒಟ್ಟು 14,059 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದು, ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲು ಜಿಲ್ಲಾಡಳಿತ ವ್ಯಾಪಕ ಸಿದ್ಧತೆಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

***ಅಭ್ಯರ್ಥಿಗಳಿಗೆ ವಸತಿ ವ್ಯವಸ್ಥೆ:***

ಹೊರ ಊರುಗಳಿಂದ ಬರುವ ಅಭ್ಯರ್ಥಿಗಳ ಅನುಕೂಲಕ್ಕಾಗಿ ಸೆಪ್ಟೆಂಬರ್ 19 ರಿಂದ 20 ರವರೆಗೆ ನಗರದ ನಾಲ್ಕು ಪ್ರಮುಖ ಸ್ಥಳಗಳಲ್ಲಿ ವಸತಿ ಕಲ್ಪಿಸಲಾಗಿದೆ.

**ಮಹಿಳೆಯರಿಗೆ:** ಹೊಸಪೇಟೆ ರಸ್ತೆಯ ಡಾ. ಬಿ.ಆರ್. ಅಂಬೇಡ್ಕರ್ ಭವನ (ನೋಡಲ್ ಅಧಿಕಾರಿ: ಚಿದಾನಂದಪ್ಪ, ಮೊ: 99002 23306).

**ಪುರುಷರಿಗೆ:** ಕೌಲ್ ಬಜಾರ್‌ನ ಬಾಬು ಜಗಜೀವನ್ ರಾಮ್ ಭವನ ಮತ್ತು ವಾಲ್ಮೀಕಿ ಭವನ (ನೋಡಲ್ ಅಧಿಕಾರಿ: ಶಾಷು, ಮೊ: 9942451535); ಹಾಗೆಯೇ ಕೌಲ್ ಬಜಾರ್‌ನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಪ್ರಾದೇಶಿಕ ಕೇಂದ್ರ (ನೋಡಲ್ ಅಧಿಕಾರಿ: ನಾಗೇಶ್, ಮೊ: 9986696487).

***ಅಭ್ಯರ್ಥಿಗಳಿಗೆ ಸೂಚನೆಗಳು ಹಾಗೂ ನಿಯಮಗಳು:***

ಮುಂಚಿತವಾಗಿ ಹಾಜರಾತಿ: ಪರೀಕ್ಷಾ ಕೇಂದ್ರಗಳಿಗೆ ಪರೀಕ್ಷೆ ಆರಂಭವಾಗುವ 2 ಗಂಟೆಗಳ ಮುಂಚಿತವಾಗಿಯೇ ಹಾಜರಾಗಬೇಕು. ಪ್ರವೇಶ ಪತ್ರದೊಂದಿಗೆ ಭಾವಚಿತ್ರವಿರುವ ಅಧಿಕೃತ ಗುರುತಿನ ಚೀಟಿ (ಆಧಾರ್ ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ) ತರುವುದು ಕಡ್ಡಾಯ.

**200 ಮೀಟರ್ ನಿರ್ಬಂಧಿತ ಪ್ರದೇಶ:**



ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಲಾಗಿದ್ದು, ಜೆರಾಕ್ಸ್ ಹಾಗೂ ಇಂಟರ್ನೆಟ್ ಕೆಫೆಗಳನ್ನು ಮುಚ್ಚಲು ಆದೇಶಿಸಲಾಗಿದೆ.

ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ: ಪರೀಕ್ಷೆಗೆ ಸಂಬಂಧಿಸಿದಂತೆ ಸುಳ್ಳು ಸುದ್ದಿ ಅಥವಾ ವದಂತಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು 100ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಸಾಮಾಜಿಕ ಜಾಲತಾಣಗಳ ಮೇಲೆ ತೀವ್ರ ನಿಗಾ ಇರಿಸಿದ್ದಾರೆ.

***ಕೈಗೊಂಡ ಮುಂಜಾಗ್ರತಾ ಕ್ರಮಗಳು:***

ಪರೀಕ್ಷಾ ಗೌಪ್ಯ ಸಾಮಗ್ರಿಗಳ ರಕ್ಷಣೆಗಾಗಿ ಜಿಲ್ಲಾ ಖಜಾನೆಯ ಒಳಗೆ ಮತ್ತು ಹೊರಗೆ 24/7 ಸಿಸಿಟಿವಿ ಕಣ್ಗಾವಲು ಹಾಗೂ ಬಿಗಿ ಪೊಲೀಸ್ ಭದ್ರತೆ ಏರ್ಪಡಿಸಲಾಗಿದೆ. ಪ್ರಶ್ನೆಪತ್ರಿಕೆ ವಿತರಣೆಗೆ ತ್ರಿಸದಸ್ಯ ಮಾರ್ಗಾಧಿಕಾರಿಗಳ 5 ತಂಡಗಳನ್ನು ಮತ್ತು ಪ್ರತಿ ಕೇಂದ್ರಕ್ಕೆ ಒಬ್ಬ ವೀಕ್ಷಕರನ್ನು ನೇಮಿಸಲಾಗಿದೆ.

ಅಭ್ಯರ್ಥಿಗಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಲಾಗಿದ್ದು, ಜೆಸ್ಕಾಂ ವತಿಯಿಂದ ತಡೆರಹಿತ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಲಾಗಿದೆ.

ಪ್ರತಿಯೊಂದು ಕೇಂದ್ರದಲ್ಲಿ ಆರೋಗ್ಯ ಇಲಾಖೆಯಿಂದ ಥರ್ಮಲ್ ಸ್ಕ್ಯಾನರ್, ಪಲ್ಸ್ ಆಕ್ಸಿಮೀಟರ್ ಮತ್ತು ಪ್ರಥಮ ಚಿಕಿತ್ಸಾ ಪೆಟ್ಟಿಗೆಯೊಂದಿಗೆ ಇಬ್ಬರು ಅರೆ ವೈದ್ಯಕೀಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

# ಧರ್ಮವೇ ನಮ್ಮ ಬದುಕಿನ ದಾರಿ : ಶ್ರೀ ರಂಭಾಪುರಿ ಜಗದ್ಗುರುಗಳು

**ಹರಪನಹಳ್ಳಿ,ಸೆ.18–**ಮಾನವ ಜೀವನದ ಉಜ್ವಲ ಭವಿಷ್ಯಕ್ಕೆ ಗುರು ಪರಂಪರೆ ಮುಖ್ಯ. ಧರ್ಮ ನಮ್ಮ ಬದುಕಿನ ದಾರಿಯಾದರೆ ಸಂಸ್ಕೃತಿ ನಮ್ಮ ಶಕ್ತಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಶ್ರೀ ಗುರು ಮಧ್ವ ಮಂಟಪದಲ್ಲಿ ನಡೆದ ಜನಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮವು ಮನುಷ್ಯನಿಗೆ ಸತ್ಯ ನೀತಿ ಸಂಯಮ ಸದಾಚಾರದ ಮಾರ್ಗವನ್ನು ತೋರಿಸುತ್ತದೆ. ಗುರು ಸಂತರ ಮಾರ್ಗದರ್ಶನದಲ್ಲಿ ನಡೆಯುವ ಇಂತಹ ಸಮಾರಂಭಗಳು ಸಮಾಜದಲ್ಲಿ ಭಕ್ತಿ ಮತ್ತು ಧಾರ್ಮಿಕ ಪ್ರಜ್ಞೆಯ ಜೊತೆಗೆ ಪರಸ್ಪರ ಪ್ರೀತಿ ಸೌಹಾರ್ದ ಹಾಗೂ ಸಹೋದರತ್ವವನ್ನು ಬೆಳೆಸುತ್ತವೆ. ಮಕ್ಕಳಲ್ಲಿ ಸಂಸ್ಕಾರ ಯುವ ಜನರಲ್ಲಿ ಧರ್ಮ ಪ್ರಜ್ಞೆ ಸಮಾಜದಲ್ಲಿ ಒಗ್ಗಟ್ಟು ಮೂಡಿಸುವ ಮಹತ್ಕಾರ್ಯವನ್ನು ಶ್ರೀ ರಂಭಾಪುರಿ ಪೀಠ ಮಾಡುವ ಸಂಕಲ್ಪ ಹೊಂದಿದೆ.



ಸಕಲ ಜೀವಾತ್ಮರಿಗೆ ಒಳಿತು ಬಯಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಸಂದೇಶಗಳು ಎಲ್ಲ ಕಾಲಕ್ಕೂ ಎಲ್ಲರಿಗೂ ಅನ್ವಯಿಸುತ್ತವೆ. ಪಿ.ಕೆ.ಎಂ.ಪ್ರಶಾಂತ ಅವರ ಧರ್ಮ ನಿಷ್ಠೆ–ಶ್ರದ್ಧೆ ಮತ್ತು ಗುರುಭಕ್ತಿ ಇನ್ನಿತರರಿಗೆ ಮಾದರಿಯಾಗಿದೆ ಎಂದರು.

ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಬದುಕಿ ಬಾಳುವ ಜನಾಂಗಕ್ಕೆ ಧರ್ಮ ದಾರಿದೀಪ. ಆಧುನಿಕತೆಯ ಹೆಸರಿನಲ್ಲಿ ನಮ್ಮ ಸಂಸ್ಕೃತಿ ಕಲುಷಿತಗೊಳ್ಳಬಾರದೆಂದರು. ಹಂಪಸಾಗರ ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಗುರುವಿನ ಜ್ಞಾನಾಮೃತದಿಂದ ಜೀವನ ಪಾವನಗೊಳ್ಳುತ್ತದೆ. ತ್ರಿಗುಣಾತೀತನಾದ ಗುರುವಿನ ಕಾರುಣ್ಯ ದೊಡ್ಡದು. ಗುರು ಮತ್ತು ಗುರಿ ಹೊಂದಿ ಜೀವನ ಸಾಗಿಸಿದರೆ ಬಾಳು ಉಜ್ವಲಗೊಳ್ಳುತ್ತದೆ ಎಂದರು. ಪಿ.ಕೆ.ಎಂ.ನಾಗಲಿಂಗಯ್ಯ, ಪಿ.ಕೆ.ಎಂ.ಶಂಭುಲಿಂಗಯ್ಯ, ಶ್ರೀಮತಿ ಗಿರಿಜಮ್ಮ ಚನ್ನವೀರಯ್ಯ ಉಪಸ್ಥಿತರಿದ್ದರು. ಡಾ.ಪಿ.ಕೆ.ಎಂ.ಪ್ರಶಾಂತ ಅವರು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಎಂ.ಪಿ.ಎಂ. ಶಾಂತ ವೀರಯ್ಯನವರು ನಿರೂಪಿಸಿದರು.

# ವಿಶ್ವಕರ್ಮರ ಆದರ್ಶ ಅಳವಡಿಸಿಕೊಂಡಾಗ ಜಯಂತಿ ಆಚರಣೆಗೆ ಅರ್ಥ: ವಿಶ್ವನಾಥ



**ರಾಯಚೂರು, ಸೆ. 18:** ವಿಶ್ವಕರ್ಮರ ಆದರ್ಶವನ್ನು ಅಳವಡಿಸಿಕೊಂಡು, ಮಾನವೀಯ ಮೌಲ್ಯಗಳೊಂದಿಗೆ ಬದುಕಿದರೆ ಮಾತ್ರ ಜಯಂತಿಗಳ ಆಚರಣೆಗೆ ಅರ್ಥ ಬರುತ್ತದೆ ಎಂದು ಉಪನ್ಯಾಸಕ ವಿಶ್ವನಾಥ ಎಸ್. ಪತ್ತಾರ ಗುಡಿಹಾಳ ಹೇಳಿದರು.

ಬುದ್ಧಿವಂತಿಕೆ, ದೂರದೃಷ್ಟಿ ಹಾಗೂ ಕೌಶಲಗಳನ್ನು ಹೊಂದಿರುವ ವಿಶ್ವಕರ್ಮ ಸಮಾಜದವರು ಹುಟ್ಟು ತಂತ್ರಜ್ಞರಾಗಿದ್ದಾರೆ. ನಿರಂತರ ಸಾಮಾಜಿಕ ಸೇವೆಯಲ್ಲಿ ನಿರತರಾದ ಈ ಸಮುದಾಯದವರು ಶೈಕ್ಷಣಿಕ, ಆರ್ಥಿಕ, ರಾಜಕೀಯ ಸೇರಿದಂತೆ ಎಲ್ಲ ರಂಗದಲ್ಲಿಯೂ ಸಬಲರಾಗಬೇಕು. ವಿಶ್ವಕರ್ಮ ಎನ್ನುವುದು ಕೇವಲ ಒಂದು ಸಮುದಾಯವಲ್ಲ, ಅದೊಂದು ಸೃಷ್ಟಿಶೀಲ ಸಂಸ್ಕೃತಿ ಮತ್ತು ಜ್ಞಾನ ಪರಂಪರೆ.ಸದ್ಯೋಜಾತ, ವಾಮದೇವ, ಅಘೋರ, ತತ್ಪುರುಷ ಹಾಗೂ ಈಶಾನ ಎಂಬ ಪಂಚಮುಖಗಳಿಂದ ಉದ್ಭವಿಸಿದ ಸೃಷ್ಟಿಯ ಮೂಲಶಕ್ತಿ ವಿಶ್ವಕರ್ಮ. ಈ ಜಯಂತಿಯು ಕ್ಯಾಲೆಂಡರ್ ದಿನಾಂಕ ಆಧಾರಿತವಲ್ಲ, ಪಂಚಾಂಗದ ಕನ್ಯಾ ಸಂಕ್ರಮಣದ ನಿಮಿತ್ತ ನಡೆಯುವ ಖಗೋಳಾಧಾರಿತ ಆಚರಣೆಯಾಗಿದೆ ಎಂದು ಹೇಳಿದರು.

ಪತ್ರಕರ್ತ ಮಾರುತಿ ಬಡಿಗೇರ, ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಉದಯಕುಮಾರ ಪತ್ತಾರ ಮಾತನಾಡಿದರು.

ದೇವದುರ್ಗದ ಶ್ರೀಮದ್ ಆನೆಗೊಂದಿ ಮೂಲ ಸಂಸ್ಥಾನ ಸರಸ್ವತಿ ಪೀಠದ ಮೌನೇಶ್ವರ ಸ್ವಾಮಿ, ಶಿವಜವಳಗೇರಾ ಶ್ರೀಮದ್ ಆನೆಗೊಂದಿ ಮಹಾಸಂಸ್ಥಾನ ವಿಶ್ವಕರ್ಮ ಏಕದಂಡಿಗಿ ಮಠದ ಸೂರ್ಯ ನಾರಾಯಣ ಸ್ವಾಮಿ, ಮಹಾನಗರ ಪಾಲಿಕೆಯ ವ್ಯವಸ್ಥಾಪಕ ರಾಜು, ಗ್ರೇಡ್–2 ತಹಶೀಲ್ದಾರ್ ಪರಶುರಾಮ, ಅಂಬಾರಾಯ ಕೆ. ನಂಜುಂಡಾಚಾರಿ ಗಾಣಧಾಳ, ಬ್ರಹ್ಮಣ್ಯಗೌಡ ನಿಕೇತನ, ಡಿ.ವೆಂಕಟೇಶ, ಮನೋಹರ ವೈ. ಪತ್ತಾರ, ಬ್ರಹ್ಮಯ್ಯ ಪತ್ತಾರ ಕಲ್ಲೂರು, ಕೆ.ಶೇಷ ಲಕ್ಷ್ಮೀಪತಿ ಯರಗೇರಾ, ಎಂ.ಕೆ. ಹರಿನಾಥ ಕೆ. ಸರಸ್ವತಿ, ಮಂಜುನಾಥ ವಿಶ್ವಕರ್ಮ, ಈರಣ್ಣ ವಡಿಗೇರ ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಉಪಸ್ಥಿತರಿದ್ದರು. ಕೆ.ರಾಮು ಗಾಣಧಾಳ ಸ್ವಾಗತಿಸಿದರು. ರೇಖಾ ಪಾಟೀಲ ನಿರೂಪಿಸಿದರು.

**ಮೆರವಣಿಗೆ:** ವಿಶ್ವಕರ್ಮ ಜಯಂತಿ ಅಂಗವಾಗಿ ನಗರದ ಆಕಾಶವಾಣಿ ಹತ್ತಿರದ ವಿಶ್ವಕರ್ಮ ವೃತ್ತಕ್ಕೆ ಪೂಜೆ ಸಲ್ಲಿಸಿ, ನೇತಾಜಿ ವೃತ್ತ, ತೀನ್ ಕಂದೀಲ್, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ರಂಗಮಂದಿರದ ವರೆಗೆ ವಿಶ್ವಕರ್ಮರ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಯಿತು. ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ವಿವಿಧ ಗಣ್ಯರು ಮೆರವಣಿಗೆಗೆ ಚಾಲನೆ ನೀಡಿದರು.

# ಮಂಗಳೂರಿನಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸಿ ಮುಖ್ಯಮಂತ್ರಿಗೆ ವಕೀಲರ ನಿಯೋಗ ಮನವಿ

**ಮಂಗಳೂರು, ಸೆ.18:** ಕರಾವಳಿ ಭಾಗದ ಜನರಿಗೆ ತ್ವರಿತ ಹಾಗೂ ಸುಲಭವಾಗಿ ನ್ಯಾಯ ಸಿಗುವಂತಾಗಲು ಧಾರವಾಡ ಮತ್ತು ಕಲಬುರಗಿ ಮಾದರಿಯಲ್ಲೇ ಮಂಗಳೂರಿನಲ್ಲೂ ಹೈಕೋರ್ಟ್‌ನ ಶಾಶ್ವತ ಅಥವಾ ಸರ್ಕ್ಯೂಟ್ ಪೀಠ ಸ್ಥಾಪನೆ ಮಾಡಬೇಕು ಎಂದು ಮಂಗಳೂರಿನ ವಕೀಲರ ನಿಯೋಗ ಸರ್ಕಾರವನ್ನು ಒತ್ತಾಯಿಸಿದೆ.

ವಿಶೇಷ ಸಚಿವ ಸಂಪುಟ ಸಭೆಯ ವೇಳೆ ವಕೀಲರ ನಿಯೋಗವು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿ ತಮ್ಮ ಬೇಡಿಕೆಗಳ ಕುರಿತು ಸಮಾ ಲೋಚನೆ ನಡೆಸಿತು.

ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಕಾನೂನು ಘಟಕದ ಅಧ್ಯಕ್ಷ ಹಾಗೂ ವಕೀಲರ ಸಂಘದ ಮಾಜಿ ಉಪಾಧ್ಯಕ್ಷ ಮನೋರಾಜ್ ರಾಜೀವ್ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿಯಾದ ನಿಯೋಗ, ದಶಕಗಳಿಂದ ಕರಾವಳಿಯಲ್ಲಿ ಹೈಕೋರ್ಟ್ ಪೀಠಕ್ಕಾಗಿ ಹೋರಾಟ ನಡೆಯುತ್ತಿದ್ದರೂ ಸೂಕ್ತ ಸ್ಪಂದನೆ ಸಿಕ್ಕಿಲ್ಲ ಎಂದು ಗಮನ ಸೆಳೆಯಿತು.

ಮಂಗಳೂರಿನಲ್ಲಿ ಪೀಠ ಸ್ಥಾಪನೆಗೆ ರಾಜ್ಯ ಸಚಿವ ಸಂಪುಟದ ಅಧಿಕೃತ ಅನುಮೋದನೆ ದೊರಕಿಸಿ ಕೊಡಬೇಕು ಹಾಗೂ ಅಗತ್ಯ ನ್ಯಾಯಾಂಗ ಮೂಲಸೌಕರ್ಯ ನಿರ್ಮಾಣಕ್ಕೆ ತಕ್ಷಣವೇ ಅನುದಾನ ಒದಗಿಸಬೇಕು ಎಂದು ನಿಯೋಗ ಮನವಿ ಮಾಡಿತು.

ಇದರೊಂದಿಗೆ ಮಂಗಳೂರು, ಬಂಟ್ವಾಳ ಹಾಗೂ ಬೆಳ್ತಂಗಡಿ ಭಾಗಗಳಲ್ಲಿ ಅರ್ಧಕ್ಕೆ ನಿಂತಿರುವ ನ್ಯಾಯಾಲಯ ಕಟ್ಟಡ ಕಾಮಗಾರಿ ಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಅನುದಾನ ಬಿಡುಗಡೆ ಮಾಡು ವಂತೆಯೂ ಕೋರಿತು. ದಕ್ಷಿಣ ಕನ್ನಡ ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲೂ ವಕೀಲರಿಗೆ ರಿಯಾಯಿತಿ ದರದಲ್ಲಿ ನಿವೇಶನ ಕಲ್ಪಿಸಲು ಸೂಕ್ತ ಸರ್ಕಾರಿ ಜಮೀನು ಮಂಜೂರು ಮಾಡಬೇಕು ಎಂದು ನಿಯೋಗ ಪ್ರತ್ಯೇಕ ಮನವಿ ಸಲ್ಲಿಸಿತು.

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿಯಾದ ಸಂದರ್ಭದಲ್ಲಿ, ಮಂಗಳೂರು ಕೇಂದ್ರ ಕಾರಾಗೃಹದಲ್ಲಿ ಅಳವಡಿಸಲಾಗಿ ರುವ ಮೊಬೈಲ್ ಜಾಮರ್‌ಗಳಿಂದಾಗಿ ಸುತ್ತಮುತ್ತಲಿನ ಸಾರ್ವಜನಿಕರಿಗೆ ನಿರಂತರವಾಗಿ ಎದುರಾಗುತ್ತಿರುವ ಮೊಬೈಲ್ ನೆಟ್‌ವರ್ಕ್ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಒತ್ತಾಯಿಸ ಲಾಯಿತು.

ಮನವಿ ಸ್ವೀಕರಿಸಿದ ಮುಖ್ಯಮಂತ್ರಿ ಗಳು ಹಾಗೂ ಗೃಹ ಸಚಿವರು, ಕರಾವಳಿ ಭಾಗದ ವಕೀಲರ ದೀರ್ಘಕಾಲದ ಬೇಡಿಕೆಗಳನ್ನು ಪರಿಶೀಲಿಸಿ ಶೀಘ್ರವೇ ಸೂಕ್ತ ನಿರ್ಧಾರ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ನಿಯೋಗದ ಮುಖಂಡ ಮನೋರಾಜ್ ರಾಜೀವ್ ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ಅಶ್ವಿನಿ ಕುಮಾರ್ ರೈ, ಸುರೇಶ್ ನಾವೂರ್, ಅರುಣ್ ಬಿ.ಪಿ., ವಿನೋದರ್ ಪೂಜಾರಿ ಹಾಗೂ ಪ್ರವೀಣ್ ಕುಮಾರ್ ಅಡ್ಯಾರ್ ಉಪಸ್ಥಿತರಿದ್ದರು.

## ರಕ್ತದಾನ ಮತ್ತೊಬ್ಬರ ಜೀವ ಉಳಿಸಲು ಸಹಕಾರಿ

# ಮೋದಿ ಹುಟ್ಟುಹಬ್ಬ: ರಕ್ತದಾನ ಮಾಡಿದ ಮಾಜಿ ಶಾಸಕ ಸೋಮಶೇಖರರೆಡ್ಡಿ


**ಬಳ್ಳಾರಿ, ಸೆ.18:**ಬಳ್ಳಾರಿ ನಗರದ ತಾಳೂರು ರಸ್ತೆಯ ಗೋವಿಂದಪ್ಪ ಕಲ್ಯಾಣ ಮಂಟಪದಲ್ಲಿ ಭಾರತೀಯ ಜನತಾ ಪಕ್ಷದ ನಗರ ಮಂಡಲ ದಿಂದ ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಆಯೋಜಿಸಲಾಗಿದ್ದ ಸೇವಾ ಸಂಕಲ್ಪ ಅಭಿಯಾನದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ರಕ್ತದಾನದ ಮಹತ್ವವನ್ನು ಸಾರುವ ಮೂಲಕ, ಸ್ವತಃ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ರಕ್ತದಾನ ಮಾಡಿ ಸಾಮಾಜಿಕ ಸೇವಾ ಕಾರ್ಯದಲ್ಲಿ ಕೈಜೋಡಿಸಿದರು.



ರಕ್ತದಾನವು ಮಹಾದಾನವಾಗಿದ್ದು, ಅಗತ್ಯವಿರುವ ಮತ್ತೊಬ್ಬರ ಜೀವ ಉಳಿಸಲು ಇದು ನೆರವಾಗಬಹುದು ಎಂಬ ಸದುದ್ದೇಶದಿಂದ ಈ ಸೇವಾ ಕಾರ್ಯದಲ್ಲಿ ಭಾಗಿಯಾಗಿದ್ದು ನನಗೆ ಸಂತಸ ತಂದಿದೆ ಎಂದರು.







# ಖೋ-ಖೋ ಕ್ರೀಡೆಯಲ್ಲಿ ತೊರನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಮಟ್ಟಕ್ಕೆ ಆಯ್ಕೆ





**ಮಾಲೂರು, ಸೆ.18:** ತಾಲೂಕಿನ ಕಸಬಾ ಹೋಬಳಿಯ ತೊರನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ತಾಲೂಕು ಮಟ್ಟದ ಖೋ–ಖೋ ಸ್ಪರ್ಧೆಯಲ್ಲಿ ಶಾಲೆಯ ಬಾಲಕರ ಹಾಗೂ ಬಾಲಕಿಯರ ತಂಡಗಳು ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿವೆ. ಇದೇ ವೇಳೆ ಶಾಲೆಯ ವಿದ್ಯಾರ್ಥಿನಿ ಭುವನಶ್ರೀ ಟಿ.ಎಸ್. ಅವರು 200 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಬಡ್ತಿ ಮುಖ್ಯೋಪಾಧ್ಯಾಯಿನಿ ರಾಜೇಶ್ವರಿ1 ಅವರು ಅಭಿನಂದನೆ ಸಲ್ಲಿಸಿದ್ದು, ಜಿಲ್ಲಾಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡಿ ಶಾಲೆಯ ಕೀರ್ತಿಯನ್ನು ಹೆಚ್ಚಿಸುವಂತೆ ಶುಭ ಹಾರೈಸಿದ್ದಾರೆ.

ತರಬೇತಿ ನೀಡಿದ ದೈಹಿಕ ಶಿಕ್ಷಣ ಶಿಕ್ಷಕರಾದ ಶಿವಲಿಂಗಪ್ಪ, ವಿ. ನಾರಾಯಣಸ್ವಾಮಿ, ನಟರಾಜ್ ಹಾಗೂ ಸಹ ಶಿಕ್ಷಕರಾದ ಶ್ವೇತಾ, ಗಾಯತ್ರಿ, ಕಾವ್ಯ, ಭಾಗ್ಯವತಿ, ಟಿ.ಎಂ. ವೆಂಕಟೇಶ್, ಶೈಲಜಾ, ದಾಕ್ಷಾಯಿಣಿ, ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು ಹಾಗೂ ಊರಿನ ಹಳೇ ವಿದ್ಯಾರ್ಥಿಗಳ ಪ್ರೋತ್ಸಾಹದಿಂದ ಇಷ್ಟೊಂದು ಸ್ಪರ್ಧೆಗಳಲ್ಲಿ ಗೆಲ್ಲಲು ಕಾರಣ ಎಂದು ತಿಳಿಸಿದರು.

# ನಮಾಜ್ ವೇಳೆ ಪಾಕಿಸ್ತಾನದ ಮಸೀದಿಯಲ್ಲಿ ಭಾರಿ ಸ್ಫೋಟ!



**ಇಸ್ಲಾಮಾಬಾದ್, ಸೆ.18:** ಖೈಬರ್ ಪಖ್ತುಂಕ್ವಾದ ಕೊಹಟ್ ಜಿಲ್ಲೆಯಲ್ಲಿರೋ ಮಸೀದಿಯಲ್ಲಿ ಪ್ರಾರ್ಥನೆ ವೇಳೆ ಭೀಕರ ಸ್ಫೋಟ ಸಂಭವಿಸಿದ್ದು, ಕನಿಷ್ಠ 16 ಮಂದಿ ಸಾವನ್ನಪ್ಪಿದ್ದಾರೆ.

ಖೈಬರ್ ಪಖ್ತುಂಕ್ವಾದಲ್ಲಿರೋ ಪೊಲೀಸ್ ಲೈನ್ಸ್ ಬಳಿಯ ಮಸೀದಿಯಲ್ಲಿ ಶುಕ್ರವಾರ ಪ್ರಾರ್ಥನೆ ವೇಳೆ ಸ್ಫೋಟ ಸಂಭವಿಸಿದೆ.

ಪ್ರಬಲ ಸ್ಫೋಟದಲ್ಲಿ ಹಲವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಈ ಬೆನ್ನಲ್ಲೇ ಸ್ಫೋಟದ ತೀವ್ರತೆಯನ್ನು ತೋರಿಸುವ ಹಲವಾರು ವಿಡಿಯೋಗಳು ಹಾಗೂ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ. ಸ್ಫೋಟ ಸಂಭವಿಸಿದ ಬೆನ್ನಲ್ಲೇ ಸ್ಥಳೀಯರು ಕೂಡ ನೆರವಿಗೆ ಧಾವಿಸಿರೋದು ವಿಡಿಯೋದಲ್ಲಿ ಕಂಡುಬಂದಿದೆ.

ಈಗಾಗಲೇ ಸ್ಥಳೀಯ ಆಡಳಿತ ಮತ್ತು ಪೊಲೀಸರನ್ನೊಳಗೊಂಡ ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿದ್ದು, ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಪರಿಸ್ಥಿತಿಯನ್ನ ಅವಲೋಕಿಸುತ್ತಿದ್ದು, ಗಾಯಾಳುಗಳನ್ನ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ ಎಂದು 'ರೆಸ್ಕ್ಯೂ 1122 ಖೈಬರ್ ಪಖ್ತುಂಕ್ವಾ'ದ ವಕ್ತಾರ ಬಿಲಾಲ್ ಅಹ್ಮದ್ ಫೈಜಿ ತಿಳಿಸಿದ್ದಾರೆ.

ಸದ್ಯಕ್ಕೆ ಯಾವುದೇ ಗುಂಪು ಈ ದಾಳಿಯ ಹೊಣೆ ಹೊತ್ತುಕೊಂಡಿಲ್ಲ. ಆದರೆ, ಇದು 'ಇತ್ತೆಹಾದ್–ಉಲ್–ಮುಜಾಹಿದೀನ್ ಪಾಕಿಸ್ತಾನ' ನಡೆಸಿದ ಆತ್ಮಹತ್ಯಾ ಬಾಂಬ್ ದಾಳಿ ಇರಬೇಕು ಅನ್ನೋದು ಮೇಲ್ನೋಟಕ್ಕೆ ಕಂಡುಬಂದಿದೆ.

ಕಳೆದ ವರ್ಷದ ಏಪ್ರಿಲ್‌ನಲ್ಲಿ ರಚನೆಯಾದ ಈ ಉಗ್ರ ಸಂಘಟನೆಯು ಪಾಕಿಸ್ತಾನದ ಭದ್ರತಾ ಪಡೆಗಳ ವಿರುದ್ಧ ಸಮರ ಸಾರಿದೆ. 'ತೆಹ್ರೀಕ್–ಎ–ತಾಲೀಬಾನ್ ಪಾಕಿಸ್ತಾನ' (ಖಿಖಿಕ) ದ ಪ್ರತಿಸ್ಪರ್ಧಿಯಾಗಿದೆ.